22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 303 | ನವದೆಹಲಿ | ಬೆಲೆ ₹ 10 | ಮೇ 9, 2025, ಶುಕ್ರವಾರ

## ಒಳಪುಟಗಳಲ್ಲಿ


ಜಿಯೋ ಸ್ಟುಡಿಯೋಸ್ ಆಪರೇಷನ್ ಸಿಂದೂರ್ ಟ್ರೇಡ್‌ಮಾರ್ಕ್ ಅರ್ಜಿ ವಾಪಸ್ – ಪು.4

ಚರಂಡಿ, ಯುಜಿಡಿ ನೀರಿನಿಂದಲೇ ತರಕಾರಿ ಬೆಳೆ: ಕಣ್ಣು ಮುಚ್ಚಿ ಕುಳಿತ ಆಡಳಿತ– ಸಾರ್ವಜನಿಕರಿಂದ ಆಕ್ರೋಶ – ಪು.6


## ಜನಾರ್ದನ ರೆಡ್ಡಿ ಅಪರಾಧ ಸಾಬೀತು: ಶಾಸಕ ಸ್ಥಾನದಿಂದ ಅನರ್ಹ ವಿಧಾನಸಭೆ ಕಾರ್ಯದರ್ಶಿ ಆದೇಶ



ಬೆಂಗಳೂರು, ಮೇ 08: ಓಬಳಾಪುರಂ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಶಾಸಕ ಗಾಲಿ ಜನಾರ್ದನ ರೆಡ್ಡಿಗೆ ಸಿಬಿಐ ವಿಶೇಷ ನ್ಯಾಯಾಲಯ ಏಳು ವರ್ಷಗಳ ಜೈಲು ಶಿಕ್ಷೆ ವಿಧಿಸಿದ ಹಿನ್ನೆಲೆಯಲ್ಲಿ, ವಿಧಾನಸಭೆಯ ಶಾಸಕ ಸ್ಥಾನದಿಂದ ಅನರ್ಹಗೊಳಿಸಿ ವಿಧಾನಸಭೆ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಆದೇಶ ಹೊರಡಿಸಿದ್ದಾರೆ. ಮೇ 6 ರಿಂದ ಅನ್ವಯವಾಗುವಂತೆ ಶಾಸಕ ಸ್ಥಾನದಿಂದ ಅನರ್ಹಗೊಳಿಸಲಾಗಿದೆ.

ವಿಧಾನಸಭೆ ಕಾರ್ಯದರ್ಶಿಯವರ ಆದೇಶದ ಪ್ರಕಾರ, ಗಾಲಿ ಜನಾರ್ದನ ರೆಡ್ಡಿ ಅವರು ಮುಂದಿನ ಆರು ವರ್ಷಗಳ ಕಾಲ ಶಾಸಕತ್ವಕ್ಕೆ ಅನರ್ಹರಾಗಿದ್ದಾರೆ. ಈ ಆದೇಶದಿಂದ ಸದ್ಯಕ್ಕೆ ವಿಧಾನಸಭೆಯ ಒಂದು ಸ್ಥಾನ ಖಾಲಿಯಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ. (2ನೆ ಪುಟಕ್ಕೆ)

# ಪಾಕ್ ಮೇಲೆ ಐಎನ್‌ಎಸ್ ವಿಕ್ರಾಂತ್ ಮೂಲಕ ಭಾರತ ದಾಳಿ



**ಭಾರತೀಯ ನೌಕಾಪಡೆಯು ಐಎನ್‌ಎಸ್ ವಿಕ್ರಾಂತ್ ನಿಂದ MAG-29 ಅನ್ನು ಬಳಸಿಕೊಂಡು ಪಾಕಿಸ್ತಾನದ ನೌಕಾ ನೆಲೆಯ ಮೇಲೆ ದಾಳಿ ಮಾಡಿತು, ಅರೇಬಿಯನ್ ಸಮುದ್ರದಿಂದ ಪ್ರಬಲ ದಾಳಿಯನ್ನು ಪ್ರಾರಂಭಿಸಿತು, ಪಾಕಿಸ್ತಾನದ ಅತ್ಯಂತ ಕಾರ್ಯತಂತ್ರದ ಸ್ಥಳಗಳಲ್ಲಿ ಒಂದಾದ ಕರಾಚಿ ಬಂದರನ್ನು ಗುರಿಯಾಗಿಸಿ ಕೊಂಡಿತು.**

ಭಾರತೀಯ ವಾಯುಪಡೆಯ ನಂತರ, ಅರೇಬಿಯನ್ ಸಮುದ್ರದಲ್ಲಿ ನೆಲೆಗೊಂಡಿರುವ ಐಎನ್‌ಎಸ್ ವಿಕ್ರಾಂತ್, ಕರಾಚಿಯನ್ನು ಗುರಿಯಾಗಿಸಿಕೊಂಡು ಗಮನಾರ್ಹ ವಿನಾಶವನ್ನು ಉಂಟುಮಾಡಿದೆ. ನೌಕಾಪಡೆಯ ದಾಳಿಯು ಕರಾಚಿ ಬಂದರು ಸೇರಿದಂತೆ ನಗರದಾದ್ಯಂತ ಭಾರಿ ಬೆಂಕಿಯನ್ನು ಉಂಟುಮಾಡಿದೆ. ದಕ್ಷಿಣ ಪಾಕಿಸ್ತಾನದ ಕರಾಚಿಯಲ್ಲಿ ಬಂದರಿನ ಬಳಿ ಸ್ಫೋಟಗಳು ಕೇಳಿಬಂದಿವೆ.

ಪಶ್ಚಿಮ ನೌಕಾ ಕಮಾಂಡ್ ಅರೇಬಿಯನ್ ಸಮುದ್ರದಲ್ಲಿ ಐಎನ್‌ಎಸ್ ವಿಕ್ರಾಂತ್ ಮತ್ತು ಭಾರತೀಯ ನೌಕಾಪಡೆಯು ವಿಧ್ವಂಸಕ ನೌಕೆಗಳನ್ನು ಸಜ್ಜುಗೊಳಿಸಿದೆ ಎಂದು ಭಾರತೀಯ ನೌಕಾಪಡೆಯ ಮೂಲಗಳು ಈ ಹಿಂದೆ ತಿಳಿಸಿವೆ. ಪಾಕಿಸ್ತಾನದ ಕರಾಚಿ ಮತ್ತು ಒರ್ಮಾರಾ ಬಂದರುಗಳಲ್ಲಿ ಐಎನ್‌ಎಸ್ ವಿಕ್ರಾಂತ್ ನಿಂದ ಹಲವಾರು ಕ್ಷಿಪಣಿಗಳನ್ನು ಉಡಾಯಿಸಲಾಯಿತು, ಇದರ ಪರಿಣಾಮವಾಗಿ ಎರಡೂ ಸ್ಥಳಗಳಲ್ಲಿ ವ್ಯಾಪಕ ಬೆಂಕಿ ಕಾಣಿಸಿಕೊಂಡಿತು.

ಈಗ ದಟ್ಟವಾದ ಹೊಗೆ ಬಂದರು ನಗರಗಳನ್ನು ಆವರಿಸಿದೆ, ಭಯಭೀತರಾದ ನಿವಾಸಿಗಳು ಕರಾವಳಿ ಪ್ರದೇಶಗಳಿಂದ ಪಲಾಯನ ಮಾಡಿ ಒಳನಾಡಿಗೆ ತೆರಳುವಂತೆ ಒತ್ತಾಯಿಸುತ್ತಿದೆ. ಹಿರಿಯ ಅಧಿಕಾರಿಗಳು, ಯುದ್ಧನೌಕೆಗಳು ಮತ್ತು ಜಲಾಂತರ್ಗಾಮಿ ನೌಕೆಗಳ ಪ್ರಧಾನ ಕಚೇರಿ ಸೇರಿದಂತೆ ಪಾಕಿಸ್ತಾನಿ ನೌಕಾಪಡೆಯ ಪ್ರಮುಖ ನೆಲೆಗಳನ್ನು ಕರಾಚಿ ಮತ್ತು ಒರ್ಮಾರಾ ಹೊಂದಿವೆ ಎಂದು ವರದಿಗಳು ಸೂಚಿಸುತ್ತವೆ. ಈ ನೆಲೆಗಳನ್ನು ಹೊಡೆದುರುಳಿಸುವ ಮೂಲಕ, ಐಎನ್‌ಎಸ್ ವಿಕ್ರಾಂತ್ ಪಾಕಿಸ್ತಾನದ ನೌಕಾ ಕಾರ್ಯಾಚರಣೆಯನ್ನು ದುರ್ಬಲಗೊಳಿಸಿದೆ. ಭಾರತೀಯ ನೌಕಾಪಡೆಯ ಆಕ್ರಮಣವು ನಿರಂತರವಾಗಿ ಮುಂದುವರೆದಿದೆ. ಮೂಲಗಳು ತಿಳಿಸಿರುವ ಪ್ರಕಾರ, ಐಎನ್‌ಎಸ್ ವಿಶಾಖಪಟ್ಟಣಂ ವಿಧ್ವಂಸಕ ನೌಕೆಗಳಲ್ಲಿ ಒಂದಾಗಿದೆ. ಐಎನ್‌ಎಸ್ ವಿಕ್ರಾಂತ್ 2022 ರಲ್ಲಿ ಕಾರ್ಯಾರಂಭಗೊಂಡ ವಿಮಾನವಾಹಕ ನೌಕೆಯಾಗಿದೆ. ಪಾಕಿಸ್ತಾನದ ಅಪ್ರಚೋದಿತ ದಾಳಿಗಳಿಗೆ ಪ್ರತಿಕ್ರಿಯಿಸಲು ಭಾರತದ ಮೂರು ಸಶಸ್ತ್ರ ಪಡೆಗಳಾದ ಭೂಸೇನೆ, ವಾಯುಪಡೆ ಮತ್ತು ನೌಕಾಪಡೆಗಳನ್ನು ಸಜ್ಜುಗೊಳಿಸಲಾಗಿದೆ.

# ಆಪರೇಷನ್ ಸಿಂಧೂರ 2: ಕರಾಚಿ, ಲಾಹೋರ್‌ನಲ್ಲಿ ದಾಳಿ; 26 ಮಂದಿ ಸಾವು

ಇಸ್ಲಾಮಾಬಾದ್, ಮೇ 8: ನಿನ್ನೆಯಷ್ಟೇ ನಡೆದ ಭಾರತೀಯ ಸೇನೆಯ ಆಪರೇಷನ್ ಸಿಂಧೂರ ಕಾರ್ಯಾಚರಣೆಯಿಂದಾಗಿ ಹೈರಾಣಾಗಿರುವ ಪಾಕಿಸ್ತಾನದಲ್ಲಿ ಇಂದು ಬೆಳಗ್ಗೆಯಿಂದ ಮತ್ತೆ ಸೈರನ್ ಮೊಳಗುತ್ತಿದ್ದು, ಲಾಹೋರ್ ಮತ್ತು ಕರಾಚಿಯಲ್ಲಿ 'ಆತ್ಮಹತ್ಯಾ ಡ್ರೋನ್' ದಾಳಿ ನಡೆಯುತ್ತಿದೆ ಎಂದು ಹೇಳಲಾಗಿದೆ.

ಗುರುವಾರ ಪಾಕಿಸ್ತಾನದ ಲಾಹೋರ್‌ನಲ್ಲಿ ದೊಡ್ಡ ಸರಣಿ ಸ್ಫೋಟಗಳು ಕೇಳಿ ಬಂದಿದ್ದರಿಂದ ಸೈರನ್‌ಗಳು ಮೊಳಗಲಾರಂಭಿಸಿವೆ. ಭಯಭೀತರಾದ ಜನರು ಮನೆಗಳಿಂದ ಹೊರಗೆ ಓಡಿ ಬರುತ್ತಿರುವ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಈ ಬಗ್ಗೆ ಪಾಕಿಸ್ತಾನದ ಸ್ಥಳೀಯ ಮಾಧ್ಯಮಗಳು ವರದಿ ಮಾಡಿದ್ದು, ಅಜ್ಞಾತ ಸ್ಥಳಗಳಿಂದ ಹಾರಿ ಬಂದ ಆತ್ಮಹತ್ಯಾ ಡ್ರೋನ್‌ಗಳು ಕರಾಚಿ ಮತ್ತು ಲಾಹೋರ್‌ನ ನಿಗದಿತ ಪ್ರದೇಶ ಮತ್ತು ಕಟ್ಟಡಗಳಿಗೆ ನುಗ್ಗಿ ಸ್ಫೋಟಗೊಳ್ಳುತ್ತಿವೆ ಎಂದು ವರದಿ ಮಾಡಿವೆ. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಯಾಗಿ ಭಾರತವು ಮಂಗಳವಾರ ಮುಂಜಾನೆ ಆಪರೇಷನ್ ಸಿಂಧೂರ ಎಂಬ ಕಾರ್ಯಾಚರಣೆಯಲ್ಲಿ ಪಾಕಿಸ್ತಾನದಲ್ಲಿನ ಭಯೋತ್ಪಾದಕ ಶಿಬಿರಗಳನ್ನು ಹೊಡೆದುರುಳಿಸಿದ ಒಂದು ದಿನದ ನಂತರ ಈ ಘಟನೆ ನಡೆದಿದೆ.



**26 ಮಂದಿ ಸಾವು, ಹಲವರಿಗೆ ಗಾಯ**

ಇನ್ನು ಗುರುವಾರ ಬೆಳಗ್ಗೆಯಿಂದ ನಡೆಯುತ್ತಿರುವ ಆತ್ಮಹತ್ಯಾ ಡ್ರೋನ್ ದಾಳಿಯಲ್ಲಿ ಈ ವರೆಗೂ 26 ಮಂದಿ ಸಾವನ್ನಪ್ಪಿ ಹಲವರು ಗಾಯಗೊಂಡಿದ್ದಾರೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಪ್ರಮುಖವಾಗಿ ಈ ಆತ್ಮಹತ್ಯಾ ಡ್ರೋನ್ ದಾಳಿಗಳು ಲಾಹೋರ್‌ನ ವಾಲ್ಟನ್ ವಿಮಾನ ನಿಲ್ದಾಣದ ಬಳಿಯ ಗೋಪಾಲ್ ನಗರ ಮತ್ತು ನಸೀರಾಬಾದ್ ಪ್ರದೇಶಗಳಲ್ಲಿ ನಡೆದಿವೆ ಎನ್ನಲಾಗಿದೆ.

ಭಾರತದ 15 ಸ್ಥಳಗಳನ್ನು ಗುರಿಯಾಗಿರಿಸಿ ಪಾಕ್ ಸೇನೆ ನಡೆಸಿದ ಕ್ಷಿಪಣಿ ದಾಳಿಯನ್ನು ಎಸ್ 400 ಸುದರ್ಶನ ಚಕ್ರದ ಮೂಲಕ ಹಿನ್ನೆಟ್ಟಿಸಿದ ಭಾರತ, ಇದರ ಬೆನ್ನಲ್ಲೇ ಲಾಹೋರ್‌ನ ಮೇಲೆ ದಾಳಿ ನಡೆಸಿ ಕ್ಷಿಪಣಿ ರಕ್ಷಣಾ ವ್ಯವಸ್ಥೆಯನ್ನು ಧ್ವಂಸಗೊಳಿಸಿದೆ.

**ಇಸ್ರೇಲ್ ನಿರ್ಮಿತ ಹರೋಪ್ ಡ್ರೋನ್‌ಗಳು**

ಭಾರತವು ಇಸ್ರೇಲಿ ಹರೋಪ್ ಡ್ರೋನ್‌ಗಳನ್ನು ಕರಾಚಿ ಮತ್ತು ಲಾಹೋರ್‌ನ ಎರಡು ದೊಡ್ಡ ನಗರಗಳು ಸೇರಿದಂತೆ ಹಲವು ಸ್ಥಳಗಳಿಗೆ ಕಳುಹಿಸಿದ್ದು, ಅವುಗಳ ಅವಶೇಷಗಳನ್ನು ಸಂಗ್ರಹಿಸಲಾಗುತ್ತಿದೆ. ಪಾಕಿಸ್ತಾನದ ವಾಯುಪ್ರದೇಶಕ್ಕೆ ಭಾರತೀಯ ಡ್ರೋನ್‌ಗಳನ್ನು ಕಳುಹಿಸುವುದನ್ನು ಮುಂದುವರಿಸಲಾಗಿದೆ.

ಭಾರತ ಈ ಆಕ್ರಮಣಕ್ಕೆ ಭಾರಿ ಬೆಲೆ ತೆರಬೇಕಾಗುತ್ತದೆ ಎಂದು ಪಾಕಿಸ್ತಾನದ ಮಿಲಿಟರಿ ವಕ್ತಾರ ಅಹ್ಮದ್ ಷರೀಫ್ ಚೌಧರಿ ತಿಳಿಸಿದ್ದಾರೆ.

**ವಿಮಾನ ನಿಲ್ದಾಣ ಸ್ಥಗಿತ**

ಏತನ್ಮಧ್ಯೆ, ಭಯೋತ್ಪಾದಕ ಶಿಬಿರಗಳ ಮೇಲೆ ಭಾರತ ನಡೆಸಿದ ದಾಳಿಯ ನಂತರ ಪಾಕಿಸ್ತಾನ ವಿಮಾನ ನಿಲ್ದಾಣ ಪ್ರಾಧಿಕಾರವು ಕರಾಚಿ, ಲಾಹೋರ್ ಮತ್ತು ಸಿಯಾಲ್ಕೋಟ್ ಸೇರಿದಂತೆ ಪ್ರಮುಖ ವಿಮಾನ ನಿಲ್ದಾಣಗಳಲ್ಲಿ ವಿಮಾನ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದೆ.

**ಪಾಕಿಸ್ತಾನ ಪ್ರಧಾನಿ ಎಸ್ಕೇಪ್: ಭಾರತದ ದಾಳಿಗೆ ಹೆದರಿ ಅಡಗುದಾಣಕ್ಕೆ ಶಿಫ್ಟ್!**

ಇಸ್ಲಾಮಾಬಾದ್, ಪಾಕಿಸ್ತಾನ: ಭಾರತದ ದಿಟ್ಟ ದಾಳಿಗೆ ಪಾಕಿಸ್ತಾನ ಅಕ್ಷರಶಃ ತತ್ತರಿಸಿದೆ. ಇಸ್ಲಾಮಾಬಾದ್‌ನಲ್ಲಿ ಭಾರತ ಭರ್ಜರಿ ದಾಳಿ ಮಾಡಿದೆ. ಭಾರತದ ಅಬ್ಬರಕ್ಕೆ ಹೆದರಿದೆ ಪಾಕ್ ಪ್ರಧಾನಿ ಇದೀಗ ರಹಸ್ಯ ತಾಣ ಸೇರಿದ್ದಾರೆ ಎಂಬ ಬ್ರೇಕಿಂಗ್ ನ್ಯೂಸ್ ಲಭ್ಯವಾಗಿದೆ. ಸ್ಲಾಮಾಬಾದ್ನಲ್ಲಿರುವ ಪಾಕ್ ಪ್ರಧಾನಿ ಶಹಬಾಜ್ ಷರೀಫ್ ಮನೆ ಬಳಿ ಭಾರತ ದಾಳಿ ಮಾಡಿದೆ.

ಪಾಕ್ ಪ್ರಧಾನಿ ಮನೆಯಿಂದ ಕೇವಲ 20 ಕಿಲೋ ಮೀಟರ್ ಅಂತರದಲ್ಲಿ ದಾಳಿ ಮಾಡಲಾಗಿದೆ. ಇದರಿಂದ ಹೆದರಿದ ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ರಹಸ್ಯ ಅಡಗುದಾಣಕ್ಕೆ ಶಿಫ್ಟ್ ಆಗಿದ್ದಾರೆ ಎನ್ನಲಾಗಿದೆ.

**ಜಮ್ಮು ಮತ್ತು ಕಾಶ್ಮೀರದಲ್ಲಿ ಭಾರತ ಕನಿಷ್ಠ 8 ಕ್ಷಿಪಣಿಗಳನ್ನು ಮತ್ತು ರಾಜಸ್ಥಾನದ ಜೈಸಲ್ಮೇರ್‌ನಲ್ಲಿ 30 ಕ್ಷಿಪಣಿಗಳನ್ನು ಹೊಡೆದುರುಳಿಸಿದೆ. ಗಡಿ ರಾಜ್ಯಗಳಲ್ಲಿ ಪಾಕಿಸ್ತಾನದ ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ. ಭಾರತದ ಕ್ಷಿಪಣಿ ರಕ್ಷಣಾ ವ್ಯವಸ್ಥೆಯಿಂದ ಪಾಕಿಸ್ತಾನದ ಎಫ್ 16 ಜೆಟ್ ಮತ್ತು ಎರಡು ಜೆಎಫ್ –17 ಫೈಟರ್ ಜೆಟ್‌ಗಳನ್ನು ಹೊಡೆದುರುಳಿಸಲಾಗಿದೆ. ಲಾಹೋರ್ ಮೇಲೆ ಡ್ರೋನ್ ದಾಳಿಯೊಂದಿಗೆ ಭಾರತವು ಪ್ರತಿದಾಳಿ ನಡೆಸಿತು, ಇದು ತನ್ನ ರಕ್ಷಣಾ ವ್ಯವಸ್ಥೆಯನ್ನು ನಿಷ್ಕ್ರಿಯಗೊಳಿಸಿತು. ಲಾಹೋರ್, ಕರಾಚಿ ಮತ್ತು ಗುಜ್ರನ್‌ವಾಲಾ , ರಾವಲ್‌ಪಿಂಡಿ ಮೊದಲಾದ ನಗರಗಳನ್ನು ಗುರಿಯಾಗಿರಿಸಿ ದಾಳಿ ಕೈಗೊಳ್ಳಲಾಗಿದೆ.**

**ಡ್ರೋನ್ ದಾಳಿಯಲ್ಲಿ ಮೂವರು ಸಾವನ್ನಪ್ಪಿದ್ದಾರೆ ಮತ್ತು ನಾಲ್ವರು ಸೈನಿಕರು ಸೇರಿದಂತೆ ಎಂಟು ಮಂದಿ ಗಾಯಗೊಂಡಿದ್ದಾರೆ ಎಂದು ಪಾಕಿಸ್ತಾನ ಸೇನೆ ಗುರುವಾರ ಹೇಳಿದೆ ಮತ್ತು ನೆರೆಯವರ ನಡುವೆ ಉದ್ವಿಗ್ನತೆ ಮುಂದುವರೆದಂತೆ ಭಾರತ ಹಾರಿಸಿದ ಹಲವಾರು ಯುಎವಿಗಳನ್ನು ಸಶಸ್ತ್ರ ಪಡೆಗಳು ಹೊಡೆದುರುಳಿಸಿದೆ ಎಂದು ಹೇಳಿಕೊಂಡಿದೆ.**


ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ

ಸರ್ವರಿಗೂ **'ಸರಳ ಕಾವೇರಿ'**

ಮನೆಬಾಗಿಲಿಗೆ **'ಸಂಚಾರಿ ಕಾವೇರಿ'**

**ಯೋಜನೆಗಳಿಗೆ ಚಾಲನೆ**



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಉಪಮುಖ್ಯಮಂತ್ರಿಗಳು




ಯೋಜನೆಗಳಿಗೆ ಚಾಲನೆ

**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪ ಮುಖ್ಯಮಂತ್ರಿಗಳು,
ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರು,
ಕರ್ನಾಟಕ ಸರ್ಕಾರ

ಅಧ್ಯಕ್ಷತೆ
**ಶ್ರೀ ರಿಜ್ವಾನ್ ಅರ್ಷದ್**
ಮಾನ್ಯ ಶಾಸಕರು
ಶಿವಾಜಿನಗರ ವಿಧಾನಸಭಾ ಕ್ಷೇತ್ರ

ಹಾಗೂ ಈ ಸಮಾರಂಭದಲ್ಲಿ ಮಾನ್ಯ ಸಚಿವರುಗಳು, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಂಡಳಿಯ ಸದಸ್ಯರುಗಳು, ಎಲ್ಲಾ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.

**ಸರ್ವರಿಗೂ ಸುಸ್ವಾಗತ**

**'ಸರಳ ಕಾವೇರಿ'**

- ನೀರಿನ ಸಂಪರ್ಕ ಶುಲ್ಕದಲ್ಲಿ ಕೇವಲ 20% ಪಾವತಿ ಮಾಡಿ ಹೊಸ ಸಂಪರ್ಕ. ಉಳಿಕೆ 80% ಮೊತ್ತವನ್ನು ಕಡಿಮೆ ಬಡ್ಡಿದರದಲ್ಲಿ 12 ಕಂತುಗಳಲ್ಲಿ ಪಾವತಿಸಲು ಅವಕಾಶ.
- ಅಪಾರ್ಟ್ ಮೆಂಟ್ ವೆಲ್ ಫೇರ್ ಅಸೋಸಿಯೇಷನ್/ ಮನೆಗಳ ಮಾಲೀಕರಿಗೆ ಹೊಸ ಸಂಪರ್ಕ ಪಡೆಯಲು 2 ತಿಂಗಳು ಕಾಲಾವಕಾಶ ನೀಡಿಕೆ.

**'ಸಂಚಾರಿ ಕಾವೇರಿ'**

- ಮಹಾನಗರಿಯ ಜನತೆಗೆ ಶುದ್ಧ ಕುಡಿಯುವ ನೀರನ್ನು ಟ್ಯಾಂಕರ್ ಮೂಲಕ ನೇರವಾಗಿ ಮನೆಬಾಗಿಲಿಗೆ ತಲುಪಿಸಲಾಗುತ್ತದೆ.
- ಬಿಐಎಸ್ ಆಧಾರಿತ ಶುದ್ಧ ಹಾಗೂ ಸ್ವಚ್ಛ ಕುಡಿಯುವ ನೀರನ್ನು ಸಕಾಲದಲ್ಲಿ, ಸರಿಯಾದ ಪ್ರಮಾಣದಲ್ಲಿ ನೀರು ಪೂರೈಸುವ ವ್ಯವಸ್ಥೆ.
- ಮೊಬೈಲ್ ಸ್ನೇಹಿ ಆ್ಯಪ್ ಹಾಗೂ ವೆಬ್ ಸೈಟ್ ರಚನೆ -ಆನ್ ಡಿಮ್ಯಾಂಡ್ ಟ್ಯಾಂಕರ್ ನೀರು ಬುಕ್ಕಿಂಗ್ ವ್ಯವಸ್ಥೆ

ಸಂಚಾರಿ ಕಾವೇರಿ ಆ್ಯಪ್ ಡೌನ್ ಲೋಡ್ ಮಾಡಲು ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ

**ತುಷಾರ್ ಗಿರಿ ನಾಥ್,** ಭಾ.ಆ.ಸೇ.
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ

**ಡಾ. ರಾಮ್ ಪ್ರಸಾತ್ ಮನೋಹರ್ ವಿ.,** ಭಾ.ಆ.ಸೇ.
ಅಧ್ಯಕ್ಷರು, ಬೆಂಗಳೂರು ಜಲಮಂಡಳಿ

"ನೀರನ್ನು ಉಳಿಸಿ, ಭವಿಷ್ಯವನ್ನು ಬೆಳೆಸಿ"

## ನಿತ್ಯ ಪಂಚಾಂಗ 9.05.2025 ಶುಕ್ರವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ವಸಂತ ಋತು
ಚಾಂದ್ರಮಾನ, ವೈಶಾಖ ಶುದ್ಧ

ದ್ವಾದಶಿ, ಹಸ್ತ ನಕ್ಷತ್ರ, ಪ್ರದೋಷ,
ಶ್ರೀರಂಗಪಟ್ಟಣ ರಥ, ತೊರವಿ ನರಸಿಂಹ ರಥ,
ಕೆಡವೂರು ಕಾನಂಗಿ ಶಂಕತ ನಾರಾಯಣ ರಥ,
ಶೃಂಗೇರಿ ಗಿರಿಜಾ ಕಲ್ಯಾಣ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಮರಣೀಯ: ಸಿಎಂ

**ಮೈಶುಗರ್ ಕಾರ್ಖಾನೆಗೆ 50 ಕೋಟಿ ಕೊಟ್ಟಿದ್ದಷ್ಟೆ ಅಲ್ಲ, ವಿದ್ಯುತ್ ಬಿಲ್ , ದಂಡ ಎರಡನ್ನೂ ಮನ್ನಾ ಮಾಡಿದ್ದೇವೆ**

**ಮಂಡ್ಯ ಜನ ಒರಟರಂತೆ ಕಂಡರೂ, ಸಹಾಯ ಸ್ಮರಿಸುವ ಹೃದಯವಂತರು**

**ನೂತನ ಹಾಸ್ಟೆಲ್ ಕೇವಲ ಕುರುಬರ ಮಕ್ಕಳಿಗೆ ಮಾತ್ರವಲ್ಲ, ಎಲ್ಲಾ ಜಾತಿಯ ಬಡವರಿಗೂ ಅವಕಾಶ ಇರುತ್ತದೆ**



**ಮಂಡ್ಯ, ಮೇ 8:** ಮಂಡ್ಯ ಜನ ಒರಟರಂತೆ ಕಂಡರೂ, ಸಹಾಯ ಸ್ಮರಿಸುವ ಹೃದಯವಂತರು. ನಾಡಿಗೆ ಕೃಷಿ ಮೂಲಕ ಅನ್ನ ಕೊಡುವ ಅನ್ನದಾತರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ತಾಲ್ಲೂಕು ಕುರುಬರ ಸಂಘ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನೂತನ ಹಾಸ್ಟೆಲ್ ಕಟ್ಟಡಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.

ನೂತನ ಹಾಸ್ಟೆಲ್ ಕೇವಲ ಕುರುಬರ ಮಕ್ಕಳಿಗೆ ಮಾತ್ರವಲ್ಲ, ಎಲ್ಲಾ ಜಾತಿಯ ಬಡವರಿಗೂ ಅವಕಾಶ ಇರುತ್ತದೆ ಎಂದರು. ದಾನಿಗಳು ಕೊಟ್ಟಷ್ಟು ಕೊಡಲಿ. ನಾನೂ ಸಹಾಯ ಮಾಡುತ್ತೇನೆ. ಮಂಡ್ಯದ ಜನ ಹತ್ತಾರು ವರ್ಷಗಳಿಂದ ನನಗೆ ಬಂಬಲ ಕೊಡುತ್ತಲೇ ಬರುತ್ತಿದ್ದಾರೆ ಎಂದರು. ನಾಲ್ವಡಿ ಅರಸರನ್ನು ನಾವು ಸದಾ ಸ್ಮರಿಸಬೇಕು. ಮಂಡ್ಯದ ಪ್ರಗತಿಯಲ್ಲಿ ಇವರ ಕೊಡುಗೆ ಅಪಾರ ಎಂದರು. ನಮ್ಮ ಸರ್ಕಾರ ಮೈಶುಗರ್ ಕಾರ್ಖಾನೆಗೆ 50 ಕೋಟಿ ಕೊಟ್ಟಿದ್ದಷ್ಟೆ ಅಲ್ಲ, ವಿದ್ಯುತ್ ಬಿಲ್ , ದಂಡ ಎರಡನ್ನೂ ಮನ್ನಾ ಮಾಡಿದ್ದೇವೆ ಎಂದರು.

ನಾನು ಮಂಡ್ಯದ ಈ ಹಾಸ್ಟೆಲ್ ಕಟ್ಟಡ ಶಿಥಿಲ ಆಗಿದ್ದನ್ನು ನೋಡಿದ್ದೆ. ಅನುದಾನ ಕೊಡಲು ಸರ್ಕಾರ ಸಿದ್ದವಿದೆ ಎಂದು ಹೇಳಿದ್ದೆ. ಹಿಂದುಳಿದ ವರ್ಗದ ಮಕ್ಕಳಿಗೆ ಶಿಕ್ಷಣ ಸಿಗಬೇಕು ಎನ್ನುವ ಉದ್ದೇಶ ಈಡೇರಬೇಕಾದರೆ ಹಾಸ್ಟೆಲ್‌ಗಳ ಅಗತ್ಯವಿದೆ. ಹಳ್ಳಿಗಾಡಿನ ಮಕ್ಕಳೂ ವೈದ್ಯರು, ಎಂಜಿನಿಯರ್‌ಗಳಾಗಬೇಕು. ಕೇವಲ ಒಂದು ವರ್ಗದವರು ಮಾತ್ರ ಆಗಬಾರದು, ಎಲ್ಲರಿಗೂ ಶಿಕ್ಷಣ ಸಿಗಬೇಕು ಎಂದರು.

ಇವತ್ತೇನಾದರೂ ಮಂಡ್ಯದಲ್ಲಿ ಸಕ್ಕರೆ ಕಾರ್ಖಾನೆ ಉಳಿದಿದ್ದರೆ, ವೈದ್ಯ ಕಾಲೇಜು, ಕೃಷಿ ವಿವಿ ಬಂದಿದೆ ಎಂದರೆ ಅದಕ್ಕೆ ಕಾಂಗ್ರೆಸ್ ಸರ್ಕಾರದ ಸಚಿವ ಚಲುವರಾಯಸ್ವಾಮಿ ಅವರ ಕಾಳಜಿ, ಶ್ರಮ ಕಾರಣ ಎಂದು ಸ್ಪಷ್ಟಪಡಿಸಿದರು. ಕಳೆದ ವರ್ಷ ಮಳೆ–ಬೆಳೆ ಚನ್ನಾಗಿ ಆಗಿದೆ. ಸಿದ್ದರಾಮಯ್ಯ ಅವರ ಕಾಲಗುಣ ಸರಿ ಇಲ್ಲ ಎಂದು ಟೀಕಿಸುತ್ತಿದ್ದ ಬಿಜೆಪಿ–ಜೆಡಿಎಸ್ ನವರಿಗೆ ಮಳೆಯೇ ಉತ್ತರ ಕೊಟ್ಟಿದೆ. ಈ ವರ್ಷವೂ ಉತ್ತಮ ಮಳೆ ಬೆಳೆ ಆಗುವ ಭರವಸೆ ಇದೆ ಎಂದರು. ಬಿಜೆಪಿ ನಿರಂತರವಾಗಿ ಸುಳ್ಳು ಹೇಳಿಕೊಂಡು ತಿರುಗುತ್ತಿದೆ. ಸರ್ಕಾರದ ಬೊಕ್ಕಸ ಖಾಲಿ ಎನ್ನುತ್ತಿದ್ದಾರೆ. ಒಂದು ಲಕ್ಷದ 35 ಸಾವಿರ ಕೋಟಿ ರೂಪಾಯಿಯನ್ನು ಅಭಿವೃದ್ಧಿಗೆ ತೆಗೆದಿರಿಸಿದ್ದೇವೆ. ಇದು ಜನರಿಗೆ ಕಾಣುತ್ತದೆ, ಬಿಜೆಪಿಯವರಿಗೆ ಕಾಣುತ್ತಿಲ್ಲ ಎಂದರು. ಯಾರ್ಯಾರು ಅಕ್ಷರ ಸಂಸ್ಕೃತಿ ಮತ್ತು ಸಾಮಾಜಿಕ ಅವಕಾಶಗಳಿಂದ ವಂಚಿತರಾಗಿದ್ದಾರೋ ಅವರೆಲ್ಲರ ಪರವಾಗಿ ನಮ್ಮ ಸರ್ಕಾರ ಇರುತ್ತದೆ ಎಂದರು.

# ಬೆಂಗಳೂರಿನಲ್ಲಿ ಇಂದು ತಿರಂಗಾ ಯಾತ್ರೆ: ಡಿಕೆಶಿ

**ಬೆಂಗಳೂರು, ಮೇ 8:** ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಗೆ ಪ್ರತೀಕಾರವಾಗಿ ಪಾಕಿಸ್ತಾನದ ಉಗ್ರರ ನೆಲೆಗಳ ಮೇಲೆ ನಡೆದ ಸೇನಾ ಕಾರ್ಯಾಚರಣೆ ಆಪರೇಷನ್ ಸಿಂಧೂರ್ ಬೆಂಬಲಿಸಿ ಬೆಂಗಳೂರಿನಲ್ಲಿ ನಾಳೆ ಕಾಂಗ್ರೆಸ್ ಬೃಹತ್ ತಿರಂಗಾಯಾತ್ರೆ ಹಮ್ಮಿಕೊಂಡಿದೆ.

ನಾಳೆ ಬೆಳಗ್ಗೆ 9:30ಕ್ಕೆ ಕೆ.ಆರ್.ಸರ್ಕಲ್‌ನಿಂದ ಆರಂಭಗೊಳ್ಳುವ ತಿರಂಗಾಯಾತ್ರೆ, ಎಂ.ಜಿ ರಸ್ತೆಯ ಗಾಂಧಿ ಪ್ರತಿಮೆ(ಕೆಎಸ್ ಸಿಎ ಸರ್ಕಲ್) ವರೆಗೂ ನಡೆಯಲಿದೆ ಎಂದು ಡಿಸಿಎಂ ಹಾಗೂ ಕೆಪಿಸಿಸಿ ಅಧ್ಯಕ್ಷರೂ ಆದ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ರಾಷ್ಟ್ರೀಯ ತ್ರಿವರ್ಣ ಧ್ವಜ ಹಿಡಿದು ನಡೆಯುವ ಜಾಥಾ ಮೂಲಕ ದೇಶದ ಎಲ್ಲ ಸೈನಿಕರಿಗೆ ಗೌರವ ಕೊಡುವ ನಿಟ್ಟಿನಲ್ಲಿ ಮಾರ್ಚ್ ಮಾಡಲಾಗುತ್ತದೆ. ಇದರಲ್ಲಿ ಪಕ್ಷ ಸಂತ ಏನಿಲ್ಲ. ಎಲ್ಲ ಪಕ್ಷದ ಕಾರ್ಯಕರ್ತರು, ಸರ್ಕಾರಿ, ಖಾಸಗಿ ಸಂಘಟನೆಗಳು ಭಾಗವಹಿಸಬಹುದು. ಯಾವುದೇ ಅಧಿಕಾರಿಗಳು, ಸಿನಿಮಾ, ವಿದ್ಯಾರ್ಥಿಗಳು, ಮುಖ್ಯಂತ್ರಿಗಳು ಹಾಗೂ ಕ್ಯಾಬಿನೆಟ್ ಗೂ ಆಹ್ವಾನವಿದೆ. ವಿಧಾನಸೌಧ ಎದುರು ದೇಶದ ಸೈನಿಕರಿಗೆ ಗೌರವ ಸಲ್ಲಿಸಲಾಗತ್ತೆ. ಕೇಂದ್ರ ಸರ್ಕಾರದ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಪರವಾಗಿ ನಿಲ್ಲುವುದು ಜಾಥಾದ ಉದ್ದೇಶವಾಗಿದೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಯುದ್ಧ ಭೀತಿ ಇರುವುದರಿಂದ ರಾಜ್ಯದ ಡ್ಯಾಂಗಳಿಗೆ ಭದ್ರತೆ ಕಲ್ಪಿಸುವುದು ನಮ್ಮ ಡ್ಯೂಟಿ. ಎಲ್ಲಾ ಜಲಾಶಯಗಳಲ್ಲೂ ಭದ್ರತೆ ಒದಗಿಸುವುದು ನಮ್ಮ ಕರ್ತವ್ಯ. ಜನರು ಜಾಗೃತವಾಗಿರಬೇಕು ಅಂತ ಮುಂಜಾಗೃತ ಕ್ರಮ ಕೈಗೊಳ್ಳಲಾಗುತ್ತಿದೆ. ಕಿಡಿಗೇಡಿಗಳು ಯಾರೇ ಇದ್ದರೂ ಕೂಡ ನಮ್ಮ ಸರ್ಕಾರ ಗಮನ ಹರಿಸಿದೆ ಎಂದು ಜಲಸಂಪನ್ಮೂಲ ಸಚಿವರು ಆದ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡ್ಯದಲ್ಲಿ ರಾಜ್ಯ ರೈತ ಸಂಘ, ಭಾರತೀಯ ಕಮ್ಯುನಿಸ್ಟ್ ಪಕ್ಷ ಮತ್ತು ಜನಪರ ಸಂಘಟನೆಗಳ ಮುಖಂಡರು, ಕಾರ್ಯಕರ್ತರ ಅಹವಾಲುಗಳನ್ನು ಆಲಿಸಿ ಮನವಿ ಸ್ವೀಕರಿಸಿದರು.

# ರಾಜ್ಯದಲ್ಲಿ ಭದ್ರತಾ ಸಿಬ್ಬಂದಿ ಕೊರತೆ ಇಲ್ಲ: ಸಚಿವ ಪರಮೇಶ್ವರ್ ಸ್ಪಷ್ಟನೆ



**ಬೆಂಗಳೂರು, ಮೇ 08:** ಕರ್ನಾಟಕದಲ್ಲೂ ಮಾಕ್ ಡ್ರಿಲ್ ಆರಂಭವಾಗಿದೆ. ಈ ನಡುವೆ ರಾಜ್ಯದಲ್ಲಿ ಅಗತ್ಯ ಭದ್ರತಾ ಸಿಬ್ಬಂದಿ ಕೊರತೆ ಇದೆ ಎಂಬ ಮಾತುಗಳು ಕೇಳಿ ಬಂದಿದ್ದು, ಇದಕ್ಕೆ ಗೃಹ ಸಚಿವರೇ ಉತ್ತರಿಸಿದ್ದಾರೆ.ಗುರುವಾರ ಸುದ್ದಿಗಾರರ ಜೊತೆಗೆ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು, ರಾಜ್ಯದಲ್ಲಿ ಅಗತ್ಯವಾದ ಭದ್ರತೆ ಸಿಬ್ಬಂದಿ ಇದೆ. ಯಾವುದೇ ರೀತಿಯ ಕೊರತೆಯಿಲ್ಲ. ಪೊಲೀಸ್ ಇಲಾಖೆ ವ್ಯಾಪ್ತಿಯಲ್ಲಿ ಅಗತ್ಯ ಸಿಬ್ಬಂದಿಯನ್ನು ಕಡಿಮೆ ಮಾಡಿಲ್ಲ. ಆ ಸಂಖ್ಯೆ ಹಾಗೆಯೇ ಇದೆ. ಹೆಚ್ಚುವರಿಯಾಗಿ ನೇಮಕಾತಿ ಮಾಡಿಕೊಳ್ಳಬೇಕು ಎನ್ನುವ ಪ್ರಸ್ತಾವನೆಯು ಇದೆ. ನೇಮಕಾತಿ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತದೆ ಎಂದು ಅವರು ಸ್ಪಷ್ಟಪಡಿಸಿದರು. ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ನಲ್ಲಿ ಉಗ್ರಗಾಮಿಗಳ ದಾಳಿ ಬಳಿಕ ನಡೆದ ಬೆಳವಣಿಗೆ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದಿಂದ ಕೆಲವು ನಿರ್ದೇಶನಗಳು ಬಂದಿವೆ. ರಾಜ್ಯ 03 ಜಿಲ್ಲೆಗಳನ್ನು ಆಯ್ಕೆ ಮಾಡಿದ್ದಾರೆ. ಮಾಕ್ ಡ್ರಿಲ್ ಮಾಡುತ್ತಾರೆ. ಹೆಚ್ಚುವರಿಯಾಗಿ ಮೈಸೂರು ಜಿಲ್ಲೆಯನ್ನು ಇದಕ್ಕೆ ಸೇರ್ಪಡೆ ಮಾಡಿಕೊಂಡಿದ್ದೇವೆ. ಗುಪ್ತಚರ ನೀಡಿರುವ ಮಾಹಿತಿ ಮತ್ತು ಇನ್ನಿತರ ಕಾರಣಗಳಿಂದ ಈ ಜಿಲ್ಲೆ ಆಯ್ಕೆ ಮಾಡಲಾಗಿದೆ. ರಾಜ್ಯದ ಎಲ್ಲ ಜಿಲ್ಲೆಯ ಪೊಲೀಸ್ ಅಧೀಕ್ಷಕರಿಗೆ ಪರಿಸ್ಥಿತಿಯ ಸೂಕ್ಷ್ಮತೆ ಮತ್ತು ಗಂಭೀರತೆಯನ್ನು ತಿಳಿಸಲಾಗಿದೆ. ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಈಗಾಗಲೇ ಅಣಕು ಕಾರ್ಯಾಚರಣೆ ಶುರುವಾಗಿದೆ ಎಂದು ತಿಳಿಸಿದರು.

# ಯುದ್ಧೋನ್ಮಾದ ಹಿನ್ನೆಲೆ ಕಾರವಾರ ಬಂದರಿನಲ್ಲಿ ಕಟ್ಟೆಚ್ಚರ: ಪಾಕ್ ಹಡಗುಗಳ ಮೇಲೆ ಕಣ್ಗಾವಲು



**ಕಾರವಾರ, ಮೇ 8:** ಪಹಲ್ಗಾಮ್ ಘಟನೆಗೆ ಪ್ರತಿಯಾಗಿ ಭಾರತವು ಪಾಕಿಸ್ತಾನದ ಉಗ್ರರ ಅಡಗುತಾಣಗಳ ಮೇಲೆ ಆಪರೇಷನ್ ಸಿಂದೂರ ಹೆಸರಿನಲ್ಲಿ ನಡೆಸಿದ ವಾಯು ದಾಳಿಯಿಂದ ಯುದ್ಧೋನ್ಮಾದ ಉಂಟಾಗಿರುವ ಹಿನ್ನೆಲೆಯಲ್ಲಿ ಕಾರವಾರದ ಬಂದರಿನಲ್ಲಿ ಕಟ್ಟೆಚ್ಚರ ವಹಿಸಲಾಗಿದೆ.

ಪಾಕಿಸ್ತಾನದ ಹಡಗುಗಳಿಗೆ ಭಾರತದ ಯಾವುದೇ ಬಂದರುಗಳಿಗೆ ಪ್ರವೇಶ ನಿರ್ಬಂಧಿಸಲಾಗಿದೆ. ಒಂದು ವೇಳೆ ಪಾಕಿಸ್ತಾನದ ಸಿಬ್ಬಂದಿ ಸಿಂಗಪುರ, ಮಲೇಷ್ಯಾ ಅಥವಾ ಯಾವುದೇ ದೇಶದ ಹಡಗಿನಲ್ಲಿ ಬಂದರೂ ಅವರು ಹಡಗಿಂದ ಕೆಳಕ್ಕಿಳಿಯುವಂತಿಲ್ಲ. ಹಡಗಿನಲ್ಲೇ ಇರಬೇಕು. ಈ ನಿಟ್ಟಿನಲ್ಲಿ ಇಲ್ಲಿನ ವಾಣಿಜ್ಯ ಬಂದರಿನ ಭದ್ರತಾ ಅಧಿಕಾರಿ ಸಿಬ್ಬಂದಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಕೈಗಾ ಅಣುಸ್ಥಾವರ, ಐಎನ್‌ಎಸ್ ಕದಂಬ ನೌಕಾನೆಲೆಗೆ ಭದ್ರತೆ ಬಿಗಿಗೊಳಿಸಲಾಗಿದೆ. ಈ ಸಂಸ್ಥೆಗಳಿಗೆ ಅವರದ್ದೇ ಆದ ಭದ್ರತಾ ಸಿಬ್ಬಂದಿ ಇದ್ದು, ಭದ್ರತೆಯ ಉಸ್ತುವಾರಿ ವಹಿಸಿದ್ದಾರೆ. ಮೀನುಗಾರಿಕಾ ಬೋಟಿನಲ್ಲಿ ಅಪರಿಚಿತರು ನುಸುಳಿ ಬರಬಹುದು ಎಂದು ಕರಾವಳಿ ಕಾವಲು ಪಡೆ ಮೀನುಗಾರಿಕಾ ಬೋಟ್‌ನವರಿಗೆ ಜಾಗರೂಕತೆಯಿಂದ ಇರುವಂತೆ ಸೂಚಿಸಿದೆ. ಪರಿಶೀಲನೆಯನ್ನೂ ನಡೆಸಿದೆ. ಪಾಕಿಸ್ತಾನಿಯರು ಯಾವುದೇ ದೇಶದ ಹಡಗಿನಲ್ಲಿ ಬಂದರೂ ಅವರಿಗೆ ಹಡಗಿನಿಂದ ಕೆಳಕ್ಕಿಳಿಯಲು ಅವಕಾಶ ಇಲ್ಲ. ಪಾಕ್ ಹಡಗುಗಳಂತೂ ಈಗ ಬಂದರುಗಳಿಗೆ ಪ್ರವೇಶಿಸುವಂತಿಲ್ಲ ಎಂದು ಬಂದರು ಅಧಿಕಾರಿ ರಾಜಕುಮಾರ ಹೆಡೆ ಸ್ಪಷ್ಟನೆ ನೀಡಿದ್ದಾರೆ.

# ಕ್ರಿಕೆಟ್ ಟೂರ್ನಿ ನಡೆಸಲು ಏಕಪಕ್ಷೀಯ ನಿರ್ಧಾರ ಆರೋಪ ಕೆಎಸ್‌ಸಿಎ–ಡಿಎನ್‌ಎ ವಿರುದ್ಧ ಕ್ರಮಕ್ಕೆ ದಿನೇಶ್ ಗೂಳಿಗೌಡ ದೂರು



**ಬೆಂಗಳೂರು, ಮೇ 8:** ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ (ಕೆಎಸ್‌ಸಿಎ) ಹಾಗೂ ಡಿಎನ್‌ಎ ಎಂಟರ್‌ಟೈನ್‌ಮೆಂಟ್ ನೆಟ್ವರ್ಕ್ ಕಂಪನಿ ರಾಜ್ಯದಲ್ಲಿ ಟೆಸ್ಟ್, ಏಕದಿನ ಹಾಗೂ ಐಪಿಎಲ್ ಕ್ರಿಕೆಟ್ ಪಂದ್ಯಾವಳಿಗಳನ್ನು ಆಯೋಜಿಸಲು ಒಪ್ಪಂದ ಮಾಡಿಕೊಂಡಿರುವುದು ಗಮನಕ್ಕೆ ಬಂದಿದೆ. ಆದರೆ, ಕಂಪನಿಯು ಪಂದ್ಯಾವಳಿಗಳ ಆಯೋಜನೆಯಲ್ಲಿ ಏಕಪಕ್ಷೀಯ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿರುವುದು, ಯಾವುದೇ ನಿಯಮಾವಳಿಗಳನ್ನು ಅನುಸರಿಸದೆ, ಸರ್ಕಾರದ ಆದೇಶಗಳಿಗೆ ಬೆಲೆ ನೀಡದೆ ಹಾಗೂ ಸಂಬಂಧಿಸಿದ ಇಲಾಖೆಗಳ ಸೂಕ್ತ ಅನುಮತಿಗಳಿಲ್ಲದೆ ನಡೆದುಕೊಳ್ಳುತ್ತಿರುವುದು ಆತಂಕಕಾರಿ ವಿಷಯವಾಗಿದೆ. ಕ್ರೀಡಾ ಮತ್ತು ಯುವಜನ ಇಲಾಖೆಯು ತಕ್ಷಣ ಕ್ರಮ ಕೈಗೊಳ್ಳದಿದ್ದಲ್ಲಿ ಸರ್ಕಾರ ಹಾಗೂ ಇಲಾಖೆಗೆ ಕೆಟ್ಟ ಹೆಸರು ಬರುವ ಸಾಧ್ಯತೆ ಇದೆ.

ಕಾರ್ಯದರ್ಶಿ ಶ್ರೀ ಶಂಕರ ಅವರು ಕಂಪನಿಯ ಲೋಪದೋಷಗಳನ್ನು ನಿರ್ಲಕ್ಷಿಸಿ ಅವ್ಯವಹಾರಗಳಿಗೆ ಅವಕಾಶ ನೀಡಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆ ಮತ್ತು ಆಕ್ರೋಶಕ್ಕೆ ಕಾರಣವಾಗಿದೆ. ಮುಖ್ಯ ಮಂತ್ರಿಗಳು ಕ್ರೀಡಾ ಖಾತೆಯನ್ನು ಹೊಂದಿದ್ದರೂ, ಕೆಎಸ್‌ಸಿಎ ಮತ್ತು ಡಿಎನ್‌ಎ ಎಂಟರ್‌ಟೈನ್‌ಮೆಂಟ್ ಕಂಪನಿಗಳ ಹೊಂದಾಣಿಕೆ ಯಿಂದ ಐಪಿಎಲ್ ಪಂದ್ಯಾವಳಿಗಳ ಟಿಕೆಟ್‌ಗಳು ಕಾಳಸಂತೆಯಲ್ಲಿ ದುಬಾರಿ ಬೆಲೆಗೆ ಮಾರಾಟವಾಗುತ್ತಿವೆ (ಉದಾಹರಣೆಗೆ 1200 ರೂ. ಟಿಕೆಟ್‌ಗಳು 10000 ರಿಂದ 15000 ರೂ. ವರೆಗೆ ಹಾಗೂ 20,000 ರೂ. ಇರುವ ವಿಐಪಿ ಟಿಕೆಟ್‌ಗಳು 2 ಲಕ್ಷ ರೂ. ವರೆಗೆ ಮಾರಾಟವಾಗುತ್ತಿವೆ). ಇದು ಸರ್ಕಾರ ಮತ್ತು ಕ್ರೀಡಾ ಇಲಾಖೆಗೆ ಕೆಟ್ಟ ಹೆಸರು ತರುತ್ತಿದೆ. ಅಲ್ಲದೆ, ಸಾರ್ವಜನಿಕವಾಗಿ ಕೆಟ್ಟ ಹೆಸರನ್ನೂ ತರುತ್ತಿದೆ.

ಅಲ್ಲದೆ, ಪಂದ್ಯಾವಳಿಗಳಿಗೆ ಆಗಮಿಸುವ ಅತಿಥಿಗಳಿಗಾಗಿ ಪೂರೈಕೆಯಾಗುತ್ತಿರುವ ಆಹಾರ ಮತ್ತು ಪಾನೀಯಗಳು ಕಳಪೆಯಾಗಿದ್ದು, ಈಗಾಗಲೇ ಅತಿಥಿಗಳ ಆರೋಗ್ಯದ ಮೇಲೆ ಪರಿಣಾಮ ಬೀರಿರುವುದು ಇಲಾಖಾ ಮಟ್ಟದಲ್ಲಿ ಚರ್ಚೆಯಾಗಿದೆ. ಪ್ರಾಯೋಜಕ ಸಂಸ್ಥೆಯು ಯಾವುದೇ ನಿಯಮಗಳಿಗೆ ಬೆಲೆ ನೀಡದೆ ತನ್ನಿಷ್ಟದಂತೆ ನಡೆದುಕೊಳ್ಳುತ್ತಿರುವುದು ಸರ್ಕಾರದ ಟೀಕೆಗೆ ಕಾರಣವಾಗುತ್ತಿದೆ.

ಕೆಎಸ್‌ಸಿಎ ಸಂಸ್ಥೆಯು ಪಂದ್ಯಾವಳಿಗಳನ್ನು ಆಯೋಜಿಸುವಾಗ ಸ್ಥಳೀಯ ಆಡಳಿತ ಇಲಾಖೆಗಳು (ಬಿಬಿಎಂಪಿ), ಪೊಲೀಸ್ ಇಲಾಖೆ ಹಾಗೂ ಅಗ್ನಿಶಾಮಕ ದಳದಿಂದ ಪೂರ್ವಾನುಮತಿ ಮತ್ತು ನಿರಾಕ್ಷೇಪಣ ಪತ್ರಗಳನ್ನು ಪಡೆಯುವುದು ಕಡ್ಡಾಯ ನಿಯಮವಾಗಿದೆ. ಆದರೆ, ಪ್ರಸ್ತುತ ಪಂದ್ಯಾವಳಿಗಳು ಯಾವುದೇ ನಿಯಮಗಳನ್ನು ಪಾಲಿಸದೆ, ಏಕಪಕ್ಷೀಯವಾಗಿ ನಿರ್ಧಾರವನ್ನು ತೆಗೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆಂಬುದು ತೋರುತ್ತದೆ.

ಈ ಪರಿಸ್ಥಿತಿಯನ್ನು ನಿಯಂತ್ರಿಸಲು ಸರ್ಕಾರವು ತಕ್ಷಣವೇ ಏಕಗವಾಕ್ಷಿ ಪದ್ಧತಿಯನ್ನು ಜಾರಿಗೆ ತರುವುದು ಅತ್ಯಗತ್ಯ. ಈ ಪದ್ಧತಿಯು ಸ್ಥಳೀಯ ಆಡಳಿತ ಸಂಸ್ಥೆಗಳು, ಪೊಲೀಸ್ ಇಲಾಖೆ, ಕ್ರೀಡಾ ಇಲಾಖೆ ಮತ್ತು ಅಗ್ನಿಶಾಮಕ ದಳದ ಕಾರ್ಯದರ್ಶಿಗಳು, ಆಯುಕ್ತರುಗಳು ಹಾಗೂ ಹಿರಿಯ ಅಧಿಕಾರಿಗಳನ್ನು ಒಳಗೊಂಡಿರಬೇಕು. ಇದರಿಂದ ಟಿಕೆಟ್ ವಿತರಣೆ ಮತ್ತು ಅತಿಥಿ ಸತ್ಕಾರ ಸೇರಿದಂತೆ ಎಲ್ಲ ವಿಭಾಗಗಳಲ್ಲಿ ನಿಯಂತ್ರಣ ಸಾಧಿಸಿ, ಯಶಸ್ವಿಯಾಗಿ ಪಂದ್ಯಾವಳಿಗಳನ್ನು ವ್ಯವಸ್ಥಿತವಾಗಿ ಆಯೋಜಿಸಲು ಸಾಧ್ಯವಾಗುತ್ತದೆ ಜೊತೆಗೆ ಸರ್ಕಾರಕ್ಕೆ ಉತ್ತಮ ಹೆಸರು ಬರುತ್ತದೆ.

ಈ ಕೆಳಗಿನ ಕ್ರಮಗಳನ್ನು ಅನುಸರಿಸಬೇಕೆಂದು ಕೋರಿಕೆ :

* ಹಣಕಾಸು ತನಿಖೆ: ಟಿಕೆಟ್ ಅಕ್ರಮ, ಕಳಪೆ ಸೌಲಭ್ಯಗಳು ಹಾಗೂ ಹಣಕಾಸು ಅವ್ಯವಹಾರದ ಕುರಿತು ತನಿಖೆಯಾಗ ಬೇಕು.
* ಒಡಂಬಡಿಕೆ ಪರಿಶೀಲನೆ: ಪ್ರಸ್ತುತ ಚಾಲ್ತಿಯಲ್ಲಿರುವ ಕೆಎಸ್‌ಸಿಎ–ಡಿಎನ್‌ಎ ಒಪ್ಪಂದದ ಷರತ್ತುಗಳನ್ನು ಪುನರ್ ಪರಿಶೀಲಿಸಿ, ಉಲ್ಲಂಘನೆಯಾಗಿದ್ದರೆ ಒಡಂಬಡಿಕೆಯನ್ನು ರದ್ದು ಮಾಡಲು ಪರಿಗಣಿಸುವುದು.
* ಇಲಾಖಾ ಹೊಣೆಗಾರಿಕೆ: ಅವ್ಯವಹಾರ ತಡೆಯುವಲ್ಲಿ ವಿಫಲರಾಗಿರುವ ಕ್ರೀಡಾ ಇಲಾಖೆ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವುದು.
* ಸಾರ್ವಜನಿಕ ಹಿತರಕ್ಷಣೆ: ಟಿಕೆಟ್ ಕಾಳಸಂತೆ, ಕಳಪೆ ಸೌಲಭ್ಯಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ತೊಂದರೆಯನ್ನು ತಪ್ಪಿಸಿ ಸಾರ್ವಜನಿಕ ಹಿತಾಸಕ್ತಿಯನ್ನು ಕಾಪಾಡುವುದು.
* ಪಾರದರ್ಶಕ ಆಡಳಿತ: ಟಿಕೆಟ್ ವಿತರಣೆ, ಹಣಕಾಸು ನಿರ್ವಹಣೆ, ಗುತ್ತಿಗೆ ಕರಾರಿನಲ್ಲಿ ಪಾರದರ್ಶಕತೆ ಇರುವಂತೆ ನೋಡಿಕೊಳ್ಳುವುದು.
* ಮಾರ್ಗಸೂಚಿ ರಚನೆ: ಮುಂದಿನ ಪಂದ್ಯಾವಳಿಗಳಿಗೆ ತಪ್ಪುಗಳು ಪುನರಾವರ್ತನೆ ಯಾಗದಂತೆ ಕಟ್ಟುನಿಟ್ಟಿನ ನೀತಿ– ನಿಯಮಾವಳಿಗಳನ್ನು ರೂಪಿಸುವುದು.
* ಕಾನೂನು ಕ್ರಮ: ನಿಯಮ ಉಲ್ಲಂಘನೆಗೆ ಕಂಪನಿ ವಿರುದ್ಧ ಕಾನೂನು ಕ್ರಮ ಪರಿಶೀಲಿಸಿ ಕೈಗೊಳ್ಳುವುದು.
* ದುರ್ನಡತೆಗೆ ತಡೆ: ಅಧಿಕಾರಿಗಳ ದುರ್ನಡತೆ ತಡೆಯಲು ಕಠಿಣ ನಿಯಮ ಜಾರಿಗೆ ತಂದು ಅನುಷ್ಠಾನಗೊಳಿಸುವುದು

ಈ ಸಂಬಂಧ ಕೂಡಲೇ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ತಮ್ಮಲ್ಲಿ ಈ ಮೂಲಕ ಮನವಿ ಸಲ್ಲಿಸಲಾಗಿದೆ ಎಂದು ಶಾಸಕ ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

# ಕಾನೂನು ವ್ಯವಸ್ಥೆ ಕಟ್ಟುನಿಟ್ಟಾಗಿ ಪಾಲಿಸಿ

## ಅಧಿಕಾರಿಗಳಿಗೆ ಸಚಿವ ದಿನೇಶ್ ಗುಂಡೂರಾವ್ ಸೂಚನೆ



**ಬೆಂಗಳೂರು, ಮೇ. 8:** ಮಂಗಳೂರಿನಲ್ಲಿ ಕಾನೂನು ಸುವ್ಯವಸ್ಥೆಯನ್ನು ಸಮರ್ಪಕವಾಗಿ ನಿಭಾಯಿಸುವಂತೆ ಜಿಲ್ಲಾ ಉಸ್ತುವಾರಿ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸೂಚನೆ ನೀಡಿದರು ವಿಧಾನ ಸೌಧದಲ್ಲಿ ಇಂದು ದಕ್ಷಿಣ ಕನ್ನಡ ಜಿಲ್ಲೆಗೆ ಸಂಬಂಧಿಸಿದಂತೆ ಸ್ಪೀಕರ್ ಯು.ಟಿ ಖಾದರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಅವರು ಜಿಲ್ಲಾಧಿಕಾರಿ ಸೇರಿದಂತೆ ಪೊಲೀಸ್ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಸಭೆಯನ್ನು ನಡೆಸಿದರು. ಜಿಲ್ಲೆಯಲ್ಲಿ ಇತ್ತೀಚೆಗೆ ನಡೆದ ಅಹಿತಕರ ಘಟನೆಗಳ ಹಿನ್ನೆಲೆಯಲ್ಲಿ ಪೊಲೀಸರು ಕಾರ್ಯಾಚರಣೆ ಬಗ್ಗೆ ಚರ್ಚೆ ನಡೆಸಿದ ಸಚಿವರು, ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಅಗತ್ಯ ಕಠಿಣ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು. ಯಾವುದೇ ಒತ್ತಡಕ್ಕೆ ಮಣಿಯುವ ಅವಶ್ಯಕತೆ ಇಲ್ಲ. ಸರ್ಕಾರ ನಿಮ್ಮ ಜೊತೆ ಇದೆ. ಕಾನೂನು ಬಾಹಿರ ಚಟುವಟಿಕೆ ನಡೆಸುವವರು ಹಾಗೂ ಅದಕ್ಕೆ ಉತ್ತೇಜನ ನೀಡುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವಂತೆ ಸ್ಪೀಕರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಮಂಗಳೂರಿನಲ್ಲಿ ನೂತನ ಜಿಲ್ಲಾಧಿಕಾರಿಗಳ ಕಟ್ಟಡ ಉದ್ಘಾಟನೆ ಕುರಿತಂತೆ ಇದೇ ವೇಳೆ ಚರ್ಚೆ ನಡೆಸಲಾಯಿತು. ಇದೇ ತಿಂಗಳ 16 ರಂದು ನೂತನ ಜಿಲ್ಲಾಧಿಕಾರಿ ಕಚೇರಿಯನ್ನ ಸಿಎಂ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದು, ಅಗತ್ಯ ತಯಾರಿಗಳನ್ನ ನಡೆಸುವಂತೆ ಜಿಲ್ಲಾಡಳಿತಕ್ಕೆ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಸೂಚನೆ ನೀಡಿದರು. ಸಭೆಯಲ್ಲಿ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ, ಮಂಗಳೂರು ಪೊಲೀಸ್ ಕಮಿಷನರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಾಗವಹಿಸಿದ್ದರು.

## ಮೊದಲನೇ ಪುಟದಿಂದ ಜನಾರ್ದನ ರೆಡ್ಡಿ ಅಪರಾಧಿ ಸಾಬೀತು

ಓಬಳಾಪುರಂ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಜನಾರ್ದನ ರೆಡ್ಡಿ ಅವರನ್ನು ಸಿಬಿಐ ನ್ಯಾಯಾಲಯ ದೋಷಿಯೆಂದು ಘೋಷಿಸಿ, ಎಳು ವರ್ಷಗಳ ಜೈಲು ಶಿಕ್ಷೆ ವಿಧಿಸಿತ್ತು. ಈ ಆದೇಶದಿಂದ ಜನಾರ್ದನ ರೆಡ್ಡಿ ಅವರ ರಾಜಕೀಯ ಭವಿಷ್ಯಕ್ಕೆ ಭಾರೀ ಹಿನ್ನಡೆಯಾಗಿದೆ.

ಸಿಬಿಐ ಕೋರ್ಟ್ ತೀರ್ಪು ಪ್ರಕಟವಾದ ತಕ್ಷಣದಿಂದಲೇ ಜಾರಿಗೆ ಬರುವಂತೆ ಜನಾರ್ದನ ರೆಡ್ಡಿ ಅವರನ್ನು ಶಾಸಕ ಸ್ಥಾನದಿಂದ ಮುಂದಿನ ಆರು ವರ್ಷಗಳ ಕಾಲ ಅನರ್ಹಗೊಳಿಸಿ ಕರ್ನಾಟಕ ವಿಧಾನಸಭೆ ಆದೇಶ ಹೊರಡಿಸಿದೆ. ಈ ಅನರ್ಹತೆ ಜನಾರ್ದನ ರೆಡ್ಡಿ ಶಿಕ್ಷೆ ಮುಗಿಸಿ ಬಿಡುಗಡೆಯಾಗುವವರೆಗೆ ಅಥವಾ ಈ ಶಿಕ್ಷೆಗೆ ಕೋರ್ಟ್ ತಡೆ ನೀಡುವವರೆಗೆ ಇರಲಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಇನ್ನೂ ನಿಯಮದ ಪ್ರಕಾರ ಯಾವುದೇ ಶಾಸಕ ಅಥವಾ ಸಂಸದ ಎರಡು ವರ್ಷ ಅಥವಾ ಅದಕ್ಕಿತಂ ಮೇಲ್ಪಟ್ಟು ಶಿಕ್ಷೆಗೆ ಗುರಿಯಾದರೆ ಶಾಸಕ ಸ್ಥಾನ ರದ್ದಾಗಲಿದೆ.

# 14000 ಟನ್ ಸಾಮರ್ಥ್ಯದ 6 ಶೀತಲ ಘಟಕಗಳ ನಿರ್ಮಾಣ: ಸಚಿವ ಮಲ್ಲಿಕಾರ್ಜುನ್



**ಬೆಂಗಳೂರು, ಮೇ 8:** ರಾಜ್ಯದ ತೋಟಗಾರಿಕಾ ಕ್ಷೇತ್ರ ಹಾಗೂ ವಲಯಗಳ ಅಭಿವೃದ್ಧಿಗೆ ಪಣತೊಡಲಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕಾ ಸಚಿವ ಎಸ್.ಎಸ್ ಮಲ್ಲಿಕಾರ್ಜುನ್ ತಿಳಿಸಿದರು.

ತಮ್ಮ ಗೃಹ ಕಚೇರಿಯಲ್ಲಿ ಈ ಸಂಬಂಧ ಇಲಾಖೆ ಉನ್ನತ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ನಂತರ ಮಾಹಿತಿ ನೀಡಿದ ಅವರು, ಸಚಿವ ಸಂಪುಟದ ನಿರ್ಣಯಗಳ ಮೇಲೆ ತೋಟಗಾರಿಕಾ ವಲಯಗಳ ಅಭಿವೃದ್ಧಿಗೆ ಹಲವು ಕಾರ್ಯಕ್ರಮಗಳನ್ನು ರೂಪುಗೊಳಿಸಲಾಗಿದೆ ಎಂದು ತಿಳಿಸಿದರು.

ಆರ್‌ಐಡಿಎಫ್ –29ನೇ ಟ್ರಾಂಚೆ ಅಡಿ ಹಾವೇರಿ, ಕೋಲಾರ, ಮಂಡ್ಯ ಶಿವಮೊಗ್ಗ, ವಿಜಯಪುರ ಮತ್ತು ಹಾಸನ 6 ಜಿಲ್ಲೆಗಳಲ್ಲಿ ತೋಟಗಾರಿಕೆ ಬೆಳೆಗಾರರಿಗೆ ಅನುಕೂಲವಾಗುವಂತೆ 14000 ಟನ್ ಸಾಮರ್ಥ್ಯದ 6 ಶೀತಲ ಘಟಕಗಳ ನಿರ್ಮಾಣವನ್ನು ರೂ.65.97 ಕೋಟಿ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಆರ್‌ಐಡಿಎಫ್ 29ನೇ ಟ್ರಾಂಚೆ ಅಡಿ ಚಿತ್ರದುರ್ಗ, ರಾಯಚೂರು ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ 3 ತೋಟಗಾರಿಕೆ ತರಬೇತಿ ಕೇಂದ್ರಗಳು ಮತ್ತು ಬೆಳಗಾವಿ ಜಿಲ್ಲೆಯ ಅರಬಾವಿಯಲ್ಲಿ 1 ವಿದ್ಯಾರ್ಥಿನಿಯರ ನಿಲಯ ನಿರ್ಮಾಣಕ್ಕೆ ಒಟ್ಟು ರೂ.35.14 ಕೋಟಿ ವೆಚ್ಚದಲ್ಲಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದರು.

ವಿಜಯಪುರ ಜಿಲ್ಲೆಯ ಅಲಮೇಲದಲ್ಲಿ ತೋಟಗಾರಿಕೆ ಕಾಲೇಜು ನಿರ್ಮಾಣ ಮಾಡಲು ರೂ.39.95 ಕೋಟಿಗಳ ಕಾಮಗಾರಿಗೆ ಅನುಮೋದನೆ ನೀಡಲಾಗಿದ್ದು, 25 ವಿದ್ಯಾರ್ಥಿಗಳಿಗೆ ಬಾಗಲಕೋಟಿ ಕ್ಯಾಂಪಸ್‌ನಲ್ಲಿ ಪ್ರವೇಶ ನೀಡಲಾಗಿದೆ. ತೋಟಗಾರಿಕೆ ಬೆಳೆಗಳಲ್ಲಿ ಹೆಚ್ಚು ಇಂಗಾಲವನ್ನು ಹಿಡಿದಿಟ್ಟುಕೊಳ್ಳುವ ಬೆಳೆಗಳನ್ನು ಗುರುತಿಸಿ ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಾರ್ಬನ್ ಕ್ರೆಡಿಟ್ ರೂಪದಲ್ಲಿ ಮಾರಾಟ ಮಾಡುವ ಮೂಲಕ ರೈತರು ಹೆಚ್ಚಿನ ಆದಾಯ ಗಳಿಸಲು 3 ಕಾರ್ಬನ್ ಕ್ರೆಡಿಟ್ ಫ್ರೇಮ್ ವರ್ಕ್ ಯೋಜನೆಯನ್ನು ತೋಟಗಾರಿಕೆ ಇಲಾಖೆಯ ಪ್ರಥಮ ಬಾರಿಗೆ ರಾಜ್ಯದ ರೈತರಿಗೆ ಪರಿಚಯಿಸಲಿದೆ ಎಂದರು.

ಪುಷ್ಪ ಕೃಷಿಯನ್ನು ಪ್ರೋತ್ಸಾಹಿಸಲು ಅಂತರಾಷ್ಟ್ರೀಯ ಪುಷ್ಪ ಹರಾಜು ಬೆಂಗಳೂರು ಸಂಸ್ಥೆಗೆ ಹೆಬ್ಬಾಳದಲ್ಲಿ ಬಾಡಿಗೆ ರಹಿತ ಆಧಾರದ ಮೇಲೆ ಜಮೀನು ನೀಡಲಾಗಿದೆ. ಪ್ರವಾಸೋದ್ಯಮ ಇಲಾಖೆಯ ಸಹಯೋಗದೊಂದಿಗೆ ನಂದಿ ಬೆಟ್ಟದಲ್ಲಿ ರೋಪ್ವೇ ನಿರ್ಮಿಸುವ ಸಲುವಾಗಿ ತೋಟಗಾರಿಕೆ ಇಲಾಖೆಯ ಜಮೀನನ್ನು ಮಂಜೂರು ಮಾಡಲಾಗಿದೆ ಎಂದು ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಇದೇ ವೇಳೆ ಮಾಹಿತಿ ನೀಡಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

### ಪ್ರಧಾನಿ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ

# ರಾಷ್ಟ್ರೀಯ ಸುರಕ್ಷತೆಗೆ ಸರ್ಕಾರ ಬದ್ಧ: ಮೋದಿ



**ನವದೆಹಲಿ, ಮೇ 8:** ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಇತ್ತೀಚಿನ ಬೆಳವಣಿಗೆಗಳ ಹಿನ್ನೆಲೆಯಲ್ಲಿ ರಾಷ್ಟ್ರೀಯ ಸನ್ನದ್ಧತೆ ಮತ್ತು ಅಂತರ–ಸಚಿವಾಲಯ ಸಮನ್ವಯವನ್ನು ಪರಿಶೀಲಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಗುರುವಾರ ಕೇಂದ್ರದ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳ ಕಾರ್ಯದರ್ಶಿಗಳೊಂದಿಗೆ ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಾಚರಣೆಯ ನಿರಂತರತೆ ಮತ್ತು ಸಾಂಸ್ಥಿಕ ಸ್ಥಿತಿಸ್ಥಾಪಕತ್ವವನ್ನು ಎತ್ತಿಹಿಡಿಯಲು ಸಚಿವಾಲಯಗಳು ಮತ್ತು ಸಂಸ್ಥೆಗಳ ನಡುವೆ ತಡೆರಹಿತ ಸಮನ್ವಯದ ಅಗತ್ಯವನ್ನು ಪ್ರಧಾನಿ ಮೋದಿ ಒತ್ತಿ ಹೇಳಿದರು ಎಂದು ಅಧಿಕೃತ ಹೇಳಿಕೆ ತಿಳಿಸಿದೆ. ಪ್ರಸ್ತುತ ಪರಿಸ್ಥಿತಿಯನ್ನು ಎದುರಿಸಲು ಸಚಿವಾಲಯಗಳ ಯೋಜನೆ ಮತ್ತು ಸಿದ್ಧತೆಯನ್ನು ಅವರು ಪರಿಶೀಲಿಸಿದರು ಮತ್ತು ರಾಷ್ಟ್ರವು ಸೂಕ್ಷ್ಮ ಅವಧಿಯಲ್ಲಿ ಸಾಗುತ್ತಿರುವಾಗ ನಿರಂತರ ಜಾಗರೂಕತೆ, ಸಾಂಸ್ಥಿಕ ಸಿನರ್ಜಿ ಮತ್ತು ಸ್ಪಷ್ಟ ಸಂವಹನಕ್ಕೆ ಕರೆ ನೀಡಿದರು. ರಾಷ್ಟ್ರೀಯ ಭದ್ರತೆ, ಕಾರ್ಯಾಚರಣೆಯ ಸನ್ನದ್ಧತೆ ಮತ್ತು ನಾಗರಿಕ ಸುರಕ್ಷತೆಗೆ ಸರ್ಕಾರದ ಬದ್ಧತೆಯನ್ನು ಅವರು ಪುನರುಚ್ಚರಿಸಿದರು. ಕಾರ್ಯದರ್ಶಿಗಳು ತಮ್ಮ ಸಚಿವಾಲಯದ ಕಾರ್ಯಾಚರಣೆಗಳ ಸಮಗ್ರ ಪರಿಶೀಲನೆಯನ್ನು ಕೈಗೊಳ್ಳಲು ಮತ್ತು ಸನ್ನದ್ಧತೆ, ತುರ್ತು ಪ್ರತಿಕ್ರಿಯೆ ಮತ್ತು ಆಂತರಿಕ ಸಂವಹನ ಪ್ರೋಟೋಕಾಲ್‌ಗಳ ಮೇಲೆ ವಿಶೇಷ ಗಮನ ಹರಿಸಿ ಅಗತ್ಯ ವ್ಯವಸ್ಥೆಗಳ ಮೂರ್ಖತನವಿಲ್ಲದ ಕಾರ್ಯ ನಿರ್ವಹಣೆಯನ್ನು ಖಚಿತ ಪಡಿಸಿಕೊಳ್ಳಲು ನಿರ್ದೇಶಿಸಲಾಗಿದೆ. ಕಾರ್ಯದರ್ಶಿಗಳು ಪ್ರಸ್ತುತ ಪರಿಸ್ಥಿತಿಯಲ್ಲಿ ಸಂಪೂರ್ಣ ಸರ್ಕಾರದ ವಿಧಾನದೊಂದಿಗೆ ತಮ್ಮ ಯೋಜನೆಯನ್ನು ವಿವರಿಸಿದರು. ಎಲ್ಲಾ ಸಚಿವಾಲಯಗಳು ಸಂಘರ್ಷಕ್ಕೆ ಸಂಬಂಧಿಸಿದಂತೆ ತಮ್ಮ ಕಾರ್ಯಸಾಧ್ಯತೆಗಳನ್ನು ಗುರುತಿಸಿವೆ ಮತ್ತು ಪ್ರಕ್ರಿಯೆಗಳನ್ನು ಬಲಪಡಿಸುತ್ತಿವೆ. ಎಲ್ಲಾ ರೀತಿಯ ಉದಯೋನ್ಮುಖ ಸನ್ನಿವೇಶಗಳನ್ನು ಎದುರಿಸಲು ಸಚಿವಾಲಯಗಳು ಸಿದ್ಧವಾಗಿವೆ. ಸಭೆಯಲ್ಲಿ ಹಲವಾರು ವಿಷಯಗಳ ಕುರಿತು ಚರ್ಚಿಸಲಾಯಿತು. ಇವುಗಳಲ್ಲಿ, ನಾಗರಿಕ ರಕ್ಷಣಾ ಕಾರ್ಯವಿಧಾನಗಳನ್ನು ಬಲಪಡಿಸುವುದು, ತಪ್ಪು ಮಾಹಿತಿ ಮತ್ತು ನಕಲಿ ಸುದ್ದಿಗಳನ್ನು ಎದುರಿಸುವ ಪ್ರಯತ್ನಗಳು ಮತ್ತು ನಿರ್ಣಾಯಕ ಮೂಲಸೌಕರ್ಯಗಳ ಸುರಕ್ಷತೆಯನ್ನು ಖಚಿತಪಡಿಸುವುದು ಸೇರಿವೆ. ರಾಜ್ಯ ಅಧಿಕಾರಿಗಳು ಮತ್ತು ತಳಮಟ್ಟದ ಸಂಸ್ಥೆಗಳೊಂದಿಗೆ ನಿಕಟ ಸಮನ್ವಯವನ್ನು ಕಾಯ್ದುಕೊಳ್ಳಲು ಸಚಿವಾಲಯಗಳಿಗೆ ಸೂಚಿಸಲಾಯಿತು. ಸಭೆಯಲ್ಲಿ ಸಂಪುಟ ಕಾರ್ಯದರ್ಶಿ, ಪ್ರಧಾನ ಮಂತ್ರಿ ಕಚೇರಿಯ ಹಿರಿಯ ಅಧಿಕಾರಿಗಳು ಮತ್ತು ರಕ್ಷಣಾ, ಗೃಹ ವ್ಯವಹಾರಗಳು, ವಿದೇಶಾಂಗ ವ್ಯವಹಾರಗಳು, ಮಾಹಿತಿ ಮತ್ತು ಪ್ರಸಾರ, ವಿದ್ಯುತ್, ಆರೋಗ್ಯ ಮತ್ತು ದೂರಸಂಪರ್ಕ ಸೇರಿದಂತೆ ಪ್ರಮುಖ ಸಚಿವಾಲಯಗಳ ಕಾರ್ಯದರ್ಶಿಗಳು ಭಾಗವಹಿಸಿದ್ದರು.

# ನೀಲಂ ಜಲ ಯೋಜನೆ ಮೇಲೆ ದಾಳಿ: ಭಾರತ ನಿರಾಕರಣೆ

### ಭಾರತೀಯ ಮೂಲಸೌಕರ್ಯಗಳ ಮೇಲೆ ದಾಳಿಗೆ ಇದನ್ನು ನೆಪವಾಗಿಸದಂತೆ ಪಾಕ್‌ಗೆ ಎಚ್ಚರಿಕೆ

**ನವದೆಹಲಿ, ಮೇ 8:** ಪಿಒಕೆಯಲ್ಲಿರುವ ನೀಲಂ–ಝೀಲಂ ಜಲವಿದ್ಯುತ್ ಸ್ಥಾವರದ ಮೇಲೆ ಭಾರತೀಯ ಸಶಸ್ತ್ರ ಪಡೆಗಳು ದಾಳಿ ಮಾಡಿವೆ ಎಂಬ ಪಾಕಿಸ್ತಾನ ನಾಯಕತ್ವದ ಹೇಳಿಕೆಯನ್ನು ಭಾರತ ಗುರುವಾರ ಶುದ್ಧ ಸುಳ್ಳು ಎಂದು ಕರೆದಿದೆ ಮತ್ತು ಇಸ್ಲಾಮಾಬಾದ್ ಭಾರತೀಯ ಮೂಲಸೌಕರ್ಯಗಳನ್ನು ಗುರಿಯಾಗಿಸಿ ಕೊಂಡಿದ್ದಕ್ಕೆ ಅದನ್ನು ನೆಪವನ್ನಾಗಿ ಮಾಡಲು ಪ್ರಯತ್ನಿಸಿದರೆ, ನಿಸ್ಸಂದೇಹವಾಗಿ ನಂತರದ ಪರಿಣಾಮಗಳಿಗೆ ಪಾಕಿಸ್ತಾನ ಸಂಪೂರ್ಣ ಹೊಣೆಗಾರ ನಾಗಿರುತ್ತದೆ ಎಂದು ಎಚ್ಚರಿಸಿದೆ. ಆಪರೇಷನ್ ಸಿಂಧೂರ್ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ, ಪಾಕಿಸ್ತಾನದ ಉಪ ಪ್ರಧಾನ ಮಂತ್ರಿ ಮತ್ತು ವಿದೇಶಾಂಗ ಸಚಿವ ಇಶಾಕ್ ದಾರ್ ಹೇಳಿಕೊಂಡಿರುವಂತೆ ಭಾರತ ಮತ್ತು ಪಾಕಿಸ್ತಾನದ ರಾಷ್ಟ್ರೀಯ ಭದ್ರತಾ ಸಲಹೆಗಾರರ ನಡುವಿನ ಯಾವುದೇ ಸಂಪರ್ಕವನ್ನು ನಿರಾಕರಿಸಿದ್ದಾರೆ.





ಮುಜಫರಾಬಾದ್‌ನಲ್ಲಿರುವ ನೀಲಂ–ಝೀಲಂ ಸ್ಥಾವರದ ಮೇಲೆ ಭಾರತ ದಾಳಿ ಮಾಡಿದೆ ಎಂಬ ಪಾಕಿಸ್ತಾನದ ಹೇಳಿಕೆಗಳ ಕುರಿತು ಅವರು ಹೀಗೆ ಹೇಳಿದರು:

ಇದು ಸಂಪೂರ್ಣ ಮತ್ತು ಸಂಪೂರ್ಣ ಕಟ್ಟುಕಥೆ ಮತ್ತು ಸ್ಪಷ್ಟ ಸುಳ್ಳು.ಭಾರತವು ಭಯೋತ್ಪಾದಕ ಮೂಲಸೌಕರ್ಯವನ್ನು ಮಾತ್ರ ಗುರಿಯಾಗಿಸಿಕೊಂಡಿದೆ. ಈ ರೀತಿಯ ಹೇಳಿಕೆಯು ಇದೇ ರೀತಿಯ ಭಾರತೀಯ ಮೂಲಸೌಕರ್ಯಗಳನ್ನು ಗುರಿಯಾಗಿಸಲು ನೆಪವಾಗಿದ್ದರೆ, ನಿಸ್ಸಂದೇಹವಾಗಿ ಅನುಸರಿಸುವ ಪರಿಣಾಮಗಳಿಗೆ ಪಾಕಿಸ್ತಾನವು ಸಂಪೂರ್ಣವಾಗಿ ಜವಾಬ್ದಾರವಾಗಿರುತ್ತದೆ ಎಂಬುದನ್ನು ನಾನು ಗಮನಿಸಬೇಕು.

– ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ.

"ಭಾರತದ ಪ್ರತಿಕ್ರಿಯೆಯನ್ನು ನಿಖರವಾಗಿ, ನಿಯಂತ್ರಿಸ ಲಾಗಿದೆ ಮತ್ತು ಅಳೆಯಲಾಗಿದೆ. ಯಾವುದೇ ಮಿಲಿಟರಿ ಗುರಿಗಳನ್ನು ಆಯ್ಕೆ ಮಾಡಲಾಗಿಲ್ಲ. ಪಾಕಿಸ್ತಾನದಲ್ಲಿರುವ ಭಯೋತ್ಪಾದಕ ಮೂಲಸೌಕರ್ಯವನ್ನು ಮಾತ್ರ ಹೊಡೆಯಲಾಗಿದೆ ಎಂದು ಅವರು ಹೇಳಿದರು. ದಾಳಿಯಲ್ಲಿ ನಾಗರಿಕರು ಮಾತ್ರ ಸಾವನ್ನಪ್ಪಿದ್ದಾರೆ ಎಂಬ ಪಾಕಿಸ್ತಾನದ ಹೇಳಿಕೆಗಳ ಕುರಿತು ಅವರು ಹೇಳಿದರು: "ಮೇ 7 ರ ಬೆಳಿಗ್ಗೆ ನಡೆದ ಎಲ್ಲಾ ದಾಳಿಗಳು ಎಚ್ಚರಿಕೆಯಿಂದ ಆಯ್ಕೆಮಾಡಿದ ಭಯೋತ್ಪಾದಕ ಮೂಲಸೌಕರ್ಯಗಳ ವಿರುದ್ಧವಾಗಿವೆ ಎಂದು ನಾವು ಸ್ಪಷ್ಟಪಡಿಸಿದ್ದೇವೆ. ಇಂದು ನಾವು ನೋಡುತ್ತಿರುವ ಪಾಕಿಸ್ತಾನದ ಯಾವುದೇ ಮುಂದಿನ ಕ್ರಮವು ಪಾಕಿಸ್ತಾನದ ಉಲ್ಬಣವನ್ನು ಹೊರತುಪಡಿಸಿ ಬೇರೇನೂ ಅಲ್ಲ, ಮತ್ತು ಅದಕ್ಕೆ ಸೂಕ್ತವಾಗಿ ಪ್ರತಿಕ್ರಿಯಿಸಲಾಗುವುದು" ಎಂದು ಅವರು ಹೇಳಿದರು.

# ನಮ್ಮ ಮೇಲೆ ಯಾವುದೇ ಮಿಲಿಟರಿ ದಾಳಿಗೆ ದಿಟ್ಟ ಪ್ರತಿಕ್ರಿಯೆ: ಜೈಶಂಕರ್ ಎಚ್ಚರಿಕೆ



**ನವದೆಹಲಿ, ಮೇ 8:** ಪಾಕಿಸ್ತಾನ ದೊಂದಿಗಿನ ಸಂಬಂಧಗಳಲ್ಲಿ ಹೆಚ್ಚುತ್ತಿರುವ ಏರಿಕೆಯ ನಡುವೆ, ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಇಂದು ಪಾಕಿಸ್ತಾನದೊಂದಿಗೆ ಪರಿಸ್ಥಿತಿಯನ್ನು ಉಲ್ಬಣಗೊಳಿಸುವುದು ಭಾರತದ ಉದ್ದೇಶವಲ್ಲ, ಆದರೆ ನಮ್ಮ ಮೇಲೆ ಮಿಲಿಟರಿ ದಾಳಿಗಳು ನಡೆದರೆ, ಅದಕ್ಕೆ ಅತ್ಯಂತ ದೃಢವಾದ ಪ್ರತಿಕ್ರಿಯೆ ನೀಡಲಾಗುವುದು ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ಹೇಳಿದರು.

ಭೇಟಿ ನೀಡಿದ ಇರಾನ್ ವಿದೇಶಾಂಗ ಸಚಿವ ಸಯ್ಯದ್ ಅಬ್ಬಾಸ್ ಅರಕ್ಚಿ ಅವರೊಂದಿಗಿನ ದ್ವಿಪಕ್ಷೀಯ ಮಾತುಕತೆಯ ಸಂದರ್ಭದಲ್ಲಿ ಮಾತನಾಡಿದ ಇಎಎಂ, ನೆರೆಯ ಮತ್ತು ನಿಕಟ ಪಾಲುದಾರನಾಗಿ ಇರಾನ್ "ಈ ಪರಿಸ್ಥಿತಿಯ ಬಗ್ಗೆ ಉತ್ತಮ ತಿಳುವಳಿಕೆಯನ್ನು ಹೊಂದಿರಬೇಕು" ಎಂದು ತಿಳಿಸಿದರು. ಅವರು ಹೇಳಿದರು. ಏಪ್ರಿಲ್ 22 ರಂದು ಭಾರತದ ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ವಿಶೇಷವಾಗಿ ಅನಾಗರಿಕ ಭಯೋತ್ಪಾದಕ ದಾಳಿಗೆ ನಾವು ಪ್ರತಿಕ್ರಿಯಿಸುತ್ತಿರುವ ಸಮಯದಲ್ಲಿ ನೀವು ಭಾರತಕ್ಕೆ ಭೇಟಿ ನೀಡುತ್ತಿದ್ದೀರಿ.

ಈ ದಾಳಿಯು ಮೇ 7 ರಂದು ಗಡಿಯಾಚೆಗಿನ ಭಯೋತ್ಪಾದಕ ಮೂಲಸೌಕರ್ಯಗಳ ಮೇಲೆ ದಾಳಿ ಮಾಡುವ ಮೂಲಕ ಪ್ರತಿಕ್ರಿಯಿಸಲು ನಮ್ಮನ್ನು ಒತ್ತಾಯಿಸಿತು. ನಮ್ಮ ಪ್ರತಿಕ್ರಿಯೆಯನ್ನು ಗುರಿಯಾಗಿಸಿಕೊಂಡು ಅಳೆಯಲಾಗಿತ್ತು. ಈ ಪರಿಸ್ಥಿತಿಯನ್ನು ಉಲ್ಬಣಗೊಳಿಸುವುದು ನಮ್ಮ ಉದ್ದೇಶವಲ್ಲ. ಆದಾಗ್ಯೂ, ನಮ್ಮ ಮೇಲೆ ಮಿಲಿಟರಿ ದಾಳಿಗಳು ನಡೆದರೆ, ಅದಕ್ಕೆ ಬಹಳ ದೃಢವಾದ ಪ್ರತಿಕ್ರಿಯೆ ನೀಡಲಾಗುವುದು ಎಂಬುದರಲ್ಲಿ ಸಂದೇಹವಿಲ್ಲ. ನೆರೆಹೊರೆಯವರು ಮತ್ತು ನಿಕಟ ಪಾಲುದಾರರಾಗಿ, ನೀವು ಈ ಪರಿಸ್ಥಿತಿಯ ಬಗ್ಗೆ ಉತ್ತಮ ತಿಳುವಳಿಕೆಯನ್ನು ಹೊಂದಿರುವುದು ಮುಖ್ಯ. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತವು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ಶಿಬಿರಗಳ ಮೇಲೆ ಗಡಿಯಾಚೆಗಿನ ದಾಳಿಯನ್ನು ನಡೆಸಿದ ಒಂದು ದಿನದ ನಂತರ ವಿದೇಶಾಂಗ ಸಚಿವರ ಈ ಹೇಳಿಕೆಗಳು ಬಂದಿವೆ.

# ರಾಜ್ಯದ ಎಲ್ಲ 17 ಅಣೆಕಟ್ಟುಗಳಿಗೆ ಭದ್ರತೆ ಹೆಚ್ಚಿಸಲು ಸರ್ಕಾರ ಆದೇಶ

**ಬೆಂಗಳೂರು,ಮೇ 8:** ಆಪರೇಷನ್ ಸಿಂದೂರ' ಮೂಲಕ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ, ಭಾರತೀಯ ಸೇನೆ ಯಶಸ್ವಿಯಾಗಿ ಸೇಡು ತೀರಿಸಿಕೊಂಡಿದದೆ. ಇದರ ಬೆನ್ನಲ್ಲೇ ಕೇಂದ್ರ ಸರ್ಕಾರ ತುರ್ತು ಆದೇಶ ಹೊರಡಿಸಿದೆ. ರಾಜ್ಯದಲ್ಲಿರುವ ಎಲ್ಲಾ ಅಣೆಕಟ್ಟುಗಳಿಗೆ ಬಿಗಿ ಭದ್ರತೆ ನೀಡುವಂತೆ ಸೂಚನೆ ನೀಡಲಾಗಿದೆ. ತಮ್ಮ ನಿಗಮ ಮತ್ತು ವಲಯ ವ್ಯಾಪ್ತಿಯಲ್ಲಿ ಬರುವ ಅಣೆಕಟ್ಟುಗಳಿಗೆ ಭದ್ರತೆ ನೀಡಿ ಆದೇಶ ಬೆನ್ನಲ್ಲೇ ಹೆಚ್ಚಿನ ಸಂಖ್ಯೆಯಲ್ಲಿ ಭದ್ರತಾ ಸಿಬ್ಬಂದಿ ನೇಮಕ ಮಾಡಲಾಗುತ್ತಿದೆ. ಇದರ ಬೆನ್ನಲ್ಲೆ ಕರ್ನಾಟಕದಲ್ಲಿ ವಿವಿಧ ಜಲಾಶಯಗಳ ಭದ್ರತೆ ಹೆಚ್ಚಿಸಲಾಗಿದೆ. "ರಾಯಚೂರು, ಕೈಗಾ, ಕೆಆರ್‌ಎಸ್‌ಗೆ ಭದ್ರತೆ ಹೆಚ್ಚಳ ಮಾಡಲಾಗಿದೆ" ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದರು.ಸದಾಶಿವನಗರ ನಿವಾಸದ ಬಳಿ ಮಾತನಾಡಿದ ಅವರು, ರಾಜ್ಯದಲ್ಲಿ ಭದ್ರತೆ ಹೆಚ್ಚಳ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, "ಭದ್ರತೆಗೆ ಸ್ಪೆಷಲ್ ಫೋರ್ಸಸ್ ಬಳಕೆ ಮಾಡಿಕೊಳ್ಳುತ್ತಿದ್ದೇವೆ. ರಾಯಚೂರು, ಕೈಗಾ, ಕೆ.ಆರ್.ಎಸ್ಗೆ ಭದ್ರತೆ ಹೆಚ್ಚಿಸಲಾಗಿದೆ. ಅದಕ್ಕಾಗಿ ಕೈಗಾರಿಕಾ ಭದ್ರತಾ ಪಡೆ ಬಳಕೆ ಮಾಡಿಕೊಳ್ಳುತ್ತೇವೆ. ಅವರಿಗೆ ಕಮಾಂಡೋ ಟ್ರೈನಿಂಗ್ ಎಲ್ಲಾ ಆಗಿದೆ. ಹೆಚ್ಚುವರಿಯಾಗಿ ಅವರನ್ನು ಬಳಸಿಕೊಳ್ಳುತ್ತೇವೆ" ಎಂದರು."ಎಲ್ಲಾ ಇಲಾಖೆಯಲ್ಲೂ ಭದ್ರತೆಗೆ ಬೇಕಾದ ಸಂಖ್ಯೆ ಇದೆ. ಅಲ್ಲದೇ ಒಂದು ವೇಳೆ ಭದ್ರತೆಯಲ್ಲಿ ಯಾವುದೇ ದೋಷ ಕಂಡುಬಂದರೆ, ಸಂಬಂಧಪಟ್ಟ ಯೋಜನಾಧಿಕಾರಿ ಅಥವಾ ಅಣೆಕಟ್ಟು ಅಧಿಕಾರಿಗಳೇ ಹೊಣೆಗಾರರು ಎಂದು ರಾಜ್ಯದ 17 ಅಣೆಕಟ್ಟುಗಳ ಮುಖ್ಯ ಎಂಜಿನಿಯರ್ ಹಾಗೂ ವ್ಯವಸ್ಥಾಪಕ ನಿರ್ದೇಶಕರಿಗೆ ಖಡಕ್ ಸೂಚನೆ ನೀಡಲಾಗಿದೆ. ಎಲ್ಲಾ ಜಿಲ್ಲೆಗಳಿಗೆ ಕಟ್ಟುನಿಟ್ಟಾಗಿ ತಿಳಿಸಿದ್ದೇವೆ. ಎಸ್ಪಿಗಳಿಗೆ ಭದ್ರತೆ ಬಗ್ಗೆ ಸೂಚಿಸಿದ್ದೇವೆ" ಎಂದು ತಿಳಿಸಿದರು. ಬಂದರು ಇರುವ ಮಂಗಳೂರು, ಕಾರಾವಾರದಂತಹ ಕರಾವಳಿ ಪ್ರದೇಶಗಳಲ್ಲಿ ಹೈ ಅಲರ್ಟ್ ಘೋಷಿಸಲಾಗಿದೆ. ಎಲ್ಲೆಡೆ ಕಟ್ಟೆಚ್ಚರ ವಹಿಸಲಾಗಿದೆ. ಕಾವಲು ಪಡೆಗಳ ಸಿಬ್ಬಂದಿ ಆಗಾಗ ಬಂದರು ಅನ್ನು ಪರಿಶೀಲನೆ ಮಾಡಲಿದ್ದಾರೆ. ಮುಖ್ಯವಾಗಿ ಬೆಂಗಳೂರಲ್ಲಿರುವ ಡಿಆರ್‌ಡಿಒ, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಸೇರಿದಂತೆ ಕೇಂದ್ರ ರಕ್ಷಣಾ ಇಲಾಖೆ ವ್ಯಾಪ್ತಿಯ ಎಲ್ಲ ಕಚೇರಿಗಳಿಗೆ, ಕ್ಯಾಂಪಸ್‌ಗಳಿಗೆ ಕೇಂದ್ರ ಸರ್ಕಾರ ಭದ್ರತೆ ಹೆಚ್ಚಿಸಿದೆ.

**ಉಗ್ರರ ನೆಲೆಗಳ ಮೇಲೆ ದಾಳಿ ಹಿನ್ನೆಲ**

**ಪಾಕಿಸ್ತಾನದಲ್ಲಿ ಅಡಗಿರುವ ಉಗ್ರರ ನೆಲೆಗಳ ಮೇಲೆ ಭಾರತ ದಾಳಿಮಾಡಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಕೇಂದ್ರ ಸರ್ಕಾರದ ಸೂಚನೆಯಂತೆ ಎಲ್ಲೆಡೆ ಅಣುಕು ಕವಾಯತು ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಮದ್ದೂರು ಕಾಫಿ ಡೇ ಹತ್ತಿರದ ಗೆಜ್ಜಲಗೆರೆ ಹೆಲಿಪ್ಯಾಡ್ ನಲ್ಲಿ ಬಂದಿಳಿದು ಕಾರ್ಯಕ್ರಮಕ್ಕೆ ತೆರಳುವ ಮುನ್ನ ಮಾಧ್ಯಮ ವದರೊಂದಿಗೆ ಮಾತನಾಡಿದರು. ಎಲ್ಲೆಡೆ ಎಚ್ಚರಿಕೆ ಅಣೆಕಟ್ಟುಗಳ ಸುರಕ್ಷತೆಯ ದೃಷ್ಟಿಯಲ್ಲಿ ಎಲ್ಲೆಡೆ ಎಚ್ಚರಿಕೆ ನೀಡಲಾಗಿದ್ದು, ಯಾವ ಘಳಿಗೆಯಲ್ಲಿ ಏನಾದರೂ ಆಗಬಹುದು ಎಂದು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.**

# ಆಪರೇಷನ್ ಸಿಂದೂರ್: ಮಾಸ್ಟರ್ ಮೈಂಡ್ ರವೂಫ್ ಅಜರ್ ಹತ್ಯೆ


ಭಾರತ ನಡೆಸಿದ 'ಆಪರೇಷನ್ ಸಿಂದೂರ್' ಕಾರ್ಯಾಚರಣೆಯಲ್ಲಿ ಜಾಗತಿಕ ಉಗ್ರ ಎಂದು ವಿಶ್ವಸಂಸ್ಥೆ ಘೋಷಣೆ ಮಾಡಿರುವ ನಿಷೇಧಿತ ಜೈಷ್–ಇ–ಮೊಹಮ್ಮದ್ ಉಗ್ರ ಸಂಘಟನೆ ಸ್ಥಾಪಕ ಮಸೂದ್ ಅಜಾರ್ ಸಹೋದರ ಹಾಗೂ ಐಸಿ–814 ವಿಮಾನ ಹೈಜಾಕ್ ಮಾಸ್ಟರ್ ಮೈಂಡ್ ಅಬ್ದುಲ್ ರವೂಫ್ ಅಜರ್ ಆಲಿಯಸ್ ಮುಫ್ತಿ ಅಬ್ದುಲ್ ರವೂಫ್ ಅಜರ್ ಹತ್ಯೆಯಾಗಿದೆ. ಬಹವಾಲ್ಪುರದಲ್ಲಿ ನಡೆಸಿದ ಏರ್‌ಸ್ಟ್ರೈಕ್ ವೇಳೆ ಜೈಶ್–ಎ–ಮೊಹಮದ್ದ್ನ ಘಟನೆಯ ಅಜರ್ ಮಸೂದ್ನ ಕುಟುಂಬದ 13 ಮಂದಿ. ಸಾವನ್ನಪ್ಪಿದ್ದರು. ಈ ಪೈಕಿ ಅಜರ್ ಮಸೂದ್ ಸಹೋದರ ಅಬ್ದುಲ್ ರೌಫ್ ಕೂಡ ಗಂಭೀರ ಗಾಯಗೊಂಡು ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾನೆ ಎಂದು ಗುಪ್ತಚರ ಇಲಾಖೆ ಮಾಹಿತಿ ನೀಡಿದೆ. ಭಾರತೀಯ ಸೇನಾಪಡೆಗಳು ಪಂಜಾಬ್ ಪ್ರಾಂತ್ಯದ ಜೆಎಂನ ಬಹವಾಲ್ಪುರ್ ನ ಪ್ರಮುಖ ಕೇಂದ್ರ ಮತ್ತು ಲಷ್ಕರ್–ಎ–ತೊಯ್ಯಾದ ಪ್ರಧಾನ ಕಚೇರಿಮುರ್ಡಿಕೆಯಲ್ಲಿ ವೈಮಾನಿಕ ದಾಳಿ ನಡೆಸಿ, ಅವುಗಳನ್ನು ನಾಶಪಡಿಸಿತ್ತು. ದೀರ್ಘಕಾಲದಿಂದ ಇಲ್ಲಿಂದಲೇ ಉಗ್ರರಿಗೆ ತರಬೇತಿ ನೀಡುವ ಮೂಲಕ ಭಾರತದ ಮೇಲೆ ದಾಳಿ ನಡೆಸಲಾಗುತಿತ್ತು. ಅಬ್ದುಲ್ ರೌಫ್ ಅಜರ್ ಕಂದಹಾರ್ ವಿಮಾನ ಹೈಜಾಕ್ ಮಾತ್ರವಲ್ಲದೆ, ಉರಿ, ಪುಲ್ವಾಮಾ, ಪಠಾಣ್ ಕೋಟ್ ಭಯೋತ್ಪಾದಕ ದಾಳಿ, 2001ರ ಸಂಸತ್ ದಾಳಿ, ಅಕ್ಷರಧಾಮ ದಾಳಿಯಲ್ಲೂ ಭಾಗಿಯಾಗಿದ್ದನು. ವಾಲ್ ಸ್ಟ್ರೀಟ್ ಜರ್ನಲ್ನ ಅಮೇರಿಕನ್–ಯಹೂದಿ ಪತ್ರಕರ್ತ ಡೇನಿಯಲ್ ಪರ್ಲ್ ಅವರನ್ನು ಅಪಹರಿಸಿ ಹತ್ಯೆ ಮಾಡಲು ಹೋಗಿದ್ದ ಆಲ್ ಕೈದಾ ಉಗ್ರ ಓಮರ್ ಸಯೀದ್ ಶೇಖ್ ಬಿಡುಗಡೆಗೆ ಕಂದಹಾರ್ ನಲ್ಲಿ ಐಸಿ–814 ವಿಮಾನ ಅಪಹರಣ ಮಾಡುವಲ್ಲಿ ರವೂಫ್ ಅಜರ್ ಪ್ರಮುಖ ಪಾತ್ರ ವಹಿಸಿದ್ದ. ಇದು ಪಾಕ್ ರಕ್ಷಿತ ಭಯೋತ್ಪಾದಕ ಜಾಲಗಳಿಂದ ಜಾಗತಿಕ ಬೆದರಿಕೆಗೆ ಒಂದು ಸ್ಪಷ್ಟ ಉದಾಹರಣೆಯಾಗಿದೆ ಎಂದು ಅಧಿಕಾರಿ ಹೇಳಿದ್ದಾರೆ.

# ಆಪರೇಷನ್ ಸಿಂಧೂರ ನಿಲ್ಲದು: ರಾಜನಾಥ್

**ನವದೆಹಲಿ, ಮೇ 8:** ಆಪರೇಷನ್ ಸಿಂಧೂರ್ ಇನ್ನೂ ಮುಂದುವರಿದಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸ್ಪಷ್ಟಪಡಿಸಿದ್ದಾರೆ. ಪಾಕಿಸ್ತಾನದಿಂದ ಹೊರಹೊಮ್ಮುತ್ತಿರುವ ಭಯೋತ್ಪಾದನೆಯನ್ನು ಎದುರಿಸುವಲ್ಲಿ ಸರ್ಕಾರಕ್ಕೆ ಬೆಂಬಲ ವ್ಯಕ್ತಪಡಿಸಿದ ಎಲ್ಲಾ ಪಕ್ಷಗಳ ಸಭೆಯಲ್ಲಿ ಹೇಳಿದರು.

ಇದು ನಡೆಯುತ್ತಿರುವ ಕಾರ್ಯಾಚರಣೆಯಾಗಿದ್ದು, ಆದ್ದರಿಂದ ಪ್ರತಿಯೊಂದು ಬೆಳವಣಿಗೆಯ ಬಗ್ಗೆ ಸಂಕ್ಷಿಪ್ತ ಮಾಹಿತಿ ಅಥವಾ ಪ್ರಸ್ತುತಿ ನೀಡುವುದು ಸರಿಯಲ್ಲ ಎಂದು ಅವರು ಹೇಳಿದರು. ಸರ್ವಪಕ್ಷ ಸಭೆಯ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡುತ್ತಾ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, "ಸಭೆಯಲ್ಲಿ ಕೆಲವು ನಾಯಕರು ಕಾರ್ಯಾಚರಣೆಯ ಬಗ್ಗೆ ಕೆಲವು ಮಾಹಿತಿಯನ್ನು ಕೋರಿದ್ದರು. ಕಾರ್ಯಾಚರಣೆ ಮುಂದುವರೆದಿದೆ ಎಂದು ರಕ್ಷಣಾ ಸಚಿವರು ಸ್ಪಷ್ಟಪಡಿಸಿದರು.

ಪ್ರತಿಯೊಂದು ಬೆಳವಣಿಗೆಯ ಬಗ್ಗೆ ಪ್ರತ್ಯೇಕ ಸಂಕ್ಷಿಪ್ತ ಮಾಹಿತಿ ಅಥವಾ ಪ್ರಸ್ತುತಿ ನೀಡುವುದು ಸೂಕ್ತವಲ್ಲ. ಸಂಕ್ಷಿಪ್ತ ಮಾಹಿತಿಯಲ್ಲಿ ಯಾವುದೇ ತಾಂತ್ರಿಕ ಅಧಿಕಾರಿಗಳನ್ನು ಕರೆಯಲಾಗಿಲ್ಲ. ಎಲ್ಲಾ ರಾಜಕೀಯ ಪಕ್ಷಗಳ ನಡುವೆ ವಿಶಾಲವಾದ ಒಮ್ಮತವನ್ನು ನಿರ್ಮಿಸುವುದು ಸಭೆಯ ಉದ್ದೇಶವಾಗಿತ್ತು." ರಕ್ಷಣಾ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಲೋಕಸಭೆ ಮತ್ತು ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ, ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಮತ್ತು ಬಿಜೆಡಿಯ ಸಸ್ಮಿತ್ ಪಾತ್ರ ಸೇರಿದಂತೆ ಹಲವಾರು ನಾಯಕರು ಭಾಗವಹಿಸಿದ್ದರು."ದೇಶವು ಬಿಕ್ಕಟ್ಟನ್ನು ಎದುರಿಸುತ್ತಿರುವ ಸಮಯದಲ್ಲಿ, ರಾಜಕೀಯಕ್ಕೆ ಸ್ಥಾನವಿಲ್ಲ. ಎಲ್ಲಾ ನಾಯಕರು ನಮ್ಮ ಸಶಸ್ತ್ರ ಪಡೆಗಳನ್ನು ಆಪರೇಷನ್ ಸಿಂಧೂರಕ್ಕಾಗಿ ಒಂದೇ ಧ್ವನಿಯಲ್ಲಿ ಶ್ಲಾಘಿಸಿದ್ದಾರೆ ಮತ್ತು ಅವರ ಧೈರ್ಯ ಮತ್ತು ಶೌರ್ಯವನ್ನು ಶ್ಲಾಘಿಸಿದ್ದಾರೆ" ಎಂದು ರಿಜಿಜು ಹೇಳಿದರು.



ಎಲ್ಲಾ ರಾಜಕೀಯ ಪಕ್ಷಗಳು ಸರ್ಕಾರಕ್ಕೆ ಸಂಪೂರ್ಣ ಬೆಂಬಲ ನೀಡಿವೆ ಎಂದು ರಾಹುಲ್ ಗಾಂಧಿ ಹೇಳಿದರು.

**ಅವರು ಏನು ಹೇಳಿದರೂ ನಾವು ಕೇಳಿದ್ದೇವೆ. ರಾಷ್ಟ್ರೀಯ ಭದ್ರತೆಯಿಂದಾಗಿ ರಕ್ಷಣೆಗೆ ಸಂಬಂಧಿಸಿದಯಾವುದೇ ಗೌಪ್ಯತೆಯನ್ನು ಬಹಿರಂಗಪಡಿಸಲಾಗುವುದಿಲ್ಲ ಎಂದು ಅವರು ಹೇಳಿದರು. ಈ ಬಿಕ್ಕಟ್ಟಿನ ಸಮಯದಲ್ಲಿ ನಾವು ನಿಮ್ಮೊಂದಿಗಿದ್ದೇವೆ ಎಂದು ನಾವೆಲ್ಲರೂ ಹೇಳಿದ್ದೇವೆ". ಪ್ರಧಾನಿ ನರೇಂದ್ರ ಮೋದಿ ಸಭೆಯಲ್ಲಿ ಇಲ್ಲದಿರುವ ಬಗ್ಗೆ, ಖರ್ಗೆ ಹೇಳಿದರು, ಅದು ಅವರ ನಿರ್ಧಾರ. ಕಳೆದ ಬಾರಿಯೂ ಅವರು ಹಾಜರಿರಲಿಲ್ಲ. ಆದರೆ ಈ ಬಿಕ್ಕಟ್ಟಿನ ಸಮಯದಲ್ಲಿ, ನಾವು ಯಾರನ್ನೂ ಟೀಕಿಸುವುದಿಲ್ಲ ಎಂದು ಖರ್ಗೆ ಹೇಳಿದರು.**

**ಸಭೆಯ ನಂತರ ಅಸಾದುದ್ದೀನ್ ಓವೈಸಿ ಹೇಳಿದರು, "ನಮ್ಮ ಸಶಸ್ತ್ರ ಪಡೆಗಳು ಮತ್ತು ಸರ್ಕಾರವನ್ನು ಆಪರೇಷನ್ ಸಿಂಧೂರದ ಯಶಸ್ಸಿಗೆ ನಾನು ಶ್ಲಾಘಿಸುತ್ತೇನೆ. "ನಾವು ಟಿಆರ್‌ಎಫ್ ವಿರುದ್ಧ ಅಂತರರಾಷ್ಟ್ರೀಯ ಅಭಿಯಾನವನ್ನು ಪ್ರಾರಂಭಿಸಬೇಕು ಮತ್ತು ಟಿಆರ್‌ಎಫ್ ಅನ್ನು ತನ್ನದೇ ಆದ ದೇಶದಲ್ಲಿ ವಿದೇಶಿ ಭಯೋತ್ಪಾದಕ ಸಂಘಟನೆ ಎಂದು ಹೆಸರಿಸುವಂತೆ ಅಮೇರಿಕವನ್ನು ಒತ್ತಾಯಿಸಬೇಕು ಎಂದು ನಾನು ಸೂಚಿಸಿದೆ. ಪಾಕಿಸ್ತಾನವನ್ನು ಎಫ್‌ಎಟಿಎಫ್ ಬೂದು ಪಟ್ಟಿಗೆ ಸೇರಿಸುವಂತೆಯೂ ನಾನು ಅಮೇರಿಕವನ್ನು ಒತ್ತಾಯಿಸಿದೆ".**

"ಅವರೆಲ್ಲರೂ ಸರ್ಕಾರದ ಪ್ರತಿಯೊಂದು ನಿರ್ಧಾರವನ್ನು ಬೆಂಬಲಿಸುತ್ತೇವೆ ಮತ್ತು ಸಶಸ್ತ್ರ ಪಡೆಗಳನ್ನು ಅವರ ಕಾರ್ಯದಲ್ಲಿ ಬೆಂಬಲಿಸುತ್ತೇವೆ ಎಂದು ಹೇಳಿದ್ದಾರೆ.



**ಜಮ್ಮುವಿನ ಮಿಶ್ರಿವಾಲಾ ಹೊರವಲಯದ ಗರ್ಖಾಲ್ ಪ್ರದೇಶದಲ್ಲಿ ಗುರುವಾರ ಅಂತಾರಾಷ್ಟ್ರೀಯ ಗಡಿಗೆ ಸಮೀಪವಿರುವ ಹಳ್ಳಿಗಳ ವಿವಿಧ ಭಾಗಗಳ ಗಡಿ ನಿವಾಸಿಗಳನ್ನು ಸುರಕ್ಷಿತ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.**

## ಆಪರೇಷನ್ ಸಿಂಧೂರ; ಪ್ರಧಾನಿಗೆ ಮಾಜಿ ಪ್ರಧಾನಿ ದೇವೇಗೌಡರ ಪ್ರಶಂಸೆ

**ಬೆಂಗಳೂರು, ಮೇ 8:** ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಯಾಗಿ ಪಾಕಿಸ್ತಾನದಲ್ಲಿರುವ ಭಯೋತ್ಪಾದಕ ಶಿಬಿರಗಳ ಮೇಲೆ ಆಪರೇಷನ್ ಸಿಂಧೂರ ಹೆಸರಿನಲ್ಲಿ ಮಿಲಿಟರಿ ಕಾರ್ಯಾಚರಣೆ ನಡೆಸಿರುವ ಭಾರತ ಸರ್ಕಾರದ ಕ್ರಮವನ್ನು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಶ್ಲಾಘಿಸಿದ್ದಾರೆ.



ಈ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿರುವ ದೇವೇಗೌಡರು, ಮೇ 7ರಂದು ಪಹಲ್ಗಾಮ್ ನಲ್ಲಿ ನಡೆದಿರುವ ಭಯೋತ್ಪಾದಕ ದಾಳಿಗೆ ಭಾರತದ ಪ್ರಬುದ್ಧ ಮತ್ತು ಸಂಯಮದ ಮಿಲಿಟರಿ ಪ್ರತಿಕ್ರಿಯೆಯನ್ನು ನೀಡಿದೆ. ಈ ಹಿನ್ನೆಲೆಯಲ್ಲಿ ನಾನು ನಿಮ್ಮನ್ನು ಅಭಿನಂದಿಸುತ್ತೇನೆ ಎಂದು ತಿಳಿಸಿದ್ದಾರೆ. ಸಶಸ್ತ್ರ ಪಡೆಗಳಿಗೆ ಸ್ಫೂರ್ತಿ ನೀಡಲು ತಾವು ಮೊದಲ ದಿನದಿಂದಲೇ ನೀವು ತೆಗೆದುಕೊಂಡ ದೃಢ ನಿರ್ಧಾರದ ಕ್ರಮಗಳನ್ನು ನಾನು ಗಮನಿಸುತ್ತಿದ್ದೇನೆ. ನಂತರ ನೀವು ಎಲ್ಲಾ ತುರ್ತು ಪರಿಸ್ಥಿತಿಗಳ ಮೇಲ್ವಿಚಾರಣೆ ನಡೆಸಲು ಯುರೋಪ್ ಪ್ರವಾಸವನ್ನು ರದ್ದುಗೊಳಿಸಿದ್ದೀರಿ" ಎಂದು ಮಾಜಿ ಪ್ರಧಾನಿಗಳು ಮೋದಿ ಅವರ ಕಾರ್ಯವೈಖರಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ನಾವು ಎದುರಿಸುತ್ತಿರುವ ಸವಾಲುಗಳು ಖಂಡಿತವಾಗಿಯೂ ಇಲ್ಲಿಗೆ ಕೊನೆಗೊಳ್ಳದಿರಬಹುದು, ಆದರೆ ನಾವು ಒಂದು ರಾಷ್ಟ್ರವಾಗಿ ಒಗ್ಗಟ್ಟಿನಿಂದ ಇರುವುದರಲ್ಲಿ ಅಪಾರ ಸಮಾಧಾನವಿದೆ. ನಾವು ಒಟ್ಟಿಗೆ ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ ಹಾಗೂ ಒಂದು ರಾಷ್ಟ್ರವಾಗಿ ಮುನ್ನಡೆಯುತ್ತೇವೆ ಎಂದು ಮಾಜಿ ಪ್ರಧಾನಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# ನ್ಯಾಯಮೂರ್ತಿ ಮನೆಯಲ್ಲಿ ನಗದು ಪ್ರಕರಣ ರಾಷ್ಟ್ರಪತಿ, ಪ್ರಧಾನಿಗೆ ವರದಿ

**ನವದೆಹಲಿ, ಮೇ 8:** ಅಲಹಾಬಾದ್ ಹೈಕೋರ್ಟ್ನ ನ್ಯಾಯಮೂರ್ತಿ ಯಶವಂತ್ ವರ್ಮಾ ವಿರುದ್ಧದ ನಗದು ಪತ್ತೆ ಆರೋಪಗಳ ಕುರಿತು ತನಿಖೆ ನಡೆಸಿದ ಸುಪ್ರೀಂಕೋರ್ಟ್ನ ತ್ರಿಸದಸ್ಯ ಸಮಿತಿಯ ವರದಿಯನ್ನು ಭಾರತದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು ಹಂಚಿಕೊಂಡಿದ್ದಾರೆ ಎಂದು ವರದಿಯಾಗಿದೆ.

ಸಮಿತಿಯ ವರದಿಯ ಜೊತೆಗೆ, ಸಿಜೆಐ ಅವರು ನ್ಯಾಯಮೂರ್ತಿ ವರ್ಮಾ ಅವರ ಪ್ರತಿಕ್ರಿಯೆಯನ್ನು ಸಹ ಹಂಚಿಕೊಂಡಿದ್ದಾರೆ ಎಂದು ವರದಿ ಹೇಳಿದೆ. ಭಾರತದ ಮುಖ್ಯ ನ್ಯಾಯಮೂರ್ತಿ, ಆಂತರಿಕ ಕಾರ್ಯವಿಧಾನದ ಪ್ರಕಾರ, ಮೇ 3 ರಂದು ತ್ರಿಸದಸ್ಯ ಸಮಿತಿ ವರದಿಯ ಪ್ರತಿಯನ್ನು ಮತ್ತು ಮೇ 6 ರಂದು ನ್ಯಾಯಮೂರ್ತಿ ಯಶವಂತ್ ವರ್ಮಾ ಅವರಿಂದ ಬಂದ ಪತ್ರ/ಪ್ರತಿಕ್ರಿಯೆಯನ್ನು ರಾಷ್ಟ್ರಪತಿ ಮತ್ತು ಪ್ರಧಾನ ಮಂತ್ರಿಗೆ ಪತ್ರ ಬರೆದಿದ್ದಾರೆ ಎಂದು ಸುಪ್ರೀಂ ಕೋರ್ಟ್ ಹೇಳಿಕೆಯಲ್ಲಿ ತಿಳಿಸಿದೆ.

ಸಿಜೆಐ ಖನ್ನಾ ಅವರು ಈ ಹಿಂದೆ ಸಮಿತಿಯ ವರದಿಯನ್ನು ನ್ಯಾಯಮೂರ್ತಿ ವರ್ಮಾ ಅವರಿಗೆ ಕಳುಹಿಸಿದ್ದರು ಮತ್ತು ನೈಸರ್ಗಿಕ ನ್ಯಾಯದ ತತ್ವವನ್ನು ಅನುಸರಿಸಿ ಅವರ ಪ್ರತಿಕ್ರಿಯೆಯನ್ನು ಕೋರಿದ್ದರು ಎಂದು ತಿಳಿದುಬಂದಿದೆ. ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಶೀಲ್ ನಾಗು, ಹಿಮಾಚಲ ಪ್ರದೇಶ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಜಿ.ಎಸ್. ಸಂಧವಾಲಿಯಾ ಮತ್ತು ಕರ್ನಾಟಕ ಹೈಕೋರ್ಟ್ನ ನ್ಯಾಯಮೂರ್ತಿ ಅನು ಶಿವರಾಮನ್ ಅವರನ್ನೊಳಗೊಂಡ ಮೂವರು ಸದಸ್ಯರ ಸಮಿತಿಯು ಸಿಜೆಐಗೆ ತನ್ನ ವರದಿಯನ್ನು ಸಲ್ಲಿಸಿತ್ತು. ಮಾ.14ರಂದು ರಾತ್ರಿ 11.35 ರ ಸುಮಾರಿಗೆ ನ್ಯಾಯಮೂರ್ತಿ ವರ್ಮಾ ಅವರ ಲುಟಿಯೆನ್ಸ್ ದೆಹಲಿ ನಿವಾಸದಲ್ಲಿ ಸಂಭವಿಸಿದ ಬೆಂಕಿ ಅವಘಡಕ್ಕೆ ಮೊದಲು ಪ್ರತಿಕ್ರಿಯಿಸಿದವರಲ್ಲಿ ದೆಹಲಿ ಪೊಲೀಸ್ ಆಯುಕ್ತ ಸಂಜಯ್ ಅರೋರಾ ಮತ್ತು ದೆಹಲಿ ಅಗ್ನಿಶಾಮಕ ಸೇವೆಯ ಮುಖ್ಯಸ್ಥರು ಸೇರಿದಂತೆ 50 ಕ್ಕೂ ಹೆಚ್ಚು ಜನರ ಸಾಕ್ಷ್ಯಗಳನ್ನು ಸಮಿತಿಯು ವಿಶ್ಲೇಷಿಸಿ ಅವರ ಹೇಳಿಕೆಗಳನ್ನು ದಾಖಲಿಸಿಕೊಂಡಿತ್ತು.

ನಗರದು ಪತ್ತೆಯಾಗುವ ಸಮಯದಲ್ಲಿ ನ್ಯಾಯಮೂರ್ತಿ ವರ್ಮಾ ಅವರು ದೆಹಲಿ ಹೈಕೋರ್ಟ್‌ನ ನ್ಯಾಯಾಧೀಶ ರಾಗಿದ್ದರು. ಪ್ರಕರಣದ ನಂತರ ಅವರನ್ನು ಅವರ ಮಾತೃ ಕೋರ್ಟ್ ಅದ ಅಲಹಾಬಾದ್ ಹೈಕೋರ್ಟ್‌ಗೆ ಅವರನ್ನು ವರ್ಗಾಯಿಸಲಾಗಿತ್ತು. ಅದಾಗ್ಯೂ, ಅವರಿಗೆ ಯಾವುದೆ ಕೆಲಸವನ್ನು ನೀಡಿರಲಿಲ್ಲ. ಅವರ ವರ್ಗಾವಣೆ ವಿರೋಧಿಸಿ ಈ ವೇಳೆ ಅಲಹಾಬಾದ್ ಹೈಕೋರ್ಟ್ನ ವಕೀಲರು ಪ್ರತಿಭಟನೆ ನಡೆಸಿದ್ದರು.

# ವೀಸಾ ವಿಸ್ತರಣೆ ಕೋರಿ ಸಲ್ಲಿಸಿದ್ದ ಅರ್ಜಿ ವಜಾಗೊಳಿಸಿದ ಹೈಕೋರ್ಟ್

**ಬೆಂಗಳೂರು, ಮೇ 8:** ಪಹಲ್ಗಾಮ್ ಭಯೋತ್ಪಾದಕ ಕೃತ್ಯದ ನಂತರ ಭಾರತದಲ್ಲಿರುವ ಪಾಕಿಸ್ತಾನಿ ಪ್ರಜೆಗಳು ದೇಶ ತೊರೆಯಬೇಕೆಂಬ ಕೇಂದ್ರ ಸರ್ಕಾರದ ನಿರ್ದೇಶನದಿಂದ ಸಂಕಷ್ಟಕ್ಕೆ ಸಿಲುಕಿರುವ ಭಾರತೀಯ ತಾಯಿ ಮತ್ತು ಪಾಕಿಸ್ತಾನದ ತಂದೆಗೆ ಜನಿಸಿದ ಮೂರು ಮಕ್ಕಳು ಮಾನವೀಯತೆ ಮತ್ತು ಅನುಕಂಪದ ಆಧಾರದಲ್ಲಿ ಮೇ 15ರವರೆಗೆ ವೀಸಾ ವಿಸ್ತರಣೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ. ಅಲ್ಲದೇ, ಪಾಕ್ ಪ್ರಜೆಗಳಿಗೆ ನೀಡಿದ್ದ ವೀಸಾ ರದ್ದತಿ ಸೇರಿದಂತೆ ಹಲವು ನಿರ್ಧಾರಗಳನ್ನು ದೇಶದ ಹಿತಾಸಕ್ತಿಯಿಂದ ಕೇಂದ್ರ ಸರ್ಕಾರ ಕೈಗೊಂಡಿದೆ ಎಂದಿದೆ.

ಪಾಕಿಸ್ತಾನದ ಬಲೂಚಿಸ್ತಾನದ 8 ವರ್ಷದ ಕುಮಾರಿ ಬಿ ಬಿ ಯಾಮಿನಾ, 4 ವರ್ಷದ ಮಾಸ್ಟರ್ ಮುಹಮ್ಮದ್ ಮುದಾಸ್ಸಿರ್ ಮತ್ತು 3 ವರ್ಷದ ಮಾಸ್ಟರ್ ಮೊಹಮ್ಮದ್ ಯೂಸಫ್ ಅವರು ತಮ್ಮ ವಿರುದ್ಧ ಮೇ 15ರವರೆಗೆ ಬಲವಂತದ ಕ್ರಮ ಕೈಗೊಳ್ಳದಂತೆ ನಿರ್ದೇಶಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ ಜಿ ಉಮಾ ಅವರ ರಜಾಕಾಲದ ಏಕಸದಸ್ಯ ಪೀಠ ವಜಾಗೊಳಿಸಿತು.

2025ರ ಜನವರಿ 4ರಂದು ಅರ್ಜಿದಾರರು ತಾಯಿಯ ಜೊತೆ ಭಾರತಕ್ಕೆ ಬಂದಿದ್ದಾರೆ. ಪಹಲ್ಗಾಮ್ನಲ್ಲಿ ಭೀಕರ ಭಯೋತ್ಪಾದಕ ದಾಳಿಯ ಕೃತ್ಯದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ಪಾಕಿಸ್ತಾನಿ ಪ್ರವಾಸಿಗರ ವೀಸಾ ರದ್ದು ಸೇರಿದಂತೆ ಹಲವು ನಿರ್ಧಾರಗಳನ್ನು ಕೈಗೊಂಡಿದ್ದು, ಏಪ್ರಿಲ್ 27ರ ಒಳಗೆ ದೇಶ ತೊರೆಯುವಂತೆ ಆದೇಶಿಸಿದೆ. ಕೇಂದ್ರ ಸರ್ಕಾರದ ಅಧೀನ ಕಾರ್ಯದರ್ಶಿಯು ಏಪ್ರಿಲ್ 25ರಂದು ಆದೇಶ ಮಾಡಿದ್ದು, ಪಾಕಿಸ್ತಾನಿ ಪ್ರಜೆಗಳಿಗೆ ಮಂಜೂರು ಮಾಡಿದ್ದ ವೀಸಾ ರದ್ದುಪಡಿಸಿದ್ದಾರೆ. ಕೇಂದ್ರದ ಭದ್ರತೆಗೆ ಸಂಬಂಧಿಸಿದ ಸಚಿವ ಸಂಪುಟ ಸಮಿತಿಯು ದೇಶದ ಹಿತಾಸಕ್ತಿ ರಕ್ಷಿಸಲು ಪ್ರಜ್ಞಾಪೂರ್ವಕ ನಿರ್ಧಾರ ಕೈಗೊಂಡಿದೆ. ಹೀಗಾಗಿ, ಅರ್ಜಿದಾರರ ಪರವಾಗಿ ಆದೇಶ ಮಾಡಲು ನ್ಯಾಯಾಲಯವು ಸರ್ಕಾರದ ಆದೇಶದಲ್ಲಿ ಮಧ್ಯಪ್ರವೇಶಿಸಲು ಯಾವುದೇ ಕಾರಣ ಹೊಂದಿಲ್ಲ ಎಂದು ನ್ಯಾಯಾಲಯವು ಆದೇಶ ಮಾಡಿದೆ. ಆದರೆ, ಅರ್ಜಿದಾರರ ಪರ ವಕೀಲರು ಕೇಂದ್ರ ಸರ್ಕಾರ ಆಕ್ಷೇಪಣೆ ಒದಗಿಸಿಲ್ಲ. ನಾವು ಕೇಂದ್ರ ಸರ್ಕಾರದ ನಿಲುವನ್ನು ಪ್ರಶ್ನಿಸುತ್ತಿಲ್ಲ. ದೇಶ ತೊರೆಯಲು ಅರ್ಜಿದಾರ ಮಕ್ಕಳಿಗೆ 15 ದಿನ ಕಾಲಾವಕಾಶ ನೀಡಬೇಕು. ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ಇದೇ ಪರಿಸ್ಥಿತಿಯನ್ನು ಪರಿಗಣಿಸಿ ಕಾಲಾವಕಾಶ ನೀಡಿದೆ. ಏ.28ರಂದು ಭಾರತ ಸರ್ಕಾರದ ಆದೇಶದಂತೆ ಅರ್ಜಿದಾರರು ಅಟ್ಟಾರಿ ಗಡಿಗೆ ಹೋಗಿದ್ದರು. ಅವರನ್ನು ವಾಪಸ್ ಕಳುಹಿಸಲಾಗಿದೆ ಎಂದರು. ಕೇಂದ್ರ ಸರ್ಕಾರದ ಪರವಾಗಿ ಹಾಜರಾಗಿದ್ದ ಡೆಪ್ಯುಟಿ ಸಾಲಿಸಿಟರ್ ಜನರಲ್ ಎಚ್ ಶಾಂತಿಭೂಷಣ್ ಅವರು ಕೇಂದ್ರ ಸರ್ಕಾರ ಕೈಗೊಂಡಿರುವ ನಿರ್ಧಾರಗಳನ್ನು ವಿವರಿಸಿ, ಅರ್ಜಿ ವಜಾ ಮಾಡಬೇಕು ಎಂದು ಕೋರಿದರು.





**ನಮ್ಮ ಮಾನವೀಯತೆಯ ಮೇಲೆ ದಾಳಿಯಾಗಿದೆ. ಕೇಂದ್ರ ಸರ್ಕಾರವು ಪ್ರಜ್ಞಾಪೂರ್ವಕ ನಿರ್ಧಾರ ಕೈಗೊಂಡಿದ್ದು, ಈ ನ್ಯಾಯಾಲಯ ಅದರಲ್ಲಿ ಮಧ್ಯಪ್ರವೇಶಿಸಲು ಬಯಸುವುದಿಲ್ಲ ಎಂದಿತು.**

# ಭಾರತದ ಸಂಯಮದ ಲಾಭ ಪಡೆಯಲು ಯತ್ನಿಸುವವರಿಗೆ ದಿಟ್ಟ ಪ್ರತ್ಯುತ್ತರ: ರಕ್ಷಣಾ ಸಚಿವ ರಾಜನಾಥ್ ಸಿಂಗ್ ಎಚ್ಚರಿಕೆ



**ನವದೆಹಲಿ, ಮೇ 8:** ಭಾರತ ಯಾವಾಗಲೂ ಹೆಚ್ಚಿನ ಸಂಯಮವನ್ನು ನಿರ್ವಹಿಸುವ ಜವಾಬ್ದಾರಿಯುತ ರಾಷ್ಟ್ರದ ಪಾತ್ರವನ್ನು ವಹಿಸಿದೆ ಮತ್ತು ಸಂವಾದದ ಮೂಲಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅದು ನಂಬಿಕೆ ಇಡುತ್ತದೆ, ಆದರೆ ಈ ಸಂಯಮದ ಲಾಭ ಪಡೆಯಲು ಪ್ರಯತ್ನಿಸುವ ಯಾರಾದರೂ 'ಗುಣಮಟ್ಟದ ಕ್ರಮ'ವನ್ನು ಎದುರಿಸಬೇಕಾಗುತ್ತದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಗುರುವಾರ ಹೇಳಿದ್ದಾರೆ. ಭಾರತದ ಸಾರ್ವಭೌಮತ್ವವನ್ನು ರಕ್ಷಿಸುವಲ್ಲಿ ಯಾವುದೇ ಮಿತಿ ಸರ್ಕಾರಕ್ಕೆ ಅಡ್ಡಿಯಾಗುವುದಿಲ್ಲ ಎಂದು ರಾಜನಾಥ್ ಸಿಂಗ್ ಭರವಸೆ ನೀಡಿದರು. "ಭವಿಷ್ಯದಲ್ಲಿಯೂ ಅಂತಹ ಜವಾಬ್ದಾರಿಯುತ ಪ್ರತಿಕ್ರಿಯೆಗಳಿಗೆ ನಾವು ಸಂಪೂರ್ಣವಾಗಿ ಸಿದ್ಧರಿದ್ದೇವೆ" ಎಂದು ಅವರು ಹೇಳಿದರು. "ನಮ್ಮ ಅಸಾಧಾರಣ ಮತ್ತು ವೃತ್ತಿಪರವಾಗಿ ತರಬೇತಿ ಪಡೆದ ಸಶಸ್ತ್ರ ಪಡೆಗಳು ಉತ್ತಮ ಗುಣಮಟ್ಟದ ಉಪಕರಣಗಳೊಂದಿಗೆ ಸಜ್ಜುಗೊಂಡಿದ್ದರಿಂದ ಆಪರೇಷನ್ ಸಿಂಧೂರ್ ಅನ್ನು ಯಶಸ್ವಿಯಾಗಿ ಕಾರ್ಯಗತಗೊಳಿಸಲಾಯಿತು". ಯಾವುದೇ ಮುಗ್ಧ ವ್ಯಕ್ತಿಗೆ ಹಾನಿಯಾಗದಂತೆ ಮತ್ತು ಕನಿಷ್ಠ ಮೇಲಾಧಾರ ಹಾನಿಯೊಂದಿಗೆ ಸಶಸ್ತ್ರ ಪಡೆಗಳು ಕಾರ್ಯಾಚರಣೆಯನ್ನು ನಡೆಸಿದ ನಿಖರತೆಯನ್ನು ಅವರು ಶ್ಲಾಘಿಸಿದರು, ಇದು ಊಹಿಸಲಾಗದ ಮತ್ತು ರಾಷ್ಟ್ರಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಬಣ್ಣಿಸಿದರು. "ಆಪರೇಷನ್ ಸಿಂಧೂರ್‌ನಲ್ಲಿ, ಪಾಕಿಸ್ತಾನ ಮತ್ತು ಪಿಒಕೆಯಲ್ಲಿ ಒಂಬತ್ತು ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಲಾಯಿತು ಮತ್ತು ಹೆಚ್ಚಿನ ಸಂಖ್ಯೆಯ ಭಯೋತ್ಪಾದಕರು ಕೊಲ್ಲಲ್ಪಟ್ಟರು. ಇದು ರಾಷ್ಟ್ರೀಯ ಹಿತಾಸಕ್ತಿಗಳನ್ನು ಭದ್ರಪಡಿಸುವಲ್ಲಿ 'ಗುಣಮಟ್ಟ' ವಹಿಸುವ ನಿರ್ಣಾಯಕ ಪಾತ್ರವನ್ನು ತೋರಿಸುತ್ತದೆ" ಎಂದು ಸಚಿವರು ಹೇಳಿದರು.



ನವದೆಹಲಿಯಲ್ಲಿ ಗುರುವಾರ ನಡೆದ 20ನೇ ಭಾರತ-ಇರಾನ್ ಜೆಸಿಎಂನಲ್ಲಿ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಇರಾನ್ ವಿದೇಶಾಂಗ ಸಚಿವ ಸಯ್ಯದ್ ಅಬ್ಬಾಸ್ ಅರಗ್ಚಿ ಅವರನ್ನು ಭೇಟಿಯಾಗಿದ್ದರು.

# ಜಿಯೋ ಸ್ಟುಡಿಯೋಸ್ ಆಪರೇಷನ್ ಸಿಂದೂರ್ ಟ್ರೇಡ್‌ಮಾರ್ಕ್ ಅರ್ಜಿ ವಾಪಸ್

**ನವದೆಹಲಿ, ಮೇ 8:** ಜಿಯೋ ಸ್ಟುಡಿಯೋಸ್ 'ಆಪರೇಷನ್ ಸಿಂದೂರ್' ಎಂಬ ಪದದ ಟ್ರೇಡ್‌ಮಾರ್ಕ್ ಅರ್ಜಿಯನ್ನು ಹಿಂತೆಗೆದುಕೊಂಡಿದೆ – ಇದು ಪಾಕಿಸ್ತಾನದಲ್ಲಿ ಭಾರತದ ಮಿಲಿಟರಿ ದಾಳಿಗಳ ಸಂಕೇತನಾಮ – ಇದನ್ನು ಕಿರಿಯ ಉದ್ಯೋಗಿಯೊಬ್ಬರು ಅನುಮತಿಯಿಲ್ಲದೆ ಅಜಾಗರೂಕತೆಯಿಂದ ಸಲ್ಲಿಸಿದ್ದಾರೆ ಎಂದು ಹೇಳಿದೆ. ಗುರುವಾರ (ಮೇ 8, 2025) ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, "ಭಾರತೀಯ ಶೌರ್ಯದ ಸಂಕೇತವಾಗಿ ಈಗ ರಾಷ್ಟ್ರೀಯ ಪ್ರಜ್ಞೆಯ ಭಾಗವಾಗಿರುವ ಆಪರೇಷನ್ ಸಿಂದೂರ್ ಎಂಬ ಪದಗುಚ್ಛವನ್ನು ಟ್ರೇಡ್‌ಮಾರ್ಕ್ ಮಾಡುವ" ಉದ್ದೇಶವಿಲ್ಲ ಎಂದು ರಿಲಯನ್ಸ್ ಹೇಳಿದೆ. "ರಿಲಯನ್ಸ್ ಇಂಡಸ್ಟ್ರೀಸ್‌ನ ಒಂದು ಘಟಕವಾದ ಜಿಯೋ ಸ್ಟುಡಿಯೋಸ್, ಅನುಮತಿಯಿಲ್ಲದೆ ಕಿರಿಯ ವ್ಯಕ್ತಿಯೊಬ್ಬರು ಅಜಾಗರೂಕತೆಯಿಂದ ಸಲ್ಲಿಸಿದ ತನ್ನ ಟ್ರೇಡ್‌ಮಾರ್ಕ್ ಅರ್ಜಿಯನ್ನು ಹಿಂತೆಗೆದುಕೊಂಡಿದೆ" ಎಂದು ಅದು ಹೇಳಿದೆ.

**ನಾಲ್ಕು ಅರ್ಜಿಗಳು :**

ಈ ಮೊದಲು, ರಿಲಯನ್ಸ್‌ನ ಒಂದು ಅರ್ಜಿ ಸೇರಿದಂತೆ ನಾಲ್ಕು ಅರ್ಜಿಗಳನ್ನು ಬುಧವಾರ ನಿಯಂತ್ರಕ ಜನರಲ್ ಆಫ್ ಪೇಟೆಂಟ್‌ಗಳು, ವಿನ್ಯಾಸಗಳು ಮತ್ತು ಟ್ರೇಡ್‌ಮಾರ್ಕ್‌ಗಳ ಕಚೇರಿಯಲ್ಲಿ ಸಲ್ಲಿಸಲಾಗಿತ್ತು, ಆಡಿಯೋ ಮತ್ತು ವಿಡಿಯೋ ವಿಷಯದಂತಹ ಮನರಂಜನೆ-ಸಂಬಂಧಿತ ಸೇವೆಗಳಿಗೆ ಈ ಪದಗುಚ್ಛವನ್ನು ಬಳಸಲು ಕೋರಿ ಸಲ್ಲಿಸಲಾಗಿತ್ತು. ಮುಖೇಶ್ ಅಂಬಾನಿ ನಡೆಸುವ ಸಂಸ್ಥೆ ಬುಧವಾರ ಪೇಟೆಂಟ್‌ಗಾಗಿ ಮೊದಲು ಅರ್ಜಿ ಸಲ್ಲಿಸಿತು ಮತ್ತು ನಂತರ ಮುಂಬೈ ನಿವಾಸಿ, ನಿವೃತ್ತ ಭಾರತೀಯ ವಾಯುಪಡೆಯ ಅಧಿಕಾರಿ ಮತ್ತು ದೆಹಲಿ ಮೂಲದ ವಕೀಲರು ಸೇರಿದಂತೆ ಇನ್ನೂ ಮೂವರು ಅರ್ಜಿ ಸಲ್ಲಿಸಿದರು. ಟ್ರೇಡ್ ಮಾರ್ಕ್ ವರ್ಗ 41ರ ಅಡಿಯಲ್ಲಿ ಸಲ್ಲಿಕೆಯಾಗಿರುವ ಅರ್ಜಿಗಳು ಶಿಕ್ಷಣ ಮತ್ತು ತರಬೇತಿ ಸೇವೆಗಳು, ಚಲನಚಿತ್ರ ಮತ್ತು ಮಾಧ್ಯಮ ನಿರ್ಮಾಣ, ನೇರ ಪ್ರದರ್ಶನಗಳು ಮತ್ತು ಕಾರ್ಯಕ್ರಮಗಳು, ಡಿಜಿಟಲ್ ವಿಷಯ ವಿತರಣೆ ಮತ್ತು ಪ್ರಕಟಣೆ, ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳಿಗೆ ಆಪರೇಷನ್ ಸಿಂಧೂರ ಹೆಸರಿನ ಹಕ್ಕುಸ್ವಾಮ್ಯ ಕೋರಿದೆ.

"ರಿಲಯನ್ಸ್ ಇಂಡಸ್ಟ್ರೀಸ್‌ನ ಒಂದು ಘಟಕವಾದ ಜಿಯೋ ಸ್ಟುಡಿಯೋಸ್, ಅನುಮತಿಯಿಲ್ಲದೆ ಕಿರಿಯ ವ್ಯಕ್ತಿಯೊಬ್ಬರು ಅಜಾಗರೂಕತೆಯಿಂದ ಸಲ್ಲಿಸಿದ ತನ್ನ ಟ್ರೇಡ್‌ಮಾರ್ಕ್ ಅರ್ಜಿಯನ್ನು ಹಿಂತೆಗೆದುಕೊಂಡಿದೆ" ಎಂದು ಅದು ಹೇಳಿದೆ.

# ಎನ್‌ಡಿಎ ತೊರೆದು ಕಾಂಗ್ರೆಸ್ ಸೇರ್ಪಡೆ




**ನವದೆಹಲಿ, ಮೇ 08:** ವಿಧಾನಸಭಾ ಚುನಾವಣೆಗೆ ತಿಂಗಳುಗಳ ಮೊದಲು ಬಿಹಾರದಲ್ಲಿ ಆಡಳಿತಾರೂಢ ಎನ್‌ಡಿಎಯ ಇಬ್ಬರು ಹಿರಿಯ ನಾಯಕರು ಕಾಂಗ್ರೆಸ್‌ಗೆ ಸೇರ್ಪಡೆಗೊಂಡರು. ಮಾಜಿ ಬಿಜೆಪಿ ನಾಯಕ ಅನಿಲ್ ಸಿಂಗ್ ಮತ್ತು ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಜೆಡಿ(ಯು) ಜೊತೆಗಿದ್ದ ಶಂಭು ಪಟೇಲ್ ಅವರನ್ನು ಬುಧವಾರ ರಾಜ್ಯ ಘಟಕದ ಅಧ್ಯಕ್ಷ ರಾಜೇಶ್ ಕುಮಾರ್ ಕಾಂಗ್ರೆಸ್‌ಗೆ ಸೇರಿಸಿಕೊಂಡರು. ಸಿಂಗ್ ಅವರಿಗೆ ಇದು ಪುನರಾಗಮನವಾಗಿದೆ ಎಂದು ಕಾಂಗ್ರೆಸ್ ರಾಜ್ಯಾಧ್ಯಕ್ಷ ರಾಜೇಶ್ ಕುಮಾರ್ ಹೇಳಿದರು. ಅವರ ತಂದೆ ರಾಮ್ ರಾಜ್ ಸಿಂಗ್ ಪಕ್ಷವು ರಾಜ್ಯವನ್ನು ಆಳಿದಾಗ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಈಗ ರದ್ದುಗೊಂಡಿರುವ ಚಾಂಡಿ ವಿಧಾನಸಭಾ ಸ್ಥಾನವನ್ನು ಸಿಂಗ್ ಸ್ವತಃ ಎರಡು ಬಾರಿ ಪ್ರತಿನಿಧಿಸಿದ್ದಾರೆ, ಮೊದಲು ಕಾಂಗ್ರೆಸ್ ಟಿಕೆಟ್‌ನಲ್ಲಿ ಮತ್ತು ನಂತರ ಜೆಡಿ(ಯು)ನ ಹಿಂದಿನ ಸಮತಾ ಪಕ್ಷದ ಶಾಸಕರಾಗಿ.ಜೆಡಿ(ಯು)ನ ಮಾಜಿ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿರುವ ಪಟೇಲ್, ಪಕ್ಷದಲ್ಲಿ ತಾನು ಉಸಿರುಗಟ್ಟಿದ ಭಾವನೆ ಹೊಂದಿದ್ದೇನೆ ಎಂದು ಹೇಳಿದರು. ಈ ವರ್ಷದ ಕೊನೆಯಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ ಸಿಂಗ್ ಮತ್ತು ಪಟೇಲ್ ಅವರ ಸೇರ್ಪಡೆ ಪಕ್ಷಕ್ಕೆ ಉತ್ತೇಜನ ನೀಡುತ್ತದೆ ಎಂದು ರಾಜ್ಯ ಕಾಂಗ್ರೆಸ್ ಅಧ್ಯಕ್ಷರು ಪ್ರತಿಪಾದಿಸಿದರು.

# ಕಾಂಗ್ರೆಸ್ ನಾಯಕರ ವಿರುದ್ಧದ ನ್ಯಾಷನಲ್ ಹೆರಾಲ್ಡ್ ಪ್ರಕರಣ ದೆಹಲಿ ನ್ಯಾಯಾಲಯದಿಂದ ವಿಚಾರಣೆ ಮುಂದೂಡಿಕೆ


NATIONAL HERALD
Founded by Jawaharlal Nehru
MANY AKALIS HELD
IN SAMAGAM-EVE
Tension grips Capital

**ನವದೆಹಲಿ, ಮೇ 8:** ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಇತರರನ್ನು ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ಪ್ರಸ್ತಾವಿತ ಆರೋಪಿಗಳನ್ನಾಗಿ ಮಾಡಿರುವ ನ್ಯಾಷನಲ್ ಹೆರಾಲ್ಡ್ ಪ್ರಕರಣದ ವಿಚಾರಣೆಯನ್ನು ದೆಹಲಿ ನ್ಯಾಯಾಲಯ ಗುರುವಾರ ಮುಂದೂಡಿದೆ. ಪ್ರಕರಣದ ವಿಚಾರಣೆಯನ್ನು ಮೇ 21-22ಕ್ಕೆ ಮುಂದೂಡಲಾಗಿದೆ. ಸಂಸದರು/ಶಾಸಕರ ಪ್ರಕರಣಗಳ ವಿಶೇಷ ನ್ಯಾಯಾಧೀಶ ಡಾ. ವಿಶಾಲ್ ಗೋಗ್ನೆ ಅವರು, "ಹಿಂದಿನ ಆದೇಶದಂತೆ ಎಲ್ಲಾ ಪ್ರಸ್ತಾವಿತ ಆರೋಪಿಗಳಿಗೆ ನೋಟಿಸ್‌ಗಳನ್ನು ನೀಡಲಾಗಿದೆ. ಆದಾಗ್ಯೂ, ಇಂದು ಮಾತ್ರ ಪ್ರಸ್ತಾವಿತ ಆರೋಪಿಯೊಬ್ಬರಿಗೆ ಪರ್ಯಾಯ ಇಮೇಲ್ ಐಡಿಯಲ್ಲಿ ನೋಟಿಸ್ ನೀಡಲಾಗಿದೆ ಎಂದು ಹೇಳಲಾಗಿರುವುದರಿಂದ, ಮುಂದಿನ ವಿಚಾರಣೆಯ ದಿನದಂದು ಪ್ರಕರಣದ ವಿಚಾರಣೆ ನಡೆಸುವುದು ಸೂಕ್ತವಾಗಿದೆ" ಎಂದು ನ್ಯಾಯಾಲಯ ಹೇಳಿದೆ. ಈ ಅಪರಾಧದಲ್ಲಿ ಸಮನ್ಸ್ ಜಾರಿಯಾದ ಏಳು ಆರೋಪಿಗಳೆಂದರೆ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮೋತಿ ಲಾಲ್ ವೋಹ್ರಾ, ಆಸ್ಕರ್ ಫರ್ನಾಂಡಿಸ್, ಸುಮನ್ ದುಬೆ, ಸ್ಯಾಮ್ ಪಿತ್ರೋಡಾ ಮತ್ತು ಮೆಸರ್ಸ್ ಯಂಗ್ ಇಂಡಿಯನ್ ಎಂಬ ಕಂಪನಿ.ಹಿಂದಿನ ಆದೇಶದಲ್ಲಿ, ಪ್ರಸ್ತಾವಿತ ಆರೋಪಿಗಳಿಗೆ ನೋಟಿಸ್ ಜಾರಿ ಮಾಡುವಂತೆ ನ್ಯಾಯಾಲಯವು ನಿರ್ದೇಶಿಸಿತ್ತು, ಇದರಿಂದಾಗಿ ಪ್ರಸ್ತುತ ದೂರಿನ ಮೇಲೆ ಪ್ರಕರಣದ ವಿಚಾರಣೆ ನಡೆಯಲಿದೆ. ಹಣ ಅಕ್ರಮ ವರ್ಗಾವಣೆಯ ಆರೋಪದಡಿಯಲ್ಲಿ ದೂರುದಾರರಾದ ಜಾರಿ ನಿರ್ದೇಶನಾಲಯ 2002 ರ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆಯ ಸೆಕ್ಷನ್ 44 ಮತ್ತು 45 ರ ಅಡಿಯಲ್ಲಿ ದೂರು ದಾಖಲಿಸಿದೆ. ಸೆಕ್ಷನ್ 3 ರ ಅಡಿಯಲ್ಲಿ ವ್ಯಾಖ್ಯಾನಿಸಿದಂತೆ, ಕಐಐಂ ನ ಸೆಕ್ಷನ್ 4 ರ ಅಡಿಯಲ್ಲಿ ಶಿಕ್ಷಾರ್ಹ.

# ಕದನ ವಿರಾಮ ಉಲ್ಲಂಘನೆ: ಪಾಕಿಸ್ತಾನ ನಡೆಸಿದ ದಾಳಿಯಲ್ಲಿ ಭಾರತೀಯ ಸೈನಿಕನೋರ್ವ ಹುತಾತ್ಮ



**ನವದೆಹಲಿ, ಮೇ 8:** ಜಮ್ಮು ಮತ್ತು ಕಾಶ್ಮೀರದ ಪೂಂಚ್ ಸೆಕ್ಟರ್ನ ನಿಯಂತ್ರಣ ರೇಖೆ (ಎಲ್‌ಒಸಿ) ಉದ್ದಕ್ಕೂ ಪಾಕಿಸ್ತಾನ ನಡೆಸಿದ ಕದನ ವಿರಾಮ ಉಲ್ಲಂಘನೆಯಲ್ಲಿ ಭಾರತೀಯ ಸೇನಾ ಸೈನಿಕನೋರ್ವ ಬುಧವಾರ ಹುತಾತ್ಮನಾಗಿದ್ದಾರೆ. ಗಡಿಯಾಚೆಗಿನ ಶೆಲ್ ದಾಳಿಯಲ್ಲಿ 5 ಫೀಲ್ಡ್ ರೆಜಿಮೆಂಟ್ನ ಅನ್ಸ್ ನಾಯಕ್ ದಿನೇಶ್ ಕುಮಾರ್ ಗಂಭೀರವಾಗಿ ಗಾಯಗೊಂಡಿದ್ದರು ಮತ್ತು ನಂತರ ಅವರು ನಿಧನರಾದರು ಎಂದು ಭಾರತೀಯ ಸೇನೆ ದೃಢಪಡಿಸಿದೆ. ಪಾಕಿಸ್ತಾನ ಪಡೆಗಳು ಗುರುವಾರ ಸತತ 14 ನೇ ದಿನವೂ ನಿಯಂತ್ರಣ ರೇಖೆ (ಎಲ್‌ಒಸಿ) ಉದ್ದಕ್ಕೂ ಗಡಿಯಾಚೆಗಿನ ಶೆಲ್ ದಾಳಿ ನಡೆಸಿದ್ದು, ಕುಪ್ವಾರಾ, ಬಾರಾಮುಲ್ಲಾ, ಉರಿ ಮತ್ತು ಅಖ್ನೂರ್ ಮುಂಚೂಣಿ ಗ್ರಾಮಗಳ ಮೇಲೆ ಭಾರಿ ಫಿರಂಗಿ ದಾಳಿ ಮತ್ತು ಮೋರ್ಟಾರ್ ಶೆಲ್ ದಾಳಿ ನಡೆಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಚೋದನೆಗೆ ಕಾರಣವಾದ ಪಾಕಿಸ್ತಾನದ ನೆಲೆಗಳನ್ನು ಗುರಿಯಾಗಿಸಿಕೊಂಡು ಭಾರತೀಯ ಸೇನೆಯು ಪ್ರಮಾಣಾನುಗುಣವಾದ ಬಲದಿಂದ ಪ್ರತಿಕ್ರಿಯಿಸಿತು. ನಿಯಂತ್ರಣ ರೇಖೆಯ ಉದ್ದಕ್ಕೂ ಭಾರತೀಯ ನಾಗರಿಕರನ್ನು ಗುರಿಯಾಗಿಸಲು ಫಿರಂಗಿ ಬಂದೂಕುಗಳನ್ನು ಬಳಸುತ್ತಿರುವ ಪಾಕಿಸ್ತಾನ ಸೇನೆಯ ವಿರುದ್ಧ ಬಲವಾದ ಮತ್ತು ದಂಡನಾತ್ಮಕ ಕ್ರಮ ತೆಗೆದುಕೊಳ್ಳುವಂತೆ ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರು ಕಮಾಂಡರ್ಗಳಿಗೆ ಸೂಚಿಸಿದ್ದಾರೆ.

# 430 ವಿಮಾನ, 27 ಏರ್‌ಪೋರ್ಟ್ ಸ್ಥಗಿತ

**ನವದೆಹಲಿ, ಮೇ 08:** ಪಾಕ್ ಆಕ್ರಮಿತ ಕಾಶ್ಮೀರ ಮತ್ತು ಪಾಕಿಸ್ತಾನದಲ್ಲಿನ ಭಯೋತ್ಪಾದಕ ಕೇಂದ್ರಗಳ ಮೇಲೆ ಭಾರತ ನಡೆಸಿದ ಆಪರೇಷನ್ ಸಿಂಧೂರ ದಾಳಿಯ ಗಂಟೆಗಳ ನಂತರ, ಬುಧವಾರ ದೆಹಲಿ ವಿಮಾನ ನಿಲ್ದಾಣಕ್ಕೆ ಮತ್ತು ಅಲ್ಲಿಂದ ಬರುವ ಕನಿಷ್ಠ 430 ವಿಮಾನಗಳನ್ನು ರದ್ದುಗೊಳಿಸಲಾಗಿದೆ ಎಂದು ವರದಿಗಳು ಉಲ್ಲೇಖಿಸಿವೆ. ದಾಳಿ ಮುಗಿದ ಹತ್ತು ನಿಮಿಷಗಳ ನಂತರ, ವಿಮಾನ ಹಾರಾಟವನ್ನು ಟ್ರ್ಯಾಕ್ ಮಾಡುವ ಫ್ಲೈಟ್ರಾಡರ್ 24, ಪಾಕಿಸ್ತಾನದ ವಾಯುಪ್ರದೇಶದಿಂದ ಹೆಚ್ಚಿನ ವಿಮಾನಗಳು ಬೇರೆಡೆಗೆ ತಿರುಗುತ್ತಿರುವುದನ್ನು ತೋರಿಸುವ ಚಿತ್ರಗಳನ್ನು ಬಿಡುಗಡೆ ಮಾಡಿದೆ. ಜಮ್ಮು ಕಾಶ್ಮೀರ, ಹಿಮಾಚಲ ಪ್ರದೇಶ, ರಾಜಸ್ಥಾನ, ಗುಜರಾತ್ ಮತ್ತು ಪಂಜಾಬ್ ಈ ಐದು ರಾಜ್ಯಗಳಲ್ಲಿ ಹರಡಿರುವ ಭಾರತದ 27 ವಿಮಾನ ನಿಲ್ದಾಣಗಳನ್ನು ನಾಗರಿಕ ಕಾರ್ಯಾಚರಣೆಗಳಿಗೆ ಮುಚ್ಚಲಾಗಿದೆ ಎಂದು ವಿಮಾನ ನಿಲ್ದಾಣದ ಮೂಲವೊಂದು ತಿಳಿಸಿದೆ. ಈಗ, ನಿಲ್ದಾಣಗಳ ಮುಚ್ಚುವಿಕೆಯು ಅನಿರ್ದಿಷ್ಟಾವಧಿಗೆ ತಲುಪಿದೆ ಮತ್ತು ಮುಂದಿನ ಪ್ರಾರಂಭದ ದಿನಾಂಕಗಳನ್ನು ನಂತರ ತಿಳಿಸಲಾಗುವುದು ಎಂದು ಮೂಲಗಳು ತಿಳಿಸಿವೆ. ಅಮೃತಸರ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬರ್ಮಿಂಗ್ಹ್ಯಾಮ್ನಿಂದ ಮತ್ತು ಗ್ಯಾಟ್ವಿಕ್ನ ಆಗಮಿಸುತ್ತಿದ್ದ ಎರಡು ಅಂತರರಾಷ್ಟ್ರೀಯ ವಿಮಾನಗಳನ್ನು ದೆ ಹ ಲಿ ಗೆ ತಿರುಗಿಸಲಾಗುತ್ತಿದೆ ಎಂದು ಏರ್ ಇಂಡಿಯಾ ನಂತರ ಘೋಷಿಸಿತು. ಮೇ 10 ರವರೆಗೆ ಜಮ್ಮು, ಶ್ರೀನಗರ, ಲೇಹ್, ಜೋಧ್ಪುರ, ಅಮೃತಸರ, ಭುಜ್, ಜಾಮ್ನಗರ, ಚಂಡೀಗಢ ಮತ್ತು ರಾಜ್ಕೋಟ್ಗೆ ಹೋಗುವ ಮತ್ತು ಅಲ್ಲಿಂದ ಹೊರಡುವ ಎಲ್ಲಾ ವಿಮಾನಗಳನ್ನು ರದ್ದುಗೊಳಿಸಿದೆ ಎಂದು ಏರ್ ಇಂಡಿಯಾ ಹೇಳಿದೆ.

ವಾಯುಪ್ರದೇಶ ನಿರ್ಬಂಧಗಳ ಕುರಿತ ಸರ್ಕಾರದ ಅಧಿಸೂಚನೆಯಿಂದಾಗಿ, ಹಲವು ವಿಮಾನ ನಿಲ್ದಾಣಗಳಿಂದ (ಅಮೃತಸರ, ಬಿಕಾನೇರ್, ಚಂಡೀಗಢ, ಧರ್ಮಶಾಲಾ, ಗ್ವಾಲಿಯರ್, ಜಮ್ಮು, ಜೋಧ್ಪುರ, ಕಿಶನ್ಗಢ, ಲೇಹ್, ರಾಜ್ಕೋಟ್ ಮತ್ತು ಶ್ರೀನಗರ) 165ಕ್ಕೂ ಹೆಚ್ಚು ಇಂಡಿಗೋ ವಿಮಾನಗಳನ್ನು ಮೇ 10, 2025 ರಂದು ಬೆಳಿಗ್ಗೆ 5.29 ರವರೆಗೆ ರದ್ದುಗೊಳಿಸಲಾಗಿದೆ ಎಂದು ಇಂಡಿಗೊ ಹೇಳಿದೆ. ಲೇಹ್, ಶ್ರೀನಗರ, ಜಮ್ಮು, ಧರ್ಮಶಾಲಾ, ಕಾಂಡ್ಲಾ ಮತ್ತು ಅಮೃತಸರಕ್ಕೆ ಹೋಗುವ ಮತ್ತು ಅಲ್ಲಿಂದ ಹೊರಡುವ ತನ್ನ ವಿಮಾನಗಳನ್ನು ರದ್ದುಗೊಳಿಸುವುದಾಗಿ ಎಂದು ಸ್ಪೈಸ್ಜೆಟ್ ಘೋಷಿಸಿದೆ. ಅದೇ ವೇಳೆ ಆಕಾಶ ಏರ್, ಶ್ರೀನಗರಕ್ಕೆ ಹೋಗುವ ಮತ್ತು ಅಲ್ಲಿಂದ ಹೊರಡುವ ತನ್ನ ವಿಮಾನಗಳನ್ನು ರದ್ದುಗೊಳಿಸಿದೆ. ಆಪರೇಷನ್ ಸಿಂಧೂರ ಹಿನ್ನಲೆ ಫ್ರಾಂಕ್ಫರ್ಟ್ನಿಂದ ಬ್ಯಾಂಕಾಕ್ಗೆ ಹೋಗುವ ಥಾಯ್ ಏರ್ವೇಸ್ ವಿಮಾನವನ್ನು (ಖಐ-921) ದುಬೈಗೆ ತಿರುಗಿಸಲಾಗಿದೆ ಎಂದು ವರದಿಯಾಗಿದೆ.




# ಬಿಜೆಪಿ ಸಂಸದ ನಿಶಿಕಾಂತ್ ದುಬೆಗೆ ಸುಪ್ರೀಂ ತರಾಟೆ



**ನವದೆಹಲಿ, ಮೇ 08:** ವಕ್ಫ್ (ತಿದ್ದುಪಡಿ) ಕಾಯ್ದೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಮತ್ತು ಅದರ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಸಂಜೀವ್ ಖನ್ನಾ ಅವರನ್ನು ಟೀಕಿಸಿದ ಬಿಜೆಪಿ ಸಂಸದ ನಿಶಿಕಾಂತ್ ದುಬೆಯನ್ನು ಸುಪ್ರೀಂ ಕೋರ್ಟ್ ತೀವ್ರ ತರಾಟೆಗೆ ತೆಗೆದುಕೊಂಡಿದೆ.ದುಬೆ ಅವರ ಹೇಳಿಕೆಗಳು ಸಾರ್ವಜನಿಕರ ದೃಷ್ಟಿಯಲ್ಲಿ ನ್ಯಾಯಾಲಯಗಳ ಮೇಲಿನ ವಿಶ್ವಾಸಾರ್ಹತೆಯನ್ನು ಅಲುಗಾಡಿಸುವ ಉದ್ದೇಶಪೂರ್ವಕ ಪ್ರಯತ್ನವಾಗಿದೆ.

ನ್ಯಾಯಾಂಗದ ಅಧಿಕಾರವನ್ನು ದುರ್ಬಲಗೊಳಿಸುವ ಮತ್ತು ಕಾನೂನು ವ್ಯವಸ್ಥೆಯಲ್ಲಿ ಸಾರ್ವಜನಿಕ ನಂಬಿಕೆಯನ್ನು ಕುಗ್ಗಿಸುವ ಪ್ರಯತ್ನಗಳ ಬಗೆಗಿನ ದೊಡ್ಡ ಕಳವಳವನ್ನು ಇದು ಸೂಚಿಸುತ್ತದೆ ಎಂದು ಮೇ 5ರಂದು ಹೊರಡಿಸಲಾದ ಆದೇಶದಲ್ಲಿ ಸಿಜೆಐ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿ ಪಿ.ವಿ ಸಂಜಯ್ ಕುಮಾರ್ ಅವರ ಪೀಠ ಹೇಳಿದೆ. ಭಾರತದಲ್ಲಿ ನಡೆಯುತ್ತಿರುವ ಎಲ್ಲಾ ಅಂತರ್ಯುದ್ಧಗಳಿಗೆ ಮುಖ್ಯ ನ್ಯಾಯಮೂರ್ತಿ ಜವಾಬ್ದಾರರು ಎಂದು ಹೇಳುವ ಮೂಲಕ, ಸುಪ್ರೀಂ ಕೋರ್ಟ್ ಧಾರ್ಮಿಕ ಯುದ್ಧಗಳನ್ನು ಪ್ರಚೋದಿಸುತ್ತಿದೆ ಎಂಬರ್ಥದಲ್ಲಿ ದುಬೆ ಮಾತನಾಡಿದ್ದಾರೆ. ಇದು ಅವರ ಉದ್ದೇಶವನ್ನು ಸ್ಪಷ್ಟಪಡಿಸುತ್ತದೆ ಎಂದು ನ್ಯಾಯಪೀಠ ಹೇಳಿದೆ. ಆದಾಗ್ಯೂ, ಅರ್ಜಿದಾರರಾದ ವಿಶಾಲ್ ತಿವಾರಿ ಕೋರಿದಂತೆ ದುಬೆ ವಿರುದ್ಧ ಯಾವುದೇ ನ್ಯಾಯಾಂಗ ನಿಂದನೆ ಕ್ರಮ ಕೈಗೊಳ್ಳಲು ನ್ಯಾಯಾಲಯ ನಿರಾಕರಿಸಿದೆ. ನ್ಯಾಯಪೀಠವು ನ್ಯಾಯಾಂಗ ನಿಂದನೆ ಎಂದು ಪರಿಗಣಿಸದಿದ್ದರೂ, ದುಬೆ ಹೇಳಿಕೆಗಳು 1971ರ ನ್ಯಾಯಾಂಗದ ನಿಂದನೆ ಕಾಯ್ದೆಯ ಅಡಿಯಲ್ಲಿ ಒದಗಿಸಲಾದ ವಿನಾಯಿತಿಗಳ ಅಡಿಯಲ್ಲಿ ಬರುವುದಿಲ್ಲ ಎಂದು ಸ್ಪಷ್ಟಪಡಿಸಿದೆ ಎಂದು ವರದಿ ಹೇಳಿದೆ. ದುಬೆ ಅವರ ಹೇಳಿಕೆಗಳು ಸಾಂವಿಧಾನಿಕ ನ್ಯಾಯಾಲಯಗಳ ಪಾತ್ರ ಮತ್ತು ಸಂವಿಧಾನದ ಅಡಿಯಲ್ಲಿ ಅವುಗಳಿಗೆ ನೀಡಲಾದ ಕರ್ತವ್ಯಗಳು ಮತ್ತು ಬಾಧ್ಯತೆಗಳ ಬಗ್ಗೆ ಅಜ್ಞಾನವನ್ನು ತೋರಿಸುತ್ತವೆ ಎಂದು ನ್ಯಾಯಾಲಯ ತಿಳಿಸಿದೆ.

ನಿರ್ದಿಷ್ಟವಾಗಿ ಹೇಳುವುದಾದರೆ, ಯಾವುದೇ ದ್ವೇಷ ಭಾಷಣ ಮತ್ತು ಕೋಮು ದ್ವೇಷವನ್ನು ಹರಡುವ ಪ್ರಯತ್ನಗಳನ್ನು ಕಠಿಣವಾಗಿ ಎದುರಿಸಬೇಕು ಎಂದಿದೆ. ಒಂದು ನಿರ್ದಿಷ್ಟ ಗುಂಪನ್ನು ದೂರವಿಡುವ ಅಥವಾ ಅವಮಾನಿಸುವ ಯಾವುದೇ ಪ್ರಯತ್ನವು ಕ್ರಿಮಿನಲ್ ಅಪರಾಧವಾಗಿದ್ದು, ಅದಕ್ಕೆ ಅನುಗುಣವಾಗಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಿ ಹೇಳಿದೆ.ದೇಶದಲ್ಲಿ ಅಂತರ್ಯುದ್ಧ ಉಂಟಾದರೆ ಅದಕ್ಕೆ ಸಿಜೆಐ ಖನ್ನಾ ಅವರೇ ನೇರ ಕಾರಣ.

ಸುಪ್ರೀಂ ಕೋರ್ಟ್ ಕಾನೂನುಗಳನ್ನು ರೂಪಿಸುವುದಾದರೆ ಸಂಸತ್ತು ಮತ್ತು ರಾಜ್ಯ ವಿಧಾನಸಭೆಗಳನ್ನು ಮುಚ್ಚಿ ಎಂದು ಏಷ್ಯನ್ ನ್ಯೂಸ್ ಇಂಟರ್ನ್ಯಾಷನಲ್ (ಎಎನ್‌ಐ) ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ದುಬೆ ಹೇಳಿದ್ದರು. ವಕ್ಫ್ (ತಿದ್ದುಪಡಿ) ಕಾಯ್ದೆಗೆ ಸಿಜೆಐ ನೇತೃತ್ವದ ಪೀಠ ತಡೆಯಾಜ್ಞೆ ನೀಡಿದ ನಂತರ ಈ ಹೇಳಿಕೆಗಳನ್ನು ನೀಡಿದ್ದರು. ವಕೀಲ ವಿಶಾಲ್ ತಿವಾರಿ ಅವರು ದುಬೆ ಹೇಳಿಕೆ ವಿರುದ್ಧ ನ್ಯಾಯಾಲಯದ ಮೆಟ್ಟಿಲೇರಿದರು, ದುಬೆ ಅವರ ಸಂದರ್ಶನವು ನ್ಯಾಯಾಂಗ ಮತ್ತು ಸುಪ್ರೀಂ ಕೋರ್ಟ್ ಬಗ್ಗೆ ಅವಹೇಳನಕಾರಿ ಹೇಳಿಕೆಗಳಿಂದ ಕೂಡಿದೆ ಎಂದು ಆರೋಪಿಸಿದ್ದರು. ದುಬೆ ವಿರುದ್ಧ ನ್ಯಾಯಾಂಗ ನಿಂದನೆ ಕ್ರಮ ಕೈಗೊಳ್ಳಬೇಕೆಂದು ತಿವಾರಿ ಕೋರಿದ್ದರು.

# ಪಾಕಿಸ್ತಾನ ಮೂಲದ ಚಲನಚಿತ್ರ ತಕ್ಷಣ ನಿಲ್ಲಿಸುವಂತೆ ಒಟಿಟಿ ವೇದಿಕೆಗಳಿಗೆ ಸರ್ಕಾರದ ಖಡಕ್ ನಿರ್ದೇಶನ



**ನವದೆಹಲಿ, ಮೇ 8** ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ, ಭಾರತದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಒಟಿಟಿ ವೇದಿಕೆಗಳು, ಮಾಧ್ಯಮ ಸ್ಟ್ರೀಮಿಂಗ್ ವೇದಿಕೆಗಳು ಮತ್ತು ಮಧ್ಯವರ್ತಿಗಳು ಪಾಕಿಸ್ತಾನ ಮೂಲದ ವೆಬ್-ಸರಣಿಗಳು, ಚಲನಚಿತ್ರಗಳು, ಹಾಡುಗಳ ಸ್ಟ್ರೀಮಿಂಗ್ ಅನ್ನು ತಕ್ಷಣ ನಿಲ್ಲಿಸುವಂತೆ ಸರ್ಕಾರ ಗುರುವಾರ ನಿರ್ದೇಶಿಸಿದೆ. ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಹೊರಡಿಸಿದ ಸಲಹೆಯ ಪ್ರಕಾರ, ರಾಷ್ಟ್ರೀಯ ಭದ್ರತೆಯ ಹಿತದೃಷ್ಟಿಯಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. "ಭಾರತದಲ್ಲಿ ನಡೆದ ಹಲವಾರು ಭಯೋತ್ಪಾದಕ ದಾಳಿಗಳು ಪಾಕಿಸ್ತಾನ ಮೂಲದ ರಾಜ್ಯ ಮತ್ತು ರಾಜ್ಯೇತರ ನಟರೊಂದಿಗೆ ಗಡಿಯಾಚೆಗಿನ ಸಂಪರ್ಕವನ್ನು ಹೊಂದಿವೆ ಎಂದು ಸ್ಥಾಪಿಸಲಾಗಿದೆ. ಇತ್ತೀಚೆಗೆ, ಏಪ್ರಿಲ್ 22, 2025 ರಂದು, ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯು ಹಲವಾರು ಭಾರತೀಯರು, ಒಬ್ಬ ನೇಪಾಳಿ ನಾಗರಿಕರ ಹತ್ಯೆಗೆ ಮತ್ತು ಇತರ ಹಲವಾರು ಜನರಿಗೆ ಗಾಯಗಳಿಗೆ ಕಾರಣವಾಯಿತು" ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

"ರಾಷ್ಟ್ರೀಯ ಭದ್ರತೆಯ ಹಿತದೃಷ್ಟಿಯಿಂದ, ಭಾರತದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಔಖಖ ಪ್ಲಾಟ್‌ಫಾರ್ಮ್‌ಗಳು, ಮಾಧ್ಯಮ ಸ್ಟ್ರೀಮಿಂಗ್ ಪ್ಲಾಟ್‌ಫಾರ್ಮ್‌ಗಳು ಮತ್ತು ಮಧ್ಯವರ್ತಿಗಳು ವೆಬ್-ಸರಣಿಗಳು, ಚಲನಚಿತ್ರಗಳು, ಹಾಡುಗಳು, ಪಾಡ್‌ಕ್ಯಾಸ್ಟ್‌ಗಳು ಮತ್ತು ಇತರ ಸ್ಟ್ರೀಮಿಂಗ್ ಮಾಧ್ಯಮ ವಿಷಯವನ್ನು, ಚಂದಾದಾರಿಕೆ ಆಧಾರಿತ ಮಾದರಿಯಲ್ಲಿ ಲಭ್ಯವಾಗುವಂತೆ ಮಾಡಿದ್ದರೂ ಅಥವಾ ಇಲ್ಲದಿದ್ದರೆ, ಪಾಕಿಸ್ತಾನದಲ್ಲಿ ಅದರ ಮೂಲವನ್ನು ಹೊಂದಿರುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಲ್ಲಿಸಲು ಸೂಚಿಸಲಾಗಿದೆ" ಎಂದು ಅದು ಹೇಳಿದೆ. ಗಮನಾರ್ಹವಾಗಿ, ಭಾರತದ ವಿರುದ್ಧ ಪ್ರಚೋದನಕಾರಿ, ಸುಳ್ಳು ಮತ್ತು ದಾರಿತಪ್ಪಿಸುವ ವಿಷಯವನ್ನು ಪ್ರಸಾರ ಮಾಡಿದ್ದಕ್ಕಾಗಿ ಸರ್ಕಾರವು ಈ ಹಿಂದೆ ಹಲವಾರು ಪಾಕಿಸ್ತಾನಿ ಯೂಟ್ಯೂಬ್ ಚಾನೆಲ್‌ಗಳನ್ನು ನಿಷೇಧಿಸಿತ್ತು.


# ಪಂಜಾಬ್ ಗಡಿ ಜಿಲ್ಲೆಗಳ ಶಾಲೆಗಳು ಬಂದ್

**ನವದೆಹಲಿ, ಮೇ 08:** ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ, ಪಂಜಾಬ್ನ ಆರು ಗಡಿ ಜಿಲ್ಲೆಗಳ ಎಲ್ಲಾ ಶಾಲೆಗಳು ಗುರುವಾರ ಮುಚ್ಚಲ್ಪಟ್ಟಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಫಿರೋಜ್ಪುರ, ಪಠಾಣ್ಕೋಟ್, ಫಜಿಲ್ಕಾ, ಅಮೃತಸರ, ಗುರುದಾಸ್ಪುರ ಮತ್ತು ತರಣ್ ತರಣ್ ಜಿಲ್ಲೆಗಳಲ್ಲಿನ ಶಾಲೆಗಳು ಮುಚ್ಚಲ್ಪಟ್ಟಿವೆ ಎಂದು ಅವರು ಹೇಳಿದ್ದಾರೆ. ಏಪ್ರಿಲ್ 22 ರಂದು ಕಾಶ್ಮೀರದ ಪಹಲ್ಗಾಮ್ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸಶಸ್ತ್ರ ಪಡೆಗಳು ಬುಧವಾರ ಮುಂಜಾನೆ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ) ದಲ್ಲಿನ ಒಂಬತ್ತು ಭಯೋತ್ಪಾದಕ ಗುರಿಗಳ ಮೇಲೆ ಕ್ಷಿಪಣಿ ದಾಳಿ ನಡೆಸಿದ್ದರು. ಇದರ ನಂತರ ಉಭಯ ದೇಶಗಳ ನಡುವೆ ಉದ್ವಿಗ್ನತೆ ಹೆಚ್ಚಾಗಿದೆ. ಭಾರತ ದಾಳಿ ನಡೆಸಿದ ಪ್ರದೇಶಗಳಲ್ಲಿ ಜೈಶ್-ಎ-ಮೊಹಮ್ಮದ್ ಭದ್ರಕೋಟೆಯಾದ ಬಹಾವಲ್ಪುರ್ ಮತ್ತು ಮುರಿಡ್ಕೆಯಲ್ಲಿರುವ ಲಷ್ಕರ್-ಎ-ತೈಬಾದ ನೆಲೆ ಸೇರಿವೆ. ಜಿಲ್ಲೆಯ ಎಲ್ಲಾ ಶಾಲೆಗಳು ಮೇ 8 ರಿಂದ 11 ರವರೆಗೆ ಮುಚ್ಚಲ್ಪಡುತ್ತವೆ ಎಂದು ತರಣ್ ತರಣ್ ಉಪ ಆಯುಕ್ತರು ಆದೇಶ ಹೊರಡಿಸಿದ್ದಾರೆ. ಫಿರೋಜ್ಪುರದಲ್ಲಿ, ಮುಂದಿನ ಆದೇಶದವರೆಗೆ ಮುಂದಿನ 72 ಗಂಟೆಗಳ ಕಾಲ ಶಾಲೆಗಳನ್ನು ಮುಚ್ಚಲು ಅಧಿಕಾರಿಗಳು ಆದೇಶಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಅನ್ಯಾಯದ ವಿರುದ್ಧ ಪ್ರತಿಭಟನೆಗೆ ಸದಾ ಬಿಜೆಪಿಯ ಬೆಂಬಲ: ಛಲವಾದಿ ನಾರಾಯಣಸ್ವಾಮಿ

**ಬೆಂಗಳೂರು, ಮೇ.8–** ಕೆಪಿಎಸ್ಸಿ ಪರೀಕ್ಷೆ ಬರೆದ ವಿದ್ಯಾರ್ಥಿಗಳು ತಮಗೆ ಆಗಿರುವ ಅನ್ಯಾಯವನ್ನು ಪ್ರತಿಭಟಿಸಿ ಯಾವುದೇ ಹೋರಾಟ ಮಾಡಿದರೂ ಬಿಜೆಪಿ ಅವರ ಜೊತೆಯಲ್ಲಿ ಇರಲಿದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಪ್ರಕಟಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ" ದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪಕ್ಷದ ರಾಜ್ಯಾಧ್ಯಕ್ಷ ವಿಜಯೇಂದ್ರ, ನಾನು ಮತ್ತು ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್ ಅವರ ಉಪಸ್ಥಿತಿಯಲ್ಲಿ ಪರೀಕ್ಷಾರ್ಥಿಗಳ ಜೊತೆ ಸಭೆ ನಡೆಸಲಾಗಿದೆ ಎಂದು ವಿವರಿಸಿದರು. ಅವರಿಗೆ ಆಗಿರುವ ಅನ್ಯಾಯವನ್ನು ವಿವರವಾಗಿ ನಮಗೂ ತಿಳಿಸಿದ್ದಾರೆ ಎಂದು ಹೇಳಿದರು.ಕನ್ನಡದಲ್ಲಿ ಪರೀಕ್ಷೆ ಬರೆದ ಸುಮಾರು 70 ಸಾವಿರ ಜನರಿದ್ದಾರೆ. 70–80 ಪ್ರಶ್ನೆಗಳು ತಪ್ಪಾಗಿ ಮುದ್ರಿತವಾಗಿದ್ದು, ಅವರಿಗೆ ಅನ್ಯಾಯವಾಗಿದೆ. ಕೆಲವರು ಮಾತ್ರ ಕೋರ್ಟಿಗೆ ಹೋಗಿದ್ದಾರೆ. ಮರುಪರೀಕ್ಷೆಗೆ ಆದೇಶವೂ ಆಗಿದೆ ಎಂದು ಗಮನ ಸೆಳೆದರು.ಸರಕಾರ ಹೇಳುವುದೇ ಒಂದು ಮಾಡುವುದೇ ಒಂದು ಎಂದು ಆಕ್ಷೇಪಿಸಿದರು. ಮೇಲ್ಮನೆಯಲ್ಲಿ ಪ್ರಶ್ನಿಸಿದಾಗ ವಿದ್ಯಾರ್ಥಿಗಳ ಪರ ಇದ್ದೇನೆ ಎಂದು



ಮುಖ್ಯಮಂತ್ರಿಗಳು ಹೇಳಿದ್ದರು. ಕೋರ್ಟ್ ಆದೇಶ ನೋಡಿ ಮರುಪರೀಕ್ಷೆ ಮಾಡುವುದಾಗಿ ಹೇಳಿದ್ದರು. ಆದರೆ, ಕೋರ್ಟ್ ಆದೇಶ ಬಂದರೂ ಮೀನಾಮೇಷ ಮಾಡುತ್ತಿದ್ದಾರೆ ಎಂದು ಟೀಕಿಸಿದರು.ಮೊನ್ನೆ ನಡೆದ ಪರೀಕ್ಷೆಯಲ್ಲಿ ಉತ್ತರ ಪತ್ರಿಕೆಗಳು ಸಕಾಲದಲ್ಲಿ ಸ್ಥಳ ಸೇರಿರಲಿಲ್ಲ. ವಿದ್ಯಾರ್ಥಿಗಳು ಪ್ರಶ್ನಿಸಿದಾಗ ಪೊಲೀಸರು ಅವರನ್ನು ಹೊಡೆದು ಜೀಪಿನಲ್ಲಿ ತುಂಬಿಕೊಂಡು ಹೋದುದನ್ನು ಕಣ್ಣಾರೆ ನೋಡಿದ್ದೇವೆ ಎಂದು ತಿಳಿಸಿದರು.

ಪ್ರಶ್ನಿಸಿದವರನ್ನು ಹದ್ದುಬಸ್ತಿನಲ್ಲಿ ಇಡುವ ಕೆಲಸ ಸರಿಯೇ? ಪೊಲೀಸಿನವರ ಮೂಲಕ ಅವರನ್ನು ಹದ್ದುಬಸ್ತಿನಲ್ಲಿ ಇಡುವುದು ಸರಿಯೇ ಎಂದು ಕೇಳಿದರು. ಇದು ಸುಲಿಗೆ ಸರಕಾರ. ಇದು ಸ್ಕೀಂ ಸರಕಾರವಲ್ಲ; ಸ್ಕ್ಯಾಮ್ ಸರಕಾರ. ಚೆನ್ನಾಗಿ ಸುಲಿಗೆ ಮಾಡಿ ತಲುಪಿಸುತ್ತಿದ್ದ ನಿವೃತ್ತ ಅಧಿಕಾರಿಗಳನ್ನು ನಿವೃತ್ತರಾದರೂ ಬಿಡುತ್ತಿಲ್ಲ; ಒಂದು ವರ್ಷ, ಎರಡು ವರ್ಷ, ಮೂರು ವರ್ಷ, ಕೆಲವರನ್ನು ಆರೇಳು ವರ್ಷ ಇಟ್ಟುಕೊಂಡಿದ್ದಾರೆ. ಹೊಸದಾಗಿ ಬಂದವರಿಗೆ ಸುಲಿಗೆಯ ಅನುಭವ ಇರದಿರುವುದೇ ಇದಕ್ಕೆ ಕಾರಣ ಎಂದು ವ್ಯಂಗ್ಯವಾಡಿದರು.



ಆಪರೇಷನ್ ಸಿಂಧೂರಕ್ಕೆ ಬೆಂಬಲವಾಗಿ ಗುರುವಾರ ಬೆಂಗಳೂರಿನ ಗವಿ ಗಂಗಾಧರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು.

### ಅಕ್ರಮವಾಗಿ ಮರಗಳನ್ನು ಕಡಿಯುವವರ ವಿರುದ್ಧ ಕ್ರಮ

# ವೃಕ್ಷ ಸಂರಕ್ಷಣಾ ಕಾಯಿದೆಗೆ ತಿದ್ದುಪಡಿ ಅಗತ್ಯ: ಈಶ್ವರ ಖಂಡ್ರೆ

**ಬೆಂಗಳೂರು, ಮೇ. 8–** ಸರ್ಕಾರಿ ಭೂಮಿ, ಅರಣ್ಯ, ರಸ್ತೆ ಬದಿಯಲ್ಲಿನ ಮರಗಳನ್ನು ಅಕ್ರಮವಾಗಿ ಕಡಿಯುವವರ ವಿರುದ್ಧ ಕಠಿಣ ಕ್ರಮ ಜರುಗಿಸಲು ಮತ್ತು ಹೆಚ್ಚಿನ ದಂಡ ಹಾಕಲು ವೃಕ್ಷ ಸಂರಕ್ಷಣಾ ಕಾಯಿದೆಗೆ ತಿದ್ದುಪಡಿ ತರುವ ಅಗತ್ಯವಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಅರಣ್ಯ ಭವನದಲ್ಲಿಂದು ಕೆ.ಡಿ.ಪಿ ಮತ್ತು ಎಂ.ಎಂ.ಆರ್. ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಇತ್ತೀಚೆಗೆ ಸುಪ್ರೀಂಕೋರ್ಟ್ ಸಹ ಹೆಚ್ಚಿನ ಮರಗಳನ್ನು ಕಡಿಯುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದೆ.

ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದ'ಲಾವಣೆಯ ಪ್ರಸಕ್ತ ಸನ್ನಿವೇಶದಲ್ಲಿ ವೃಕ್ಷ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಅಭಿವೃದ್ಧಿಯ ಹೆಸರಲ್ಲಿ ನೂರಾರು ಮರಗಳ ಕಡಿತಲೆಗೆ ಅನುಮತಿ ನೀಡುತ್ತಿರುವ ಬಗ್ಗೆ ಜನಾಕ್ರೋಶ ವ್ಯಕ್ತವಾಗುತ್ತಿದೆ. ಈ ಹಿನ್ನಲೆಯಲ್ಲಿ ಅನಗತ್ಯವಾಗಿ ಮರ ಕಡಿಯಲು ಅನುಮತಿ ನೀಡಬಾರದು ಎಂದು ಸೂಚನೆ ನೀಡಿದರು.

ಅರಣ್ಯ ಒತ್ತುವರಿ ಮಾಹಿತಿಗೆ ಸೂಚನೆ:–2015ರ ಪೂರ್ವದಲ್ಲಿ ಪಟ್ಟಾ ಜಮೀನು ಮತ್ತು ಒತ್ತುವರಿ ಸೇರಿ 3 ಎಕರೆಗಿಂತ ಕಡಿಮೆ ಇರುವ ಬಡ ಜನರಿಗೆ ಪುನರ್ವಸತಿ ಕಲ್ಪಿಸುವವರೆಗೆ ತೊಂದರೆ ನೀಡದೆ, ದೊಡ್ಡ ಒತ್ತುವರಿಯನ್ನು ನಿರ್ದಾಕ್ಷಿಣ್ಯವಾಗಿ ತೆರವು ಮಾಡಿಸಲು ನಿರ್ದೇಶನ ನೀಡಿದರು.ಅರಣ್ಯ ಭೂಮಿಯ ಇಂಡೀಕರಣಕ್ಕೆ ಪತ್ರ ಬರೆಯುವ ಬದಲು ಎ.ಸಿ. ನ್ಯಾಯಾ ಲಯದಲ್ಲಿ ಅರ್ಜಿ ಸಲ್ಲಿಸುವಂತೆ ಸೂಚಿಸಿದರು.

2015ರ ನಂತರದ ಒತ್ತುವರಿಯ ವಿಚಾರದಲ್ಲಿ ಶೂನ್ಯ ಸಹಿಷ್ಣತೆ ಇರಬೇಕು, ಯಾರೇ 2015ರ ನಂತರ ಅರಣ್ಯ ಒತ್ತುವರಿ ಮಾಡಿದ್ದರೆ, ಮುಲಾಜಿಲ್ಲದೆ ತೆರವು ಮಾಡಿ ಕ್ರಮ ಜರುಗಿಸಬೇಕು, ಕಳೆದ 2 ವರ್ಷದಲ್ಲಿ ಆಗಿರುವ ಒತ್ತುವರಿ, ಮಾಡಿರುವ ತೆರವು ಮತ್ತು ಕೈಗೊಂಡ ಕ್ರಮದ ಬಗ್ಗೆ ಮಾಹಿತಿ ನೀಡುವಂತೆ ಸೂಚಿಸಿದರು.

ಸಾರ್ವಜನಿಕರು ತಮ್ಮ ಸಮಸ್ಯೆ ಪರಿಹಾರಕ್ಕಾಗಿ ಕಚೇರಿಗೆ ಬಂದಾಗ ಅವರೊಂದಿಗೆ ಸೌಜನ್ಯದಿಂದ



ವರ್ತಿಸುವಂತೆ ಸೂಚನೆ ನೀಡಿದರು. ಇದೆ ಸಂದರ್ಭದಲ್ಲಿ ನಾಗರಹೊಳೆ ಎ ವೈಲ್ಡ್ ಪ್ಯಾರಡೈಸ್ ಮತ್ತು ಕಾಳಿ ಹುಲಿ ಸಂರಕ್ಷಣಾ ಪ್ರದೇಶ ಹೊರತಂದಿರುವ ವನ್ಯಜೀವಿ ವಿಧಿವಿಜ್ಞಾನ ಸಾಕ್ಷ್ಯ ಸಂಗ್ರಹಣಾ ಮಾರ್ಗದರ್ಶಿ ಎಂಬ ಎರಡು ಪುಸ್ತಕಗಳನ್ನು ಈಶ್ವರ ಖಂಡ್ರೆ ಬಿಡುಗಡೆ ಮಾಡಿದರು. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ, ಮುಖ್ಯ ವನ್ಯಜೀವಿ ಪರಿಪಾಲಕರಾದ ಸುಭಾಷ್ ಮಾಲ್ಕಡೆ ಮತ್ತಿತರರು ಉಪಸ್ಥಿತರಿದ್ದರು. ರಾಜ್ಯದ ಉಪ ಅರಣ್ಯ ಸಂರಕ್ಷಣಾಧಿಕಾರಿ ಗಳವರೆಗಿನ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

### ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಿರುದ್ಧದ ಎಫ್ಐಆರ್‌ಗೆ ತಡೆಯಾಜ್ಞೆ

# ನಿರೀಕ್ಷಣಾ ಜಾಮೀನು ರದ್ದತಿಗೆ ಅವಕಾಶವಿಲ್ಲ: ಹೈಕೋರ್ಟ್ ಸ್ಪಷ್ಟನೆ

**ಬೆಂಗಳೂರು, ಮೇ.8–** ಲೋಕಾಯುಕ್ತ ಎಸ್ಐಟಿ ಮುಖ್ಯಸ್ಥರಿಗೆ ಬೆದರಿಕೆ ಹಾಕಿದ ಆರೋಪದಲ್ಲಿ ಮಾಜಿ ಮುಖ್ಯಮಂತ್ರಿ ಮತ್ತು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಿರುದ್ಧದ ಎಫ್ಐಆರ್‌ಗೆ ತಡೆಯಾಜ್ಞೆಯಿದ್ದಾಗ, ಅದೇ ಆರೋಪದಲ್ಲಿ ಈಗಾಗಲೇ ಮಂಜೂರಾಗಿದ್ದ ನಿರೀಕ್ಷಣಾ ಜಾಮೀನನ್ನು ರದ್ದುಕೋರಲು ಅವಕಾಶವಿಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ಶ್ರೀ ಸಾಯಿ ವೆಂಕಟೇಶ್ವರ ಮಿನರಲ್ಸ್‌ಗೆ ಅಕ್ರಮವಾಗಿ 550 ಎಕರೆ ಜಮೀನನ್ನು ಗಣಿಗಾರಿಕೆಗೆ ನೀಡಿದ ಆರೋಪ ಸಂಬಂಧ ಈಗಾಗಲೇ ಮಂಜೂರಾಗಿರುವ ನಿರೀಕ್ಷಣಾ ಜಾಮೀನು ರದ್ದು ಕೋರಿ ಲೋಕಾಯುಕ್ತ ಪೊಲೀಸರು ವಿಚಾರಣಾ ನ್ಯಾಯಾಲಯಕ್ಕೆ ಸಲ್ಲಿಸಿದ್ದ ಮನವಿ ಅಮಾನತ್ತಿನಲ್ಲಿಡಬೇಕು ಎಂದು ಕುಮಾರಸ್ವಾಮಿ ಅರ್ಜಿ ಸಲ್ಲಿಸಿದ್ದರು.ಈ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿ.ಶ್ರೀಶಾನಂದ ಅವರಿದ್ದ ರಜಾಕಾಲದ ಏಕ ಸದಸ್ಯ ಪೀಠ, ಈ ಸ್ಪಷ್ಟನೆ ನೀಡಿದೆ. ಅಲ್ಲದೇ, ಈ ಸಂಬಂಧ ವಿಚಾರಣಾ ನ್ಯಾಯಾಲಯವೇ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿತು.

ಜೊತೆಗೆ, ಶ್ರೀಸಾಯಿ ವೆಂಕಟೇಶ್ವರ ಮಿನರಲ್ಸ್‌ಗೆ ಜಮೀನು ಮಂಜೂರು ಮಾಡಿದ ಪ್ರಕರಣ ದಾಖಲಾಗಿ ಹಲವು ವರ್ಷ ಆದರೂ, ಆರೋಪ ಪಟ್ಟಿ ಏಕೆ ಸಲ್ಲಿಸಿಲ್ಲ ಎಂದು ಪ್ರಶ್ನಿಸಿತು. ಅಲ್ಲದೇ, ರಾಜ್ಯಪಾಲರು ಅನುಮತಿ ನೀಡಿಲ್ಲದ ಕುರಿತ ಸುಬ್ರಹ್ಮಣ್ಯಸ್ವಾಮಿ ವಿರುದ್ಧದ ಮನಮೋಹನ್ ಸಿಂಗ್ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ಆದೇಶವಿದ್ದು, ಅದನ್ನು ಏಕೆ ಅನುಸರಿಸಿಲ್ಲ. ಎಲ್ಲ ಪ್ರಕರಣಗಳಲ್ಲಿ ಸುಪ್ರೀಂ ಕೋರ್ಟ್‌ಗೆ ಹೋಗುತ್ತೀರಿ. ಇಲ್ಲಿ ಏಕೆ ಹೋಗಿಲ್ಲ ಎಂದು ಮೌಖಿಕವಾಗಿ ಪ್ರಶ್ನಿಸಿ ಅರ್ಜಿ ಇತ್ಯರ್ಥಪಡಿಸಿ ಆದೇಶಿಸಿತು.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಶ್ರೀ ಸಾಯಿ ಮಿನರಲ್ಸ್‌ಗೆ ಅಕ್ರಮವಾಗಿ ಗಣಿ ಗುತ್ತಿಗೆ ನೀಡಿದ ಪ್ರಕರಣದಲ್ಲಿ ಷರತ್ತುಗಳ ಅನ್ವಯ ನಿರೀಕ್ಷಣಾ ಜಾಮೀನು ಮಂಜೂರು ಮಾಡಲಾಗಿದೆ. ಈ ಷರತ್ತುಗಳನ್ನು ಉಲ್ಲಂಘಿಸಿ ಅರ್ಜಿದಾರ ಆರೋಪಿಯು ತನಿಖಾಧಿಕಾರಿಯ ವಿರುದ್ಧ ಆರೋಪಗಳನ್ನು ಮಾಡಿದ್ದು, ಬೆದರಿಕೆ ಹಾಕಿದ್ದಾರೆ ಎಂಬ ಆರೋಪವಿದೆ. ಆದರೆ, ಬೆದರಿಕೆ ಹಾಕಿದ ಆರೋಪ ಸಂಬಂಧ





ಅರ್ಜಿದಾರರ ವಿರುದ್ಧ ಎಫ್ಐಆರ್ ದಾಖಲಾಗಿದ್ದು, ಇದಕ್ಕೆ ಹೈಕೋರ್ಟ್‌ನ ಮತ್ತೊಂದು ಪೀಠ ತಡೆ ನೀಡಿದೆ.ಅಲ್ಲದೆ, ತನಿಖಾ ಮುಖ್ಯಸ್ಥರಿಗೆ ಬೆದರಿಕೆ ಹಾಕುವ ಮೂಲಕ ನಿರೀಕ್ಷಣಾ ಜಾಮೀನು ಮಂಜೂರು ಮಾಡುವ ಸಂದರ್ಭದಲ್ಲಿ ವಿಧಿಸಿರುವ ಷರತ್ತುಗಳನ್ನು ಉಲ್ಲಂಘಿಸಿದ ಆರೋಪದಲ್ಲಿ ನಿರೀಕ್ಷಣಾ ಜಾಮೀನು ರದ್ದು ಕೋರಿ ವಿಚಾರಣಾ ನ್ಯಾಯಾಲಯಕ್ಕೆ ಮನವಿ ಮಾಡಲಾಗಿದೆ. ಆದರೆ, ಇದೇ ಆರೋಪದ ಎಫ್ಐಆರ್‌ಗೆ ತಡೆಯಿರುವ ಸಂದರ್ಭದಲ್ಲಿ ನಿರೀಕ್ಷಣಾ ಜಾಮೀನು ರದ್ದುಕೋರಿ ಅರ್ಜಿ ಸಲ್ಲಿಸಲು ಅವಕಾಶವಿಲ್ಲ ಎಂದು ನ್ಯಾಯಪೀಠಕ್ಕೆ ತಿಳಿಸಿದರು.

ಅಲ್ಲದೇ, 11 ವರ್ಷಗಳ ಹಿಂದೆ ಅರ್ಜಿದಾರ ಕುಮಾರಸ್ವಾಮಿಗೆ ಮಂಜೂರು ಮಾಡಿದ್ದ ನಿರೀಕ್ಷಣಾ ಜಾಮೀನು ರದ್ದುಕೋರಿದ್ದು, ಪ್ರಕರಣದ ವಾದ ಮಂಡನೆ ವಿಚಾರಣಾಧೀನ ನ್ಯಾಯಾಲಯದಲ್ಲಿ ಇಂದು ನಿಗದಿಯಾಗಿದೆ. ಅಕ್ರಮ ಗಣಿಕಾರಿಗೆ ಆರೋಪದಲ್ಲಿ ತನಿಖಾ ಸಂಸ್ಥೆ ಮುಖ್ಯಸ್ಥರಿಗೆ ಬೆದರಿಕೆ ಹಾಕಿದ ಆರೋಪ ಸಂಬಂಧ ದಾಖಲಾದ ಎಫ್ಐಆರ್‌ಗೆ ತಡೆಯಿದ್ದು, ಅದನ್ನು ಆಧರಿಸಿ ನಿರೀಕ್ಷಣಾ ಜಾಮೀನು ರದ್ದುಕೋರಿದ್ದಾರೆ. ಅದಕ್ಕೆ ಅವಕಾಶವಿಲ್ಲವೆಂದು ತಿಳಿಸಿದರು.ಇದಕ್ಕೆ ಆಕ್ಷೇಪಿಸಿದ ಲೋಕಾಯುಕ್ತ ಪರ ವಕೀಲರು, ಶ್ರೀಸಾಯಿ ಮಿನರಲ್ಸ್‌ಗೆ ಗಣಿಕಾರಿಕೆಗೆ ಅನುಮತಿ ನೀಡಿದ ಆರೋಪದಲ್ಲಿ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದ್ದು, ತನಿಖಾ ಸಂಸ್ಥೆ ಮುಖ್ಯಸ್ಥರಿಗೆ ಬೆದರಿಕೆ ಹಾಕುವ ಮೂಲಕ ಜಾಮೀನು ಷರತ್ತುಗಳನ್ನು ಉಲ್ಲಂಘಿಸಿದ್ದಾರೆ. ಆದ್ದರಿಂದ ನಿರೀಕ್ಷಣಾ ಜಾಮೀನು ರದ್ದುಕೋರಿರುವುದಾಗಿ ವಿವರಿಸಿದರು.

ವಾದ–ಪ್ರತಿವಾದ ಆಲಿಸಿದ ಪೀಠ, ಬೆದರಿಕೆ ಆರೋಪ ಸಂಬಂಧದ ಎಫ್ಐಆರ್‌ಗೆ ತಡೆಯಿದೆ. ಆ ಪ್ರಕರಣ ಇತ್ಯರ್ಥವಾಗುವವರೆಗೂ ನಿರೀಕ್ಷಣಾ ಜಾಮೀನು ಕೋರಿ ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಲು ಅವಕಾಶವಿಲ್ಲ ಎಂದು ತಿಳಿಸಿ ಅರ್ಜಿ ಇತ್ಯರ್ಥ ಪಡಿಸಿ ಆದೇಶಿಸಿದೆ.

### ಕಾವೇರಿ ನೀರು ಸಂಪರ್ಕ ಪ್ರಕ್ರಿಯೆಯನ್ನು ಸರಳಗೊಳಿಸಲು ಕ್ರಮ

# ಜಲಸಂಪರ್ಕ ಶುಲ್ಕ ಪಾವತಿಸಲು ಇಎಂಐ ಪ್ರಯೋಗಕ್ಕೆ ಜಲಮಂಡಳಿ ಚಾಲನೆ

ಬೆಂಗಳೂರು, ಮೇ.8– ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾವೇರಿ ನೀರು ಸಂಪರ್ಕ ಪಡೆಯುವ ಪ್ರಕ್ರಿಯೆಯನ್ನು ಸರಳಗೊಳಿಸಲು ಮಹತ್ವದ ಕ್ರಮಕ್ಕೆ ಮುಂದಾಗಿದೆ. ದೊಡ್ಡ ಅಪಾರ್ಟ್ ಮೆಂಟ್ ಸಂಕೀರ್ಣಗಳು ಮತ್ತು ವಾಣಿಜ್ಯ ಕಟ್ಟಡಗಳಿಗೆ ಕಾವೇರಿ ನೀರು ಸಂಪರ್ಕ ಶುಲ್ಕವನ್ನು ಸುಲಭವಾಗಿ ಪಾವತಿಸಲು ಇಎಂಐ ಆಯ್ಕೆಯನ್ನು ಪರಿಚಯಿಸುವ ಪ್ರಯೋಗಕ್ಕೆ ಜಲಮಂಡಳಿ ಚಾಲನೆ ನೀಡಿದೆ.

ಈ ಯೋಜನೆಯು ನಾಳೆಯಿಂದ ಜಾರಿಗೆ ಬರಲಿದ್ದು, ಸುಮಾರು 3,500 ಅಪಾರ್ಟ್ಮೆಂಟ್ಗಳು ಮತ್ತು ಒಂದು ಲಕ್ಷಕ್ಕೂ ಹೆಚ್ಚು ಕಟ್ಟಡಗಳಿಗೆ ಇದರಿಂದ ಪ್ರಯೋಜನವಾಗಲಿದೆ. ಈ ಹೊಸ ಯೋಜನೆಯಡಿ, ಕಾವೇರಿ ನೀರು ಸಂಪರ್ಕ ಪಡೆಯಲು ಒಟ್ಟು ಶುಲ್ಕದ ಕೇವಲ ಶೇ.20 ರಷ್ಟು ಮೊತ್ತವನ್ನು ಡೌನ್‌ಪೇಮೆಂಟ್ ಆಗಿ ಪಾವತಿಸಿದರೆ ಸಾಕು. ಉಳಿದ ಮೊತ್ತವನ್ನು 12 ತಿಂಗಳ ಇಎಂಐಗಳಲ್ಲಿ ಕಟ್ಟಬಹುದಾಗಿದೆ ಎಂದು ಜಲಮಂಡಳಿಯ ಮೂಲಗಳನ್ನು ವರದಿ ಮಾಡಿದೆ.

ಈ ಉಪಕ್ರಮದಿಂದ ಸುಮಾರು 800 ಕೋಟಿ ರೂಪಾಯಿಗಳ ಆದಾಯವನ್ನು ಗಳಿಸುವ ನಿರೀಕ್ಷೆಯಿದೆ. ಈ ಯೋಜನೆಯಿಂದ ಅಪಾರ್ಟ್ ಮೆಂಟ್‌ಗಳು ಮತ್ತು ವಾಣಿಜ್ಯ ಸಂಸ್ಥೆಗಳಿಗೆ ಹಣಕಾಸಿನ ಒತ್ತಡ ಕಡಿಮೆಯಾಗಲಿದ್ದು, ಕಾವೇರಿ ನೀರಿನ ಸಂಪರ್ಕ ಪಡೆಯುವ ಪ್ರಕ್ರಿಯೆಯನ್ನು ವೇಗಗೊಳಿಸಲಿದೆ.ಈವರೆಗೆ ಕೇವಲ 98,000 ಕಟ್ಟಡಗಳು ಮಾತ್ರ ಸಂಪರ್ಕಕ್ಕಾಗಿ ಅರ್ಜಿ ಸಲ್ಲಿಸಿವೆ. ಹೆಚ್ಚಿನ ಶುಲ್ಕ ಮತ್ತು ಆರ್ಥಿಕ ಸಮಸ್ಯೆಗಳಿಂದಾಗಿ ಅನೇಕ ಆಸ್ತಿ ಮಾಲೀಕರು ಅರ್ಜಿ ಸಲ್ಲಿಕೆಯನ್ನು ವಿಳಂಬಗೊಳಿಸಿದ್ದರು. ಈ ಇಎಂಐ ಯೋಜನೆಯು ಈ ಸಮಸ್ಯೆಗೆ ಪರಿಹಾರವಾಗಲಿದೆ ಎಂದು ಜಲಮಂಡಳಿ ಭಾವಿಸಿದೆ.

### ಪಾಕಿಸ್ತಾನ ವಿರುದ್ಧ ಆಪರೇಷನ್ ಸಿಂಧೂರ ಕಾರ್ಯಾಚರಣೆ


# ಅತ್ಯಾಧುನಿಕ ಶಸ್ತ್ರಗಳು ತಯಾರಾಗಿದ್ದು ಬೆಂಗಳೂರಿನ ಎಚ್ಎಎಲ್‌ನಲ್ಲಿ

**ಬೆಂಗಳೂರು, ಮೇ.8–** ಪಾಕಿಸ್ತಾನ ಹಾಗೂ ಪಾಕ್ ಆಕ್ರಮಿತ ಕಾಶ್ಮೀರ (ಪಿಒಕೆ) ಉಗ್ರರು ಹಾಗೂ ಉಗ್ರರ ತರಬೇತಿ ಶಿಬಿರಗಳನ್ನು ಧ್ವಂಸ ಮಾಡಲು ಭಾರತದ ಸೈನಿಕರು ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆಗೆ ಬಳಸಿದ ಅತ್ಯಧುನಿಕ ಶಸ್ತ್ರಗಳು ತಯಾರಾಗಿದ್ದು ಕರ್ನಾಟಕದ ರಾಜಧಾನಿ ಬೆಂಗಳೂರಿನಲ್ಲಿ!

ಬೆಂಗಳೂರಿನ ಕಂಪನಿ ನಿರ್ಮಿಸಿದ ಸ್ಕೈ ಸ್ಟ್ರೈಕರ್ ಸೂಸೈಡ್ ಡ್ರೋನ್‌ಗಳನ್ನು ಬಳಕೆ ಮಾಡಿರುವುದನ್ನು ರಕ್ಷಣಾ ಇಲಾಖೆ ಖಚಿತಪಡಿಸಿದೆ. ಇಸ್ರೇಲ್‌ನ ಎಲ್ಬಿಟ್ ಸಿಸ್ಟಂಗಳ ಸಹಯೋಗದೊಂದಿಗೆ ಬೆಂಗಳೂರು ಮೂಲದ ಆಲ್ಫಾಡಿಸೈನ್ (ಎಡಿಟಿಎಲ್) ಅಭಿವೃದ್ಧಿಪಡಿಸಿದ ಸೈ ಸ್ಟ್ರೈಕರ್ ಆತ್ಮಹತ್ಯಾ ಡ್ರೋನ್‌ಗಳು ಜಮ್ಮು ಮತ್ತು ಕಾಶ್ಮೀರದ ಮುಂದಿನ ಪ್ರದೇಶಗಳಲ್ಲಿ ಅಪರೇಷನ್ ಸಿಂಧೂರ್ ಸಮಯದಲ್ಲಿ ತಮ್ಮ ಕಾರ್ಯಾಚರಣೆಗೆ ಬಳಸಿ ಉಗ್ರರ ನೆಲೆಗಳನ್ನು ನಿರ್ನಾಮ ಮಾಡಿವೆ. ಶತ್ರು ಗುರಿಗಳನ್ನು ಪತ್ತೆಹಚ್ಚಲು ಮತ್ತು ಹೊಡೆಯಲು ವಿನ್ಯಾಸಗೊಳಿಸಲಾಗಿದೆ. ಯುದ್ಧ ಸಾಮಗ್ರಿಗಳು 5 ಕೆಜಿ ಸಿಡಿತಲೆಗಳನ್ನು ಸಾಗಿಸಲು ಮತ್ತು 100 ಕಿ ಮೀ ವ್ಯಾಪ್ತಿಯಲ್ಲಿ ನೇರ–ಬೆಂಕಿಯ ವೈಮಾನಿಕ ನಿಖರ ದಾಳಿಯನ್ನು ಮಾಡಲು ಸಮರ್ಥವಾಗಿವೆ. ಅಂತಹ 100 ಸ್ಕೈ ಸ್ಟ್ರೈಕರ್‌ಗಳಿಗೆ 2021ರ ಖರೀದಿ ಒಪ್ಪಂದದ ಅಡಿಯಲ್ಲಿ ಡ್ರೋನ್‌ಗ್ಗಳನ್ನು ಭಾರತೀಯ ಸೇನೆಗೆ ಸೇರಿಸಲಾಗಿತ್ತು.

ಯುಎಎಸ್ನಂತೆ (ಮಾನವರಹಿತ ವಿಮಾನ ವ್ಯವಸ್ಥೆ) ಹಾರುತ್ತದೆ ಮತ್ತು ಕ್ಷಿಪಣಿಯಂತೆ ಇದು ಹೊಡೆದು ಹಾಕುತ್ತದೆ. ದೂರದಲ್ಲೇ ಸ್ಕೈ ಸ್ಟೀಕರ್ ನಿಯಂತ್ರಣ ಮಾಡಬಹುದಾಗಿರುವ ಕಾರಣ ಭಾರತ ಸುಲಭವಾಗಿ ಗಡಿಯನ್ನು ದಾಟಿ ಉಗ್ರರ ನೆಲೆಗಳ ಮೇಲೆ ಅಪ್ಪಳಿಸಿ ಸ್ಫೋಟಗೊಂಡಿದೆ. ಸ್ಫೋಟದ ತೀವ್ರತೆಗೆ ನೆಲೆಗಳು ಧ್ವಂಸಗೊಂಡಿವೆ. ವಿಮಾನದ ಮಾದರಿಯಲ್ಲಿರುವ ಈ ಡ್ರೋನ್ 100 ಕಿ ಮೀ ದೂರದಲ್ಲಿರುವ ಗುರಿಯನ್ನು ಧ್ವಂಸ ಮಾಡುವುದರ ಜೊತೆಗೆ 5 ಕೆಜಿ ಅಥವಾ 10 ಕೆಜಿ ಸಿಡಿತಲೆಯನ್ನು ಹೊತ್ತುಕೊಂಡು ಹೋಗುವ ಸಾಮರ್ಥ್ಯವನ್ನು ಹೊಂದಿದೆ. ಕಡಿಮೆ ಎತ್ತರದಲ್ಲಿ ಹಾರುವ ಮೂಲಕ ನಿಖರ ಗುರಿಯನ್ನು ತಲಪುವುದು ಇದರ ವಿಶೇಷತೆ.

ಭಾರತ 2021ರಲ್ಲಿ 100 ಸ್ಕೈ ಸ್ಟ್ರೈಕರ್‌ಗಳಿಗಾಗಿ ತುರ್ತು ಖರೀದಿ ಆದೇಶವನ್ನು ನೀಡಿತ್ತು. ಇಲ್ಲಿಯವರೆಗೆ ಭಾರತದ ಯಾವುದೇ ದೊಡ್ಡ



ಕಾರ್ಯಾಚರಣೆಯಲ್ಲಿ ಬಳಕೆಯಾಗಿರಲಿಲ್ಲ. ಆದರೆ ಮೊದಲ ಬಾರಿಗೆ ಈ ಸೂಸೈಡ್ ಡ್ರೋನ್ ಆಪರೇಷನ್ ಸಿಂಧೂರ ಕಾರ್ಯಾಚರಣೆಗೆ ಬಳಕೆ ಮಾಡಲಾಗಿದ್ದು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ. ಪಾಕಿಸ್ತಾನದಲ್ಲಿನ ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಲು ಭಾರತದ ಆಯ್ಕೆಯ ಆಯುಧಗಳಾದ ಸ್ಕಾಲ್ಡ್ ಕ್ರೂಸ್ ಕ್ಷಿಪಣಿಗಳು ಮತ್ತು ಹ್ಯಾಮರ್ ಬಾಂಬ್ ಜೊತೆಗೆ, ಭಾರತೀಯ ಸೇನೆಯು ನಿಖರವಾದ ದಾಳಿಗಾಗಿ ಸ್ಥಳೀಯವಾಗಿ ನಿರ್ಮಿಸಲಾದ ಸ್ಕೈ ಸ್ಟ್ರೈಕರ್ ಆತ್ಮಹತ್ಯಾ ಡ್ರೋನ್‌ಗಳನ್ನು ನಿಯೋಜಿಸಿದೆ ಎಂದು ಮೂಲಗಳು ತಿಳಿಸಿವೆ.

ಸ್ಕೈ ಸ್ಟ್ರೈಕರ್‌ಗಳನ್ನು ಭಯೋತ್ಪಾದನಾ–ವಿರೋಧಿ ಕಾರ್ಯಾಚರಣೆಗಳಲ್ಲಿ ಪರಿಣಾಮಕಾರಿಯಾಗಿ ನಿಯೋಜಿಸಲಾಗುತ್ತದೆ. ನಿರ್ದಿಷ್ಟವಾಗಿ ಪಾಕಿಸ್ತಾನ ಆಕ್ರಮಿತ ಪ್ರದೇಶಗಳಲ್ಲಿ ಗಡಿಯುದ್ದಕ್ಕೂ ಮೂಲಸೌಕರ್ಯಗಳನ್ನು ಗುರಿಯಾಗಿರಿಸಿಕೊಳ್ಳುವಲ್ಲಿ ಇವು ಬಹುಪಯೋಗಿಯಾಗಿವೆ.

ಕಾಮಿಕೇಜ್ ಡ್ರೋನ್ಸ್ ಎಂದೂ ಕರೆಯಲ್ಪಡುವ ಈ ಆತ್ಮಾಹುತಿ ಡ್ರೋನ್‌ಗಳು ವೆಚ್ಚ–ಪರಿಣಾಮಕಾರಿ ಮತ್ತು ದೀರ್ಘ–ಶ್ರೇಣಿಯ ಸ್ಟ್ರೈಕರ್‌ಗಳಿಗೆ ಸಮರ್ಥವಾಗಿವೆ. ವಿಶೇಷವಾಗಿ ಶತ್ರು ಡ್ರೋನ್‌ಗಳು, ರಾಡಾರ್ ವ್ಯವಸ್ಥೆಗಳು ಮತ್ತು ಉಡಾವಣಾ ಪ್ಯಾಡ್‌ಗಳಂತಹ ಬೆದರಿಕೆಗಳನ್ನು ಒಳಗೊಂಡಿರುವ ಭಯೋತ್ಪಾದನೆ ಮತ್ತು ಶೂಟ್–ಟು–ಕೊಲ್ ಕಾರ್ಯಾಚರಣೆಗಳಲ್ಲಿ ಹುಡುಕಾಟ ಮತ್ತು ನಾಶ ಕಾರ್ಯಾಚರಣೆಗಳಿಗೆ ನಿರ್ಣಾಯಕ ಪಾತ್ರ ವಹಿಸುತ್ತದೆ. ಪಾಕಿಸ್ತಾನದಲ್ಲಿನ ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಲು ಭಾರತದ ಆಯ್ಕೆಯ ಆಯುಧಗಳಾದ ಸ್ಕಾಲ್ ಕ್ರೂಸ್ ಕ್ಷಿಪಣಿಗಳು ಮತ್ತು ಹ್ಯಾಮರ್ ಬಾಂಬ್‌ಗಳ ಜೊತೆಗೆ, ಭಾರತೀಯ ಸೇನೆಯು ನಿಖರವಾದ ದಾಳಿಗಾಗಿ ಸ್ಥಳೀಯವಾಗಿ ನಿರ್ಮಿಸಲಾದ ಸೈ ಸ್ಟೀಕರ್ ಆತ್ಮಾಹುತಿ ಡ್ರೋನ್‌ಗಳನ್ನು ನಿಯೋಜಿಸಿದೆ ಎಂದು ಮೂಲಗಳು ತಿಳಿಸಿವೆ.

### ಮುಡಾ 14 ಸೈಟ್ ಹಂಚಿಕೆ ಪ್ರಕರಣ

# ಸ್ನೇಹಮಯಿ ಕೃಷ್ಣ ಅರ್ಜಿ ವಿಚಾರಣೆ ಮೇ 29ಕ್ಕೆ ಮುಂದೂಡಿಕೆ

**ಬೆಂಗಳೂರು, ಮೇ.8–** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿಯವರು ಕಾನೂನುಬಾಹಿರವಾಗಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ 14 ಸೈಟ್ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಪೊಲೀಸರ ಬಿ ರಿಪೋರ್ಟ್ ಪ್ರಶ್ನಿಸಿ ದೂರುದಾರ ಸ್ನೇಹಮಯಿ ಕೃಷ್ಣ ಸಲ್ಲಿಸಿರುವ ಅರ್ಜಿ ವಿಚಾರಣೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ನಲ್ಲಿ ನಡೆಯಿತು.



ಕೋರ್ಟ್ ಸೂಚನೆಯಂತೆ ಬುಧವಾರ ಅಂತಿಮ ತನಿಖಾ ವರದಿ ಸಲ್ಲಿಸಬೇಕಿದ್ದ ಲೋಕಾಯುಕ್ತ ಪೊಲೀಸರು ಕಾಲಾವಕಾಶ ಕೋರಿ ಮನವಿ ಸಲ್ಲಿಸಿದರು. ಕೋರ್ಟ್‌ಗೆ ಹಾಜರಾಗಿದ್ದ ಲೋಕಾಯುಕ್ತ ತನಿಖಾಧಿಕಾರಿ ಕೋರ್ಟ್‌ಗೆ ಮನವಿ ಸಲ್ಲಿಸಿ ಕೆಲವು ಅಧಿಕಾರಿಗಳ ವಿರುದ್ಧ ತನಿಖೆಗೆ ಭ್ರಷ್ಟಾಚಾರ ತಡೆ ಕಾಯ್ದೆಯ ಸೆ.17ಎ ಅಡಿ ಅನುಮತಿ ಕೇಳಿದರು. ಅನುಮತಿ ಬರಬೇಕಾಗಿರುವುದರಿಂದ ತನಿಖೆ ಪೂರ್ಣಗೊಳಿಸಲು ಮತ್ತಷ್ಟು ಕಾಲಾವಕಾಶ ಬೇಕೆಂದು ಕೋರ್ಟ್‌ಗೆ ಮನವಿ ಮಾಡಿದರು.

ಎರಡೂ ಕಡೆ ವಾದಮಂಡನೆ ಆಲಿಸಿದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು ಅಂತಿಮ ವರದಿ ಸಲ್ಲಿಕೆ ಬಳಿಕವೇ ಕಾಗ್ನಿಜೆನ್ಸ್ ಬಗ್ಗೆ ತೀರ್ಮಾನಿಸುವುದು ಸೂಕ್ತವೆಂದು ಪುನರುಚ್ಚರಿಸಿದರು. ಅಲ್ಲದೇ ತನಿಖಾಧಿಕಾರಿ ತನಿಖೆಯ ಪ್ರಗತಿ ಬಗ್ಗೆ ಪ್ರಮಾಣಪತ್ರ ಸಲ್ಲಿಸಬೇಕೆಂದು ಸೂಚಿಸಿ ವಿಚಾರಣೆಯನ್ನು ಮೇ.29ಕ್ಕೆ ಮುಂದೂಡಿದರು.

ಈ ಬಗ್ಗೆ ದಾಖಲೆಗಳನ್ನು ಮುಚ್ಚಿದ ಲಕೋಟೆಯಲ್ಲಿ ಲೋಕಾಯುಕ್ತ ಪರ ಎಸ್‌ಪಿಪಿ ವೆಂಕಟೇಶ್ ಅರಬಟ್ಟಿ ಕೋರ್ಟ್‌ಗೆ ಸಲ್ಲಿಸಿದರು. ಇದಕ್ಕೆ ದೂರುದಾರ ಸ್ನೇಹಮಯಿ ಕೃಷ್ಣ ಆಕ್ಷೇಪಿಸಿ, ಡಿ.ಬಿ.ನಟೇಶ್ ವಿರುದ್ಧ ಈಗಾಗಲೇ ಅನುಮತಿ ಪಡೆದಿದ್ದಾರೆ. ತನಿಖೆ ವಿಳಂಬಗೊಳಿಸಲು ಅರ್ಜಿ ಸಲ್ಲಿಸುತ್ತಿದ್ದಾರೆಂದು ಆಕ್ಷೇಪ ವ್ಯಕ್ತಪಡಿಸಿದರು.

ಕೋರ್ಟ್ ತಾನೇ ಸ್ವತಃ ಪ್ರಕರಣದ ಕಾಗ್ನಿಜೆನ್ಸ್ ಪಡೆಯ ಬೇಕೆಂದು ಮನವಿ ಮಾಡಿದರು. ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರ ಹೆಸರಿನಲ್ಲಿದ್ದ ಕೆಸರೆ ಗ್ರಾಮದ ಸರ್ವೆ ನಂಬರ್ 464ರಲ್ಲಿ 3.16 ಎಕರೆ ಜಮೀನನ್ನು ದೇವನೂರು ಬಡಾವಣೆ ನಿರ್ಮಾಣಕ್ಕೆ ಭೂಸ್ವಾಧೀನ ಮಾಡಿಕೊಳ್ಳಲಾಗಿತ್ತು. ಈ ಜಾಗವನ್ನು ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಗೆ ದಾನ ಪತ್ರದ ಮೂಲಕ ಅವರ ಸಹೋದರ ಕೊಟ್ಟಿದ್ದರು. ಇದು ಒಟ್ಟು 1,48,104 ಚದರ ಅಡಿ ಜಾಗ ಇತ್ತು. ಅದರ ಬದಲಿಗೆ ಮುಡಾ 2021ರಲ್ಲಿ ಪಾರ್ವತಿ ಅವರಿಗೆ ಮೈಸೂರಿನ ವಿಜಯನಗರ ಬಡಾವಣೆಯಲ್ಲಿ 38,284 ಚದರ ಅಡಿ ಜಾಗ ಅಂದರೆ 14 ನಿವೇಶನ ಕೊಟ್ಟಿದ್ದಾರೆ ಇದು ಚರ್ಚೆಗೆ ಕಾರಣವಾಗಿತ್ತು. ವಿಜಯ ನಗರ ಬಡಾವಣೆಯಲ್ಲಿ 14 ನಿವೇಶನ ಪತ್ನಿ ಪಾರ್ವತಿ ಅವರಿಗೆ ಮಂಜೂರು ಆಗಲು, ಸಿದ್ದರಾಮಯ್ಯ ಅವರು ಪ್ರಭಾವ ಬೀರಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು.

# ಸರ್ಕಾರಿ ಅಧಿಕಾರಿಗಳಿಗೆ ಬೆಳ್ಳಂಬೆಳಗ್ಗೆ ಐಟಿ ಶಾಕ್

**ಬೆಂಗಳೂರು, ಮೇ.8–** ಅಕ್ರಮವಾಗಿ ಆಸ್ತಿ ಗಳಿಸಿದ ಆರೋಪದ ಹಿನ್ನೆಲೆಯಲ್ಲಿ ಇಂದು ಬೆಳ್ಳಂ ಬೆಳಿಗ್ಗೆ ಲೋಕಾಯುಕ್ತ ಅಧಿಕಾರಿಗಳು ಕೋಲಾರ ದಾವಣಗೆರೆ ಸೇರಿದಂತೆ ಹಲವು ಕಡೆಗಳಲ್ಲಿ ಬೆಳ್ಳಂಬೆಳಗ್ಗೆ ದಾಳಿ ಮಾಡಿ ಸರ್ಕಾರಿ ಅಧಿಕಾರಿಗಳಿಗೆ ಶಾಕ್ ನೀಡಿದ್ದಾರೆ.

ಸರ್ವೇ ಸೂಪರ್‌ವೈಸರ್ ನಿವಾಸದ ಮೇಲೆ ದಾಳಿ–ಕೋಲಾರ ಜಿಲ್ಲೆಯ ಹಲವೆಡೆ ಇಂದು ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ನಿದ್ರೆಯಲ್ಲಿದ್ದ ಸರ್ಕಾರಿ ಅಧಿಕಾರಿಗಳಿಗೆ ಬೆಳ್ಳಂಬೆಳ್ಳಿಗ್ಗೆ ಲೋಕಾಯುಕ್ತ ಅಧಿಕಾರಿಗಳು ಶಾಕ್ ನೀಡಿದ್ದಾರೆ. ಕೋಲಾರದ ಸರ್ವೆ ಸೂಪರ್ವೈಸರ್ ಸುರೇಶ್ ಬಾಬು ಮನೆಯ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಸರ್ವೆ ಇಲಾಖೆ ಅಧಿಕಾರಿ ಸುರೇಶ್ ಬಾಬು ಸೇರಿದಂತೆ ಒಟ್ಟು 6 ಕಡೆಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ ಕೋಲಾರ ನಗರದ ಮನೆ, ಮಾಲೂರು ಪಟ್ಟಣದ ಮನೆ. ನಿಡಘಟ್ಟ ಗ್ರಾಮದ ಮನೆ ಕಚೇರಿಗಳು ಸೇರಿದಂತೆ ಒಟ್ಟು ಆರು ಕಡೆಗಳಲ್ಲಿ ಅಧಿಕಾರಿಗಳು ದಾಳಿ ಮಾಡಿ ಪರಿಶೀಲನೆ ನಡೆಸುತ್ತಿದ್ದಾರೆ. ಮೂರು ತಿಂಗಳ ಹಿಂದೆಯೂ ಸುರೇಶ್ ಬಾಬು ನಿವಾಸದ ಮೇಲೆ ಲೋಕಾಯುಕ್ತ ದಾಳಿ ನಡೆಸಿತ್ತು. ಹಲವು ಸ್ಥಳಗಳ ಮೇಲೆ ದಾಳಿ ನಡೆಸಿ ಮಾಹಿತಿ ಸಂಗ್ರಹಿಸಿದ್ದಾರೆ.

ಲೋಕಾಯುಕ್ತ ಎಸ್‌ಪಿ ಧನಂಜಯ ನೇತೃತ್ವದಲ್ಲಿ ದಾಳಿ ನಡೆದಿದೆ. ಅಕ್ರಮವಾಗಿ ಸರ್ಕಾರಿ ದಾಖಲೆ ತಿದ್ದಿ ಸರ್ಕಾರಿ ಭೂಮಿ ಕಬಳಿಕೆ ಮಾಡಿರುವ ಆರೋಪ ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಕೋಟ್ಯಾಂತರ ರೂಪಾಯಿ ಅಕ್ರಮ ಆಸ್ತಿಗಳಿಗೆ ಆರೋಪದ ಹಿನ್ನೆಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಸದ್ಯ ಲೋಕಾಯುಕ್ತ ಅಧಿಕಾರಿಗಳಿಂದ ದಾಖಲೆಗಳ ಪರಿಶೀಲನೆ ನಡೆಯುತ್ತಿದೆ. ಸಹಾಯಕ ಇಂಜಿನಿಯರ್ ನಿವಾಸದ ಮೇಲೆ ದಾಳಿ–ಇನ್ನು ದಾವಣಗೆರೆಯಲ್ಲಿ ಕೂಡ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ.

ಬಿ ರವಿ ಕಚೇರಿ ಹಾಗೂ ರವಿ ತಾಯಿಯ ನಿವಾಸದ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ ಬಿ ರವಿ ನೀರು ಸರಬರಾಜು ಇಲಾಖೆಯ ಸಹಾಯಕ ಇಂಜಿನಿಯರ್ ಆಗಿದ್ದು, ನಿಜಲಿಂಗಪ್ಪ ಬಡಾವಣೆಯ ಬಕೇಶ್ವರ ಶಾಲೆ ಬಳಿ ಇರುವ ಕಚೇರಿ ಹಾಗೂ ಶಿವ ಕುಮಾರ ಸ್ವಾಮಿ ಬಡಾವಣೆ ಯಲ್ಲಿರುವ ರವಿ ತಾಯಿಯ ಮನೆಯಲ್ಲಿ ಪರಿಶೀಲನೆ ನಡೆಸುತ್ತಿದ್ದಾರೆ.

# ಭಾರತೀಯ ಸೈನಿಕರ ಪರವಾಗಿ ಮಸೀದಿಗಳಲ್ಲಿ ಪ್ರಾರ್ಥನೆ: ಜಮೀರ್ ಅಹಮದ್

**ಬೆಂಗಳೂರು, ಮೇ.8–** ಪಹಲ್ಗಾಮ್ ದಾಳಿ ಹಿನ್ನೆಲೆಯಲ್ಲಿ ಆಪರೇಷನ್ ಸಿಂಧೂರ ಕಾರ್ಯಾ ಚರಣೆ ನಡೆಸಿ ದೇಶ ರಕ್ಷಣೆಯಲ್ಲಿ ತೊಡಗಿರುವ ಭಾರತೀಯ ಸೈನಿಕರ ಪರವಾಗಿ ಮಸೀದಿಗಳಲ್ಲಿ ಪ್ರಾರ್ಥನೆ ಸಲ್ಲಿಸಲಾಗುವುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದ್ದಾರೆ.

ವಕ್ಫ್ ಬೋರ್ಡ್ ವ್ಯಾಪ್ತಿಯ ಮಸೀದಿಗಳು ಸೇರಿದಂತೆ ರಾಜ್ಯದ ಎಲ್ಲ ಮಸೀದಿಗಳಲ್ಲಿ ದೇಶದ ಹೆಮ್ಮೆಯ ಸೈನಿಕರ ಶ್ರೇಯಸ್ಸಿಗಾಗಿ ಹಾಗೂ ಶಕ್ತಿ ತುಂಬಲು ಶುಕ್ರವಾರದ ವಿಶೇಷ ಪ್ರಾರ್ಥನೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ.

ಈ ಕುರಿತು ವಕ್ಫ್ ಬೋರ್ಡ್ ಮುಖ್ಯ ಕಾರ್ಯ ನಿರ್ವಹಾಧಿಕಾರಿಗೆ ಸಚಿವ ಜಮೀರ್ ಅಹಮದ್ ಖಾನ್ ಅವರು ಪತ್ರ ಬರೆದು ಸೂಚನೆ ನೀಡಿದ್ದಾರೆ. ಪಹಲ್ಗಾಮ್ ದಾಳಿಯಲ್ಲಿ ಅಮಾಯಕರ ಜೀವ ಪಡೆದ ಪಾಕಿಸ್ತಾನ ಉಗ್ರರ ಕೃತ್ಯಕ್ಕೆ ಪ್ರತೀಕಾರವಾಗಿ ಭಾರತೀಯ ಸೇನೆ 'ಆಪರೇಷನ್ ಸಿಂಧೂರ' ನಡೆಸಿ ತನ್ನ ಶಕ್ತಿ ಹಾಗೂ ಪರಾಕ್ರಮ ತೋರಿಸಿದೆ.




ಭಾರತೀಯ ಸೇನೆಯ ಕಾರ್ಯ ಶ್ಲಾಘನೀಯ.

ಉಗ್ರರಿಗೆ ಆಶ್ರಯ ನೀಡುವ ಪಾಕಿಸ್ತಾನಕ್ಕೆ ತಕ್ಕಪಾಠ. ನಮ್ಮ ತಂಟೆಗೆ ಬಂದರೆ ಉಗ್ರರಿಗೆ ಹಾಗೂ ಪಾಕಿಸ್ತಾನ ಕ್ಕೆ ಉಳಿಗಾಲ ಇಲ್ಲ ಎಂಬ ಸಂದೇಶ ರವಾನೆ ಯಾಗಿದೆ. 'ನಮ್ಮ ಸೇನೆ ನಮ್ಮ ಹೆಮ್ಮೆ' ಎಂದು ಹೇಳಿದ್ದಾರೆ. ಭಾರತದಲ್ಲಿ ಅಶಾಂತಿ ಸೃಷ್ಟಿಸುವ ಹಾಗೂ ಭಯೋತ್ಪಾದಕ ಕೃತ್ಯ ಎಸಗುವ ಉಗ್ರಗಾಮಿ ಸಂಘಟನೆಗಳ ಹುಟ್ಟಡಗಿಸುವ ಹೋರಾಟದಲ್ಲಿ ನಾವೆಲ್ಲರೂ ಕೇಂದ್ರ ಸರ್ಕಾರದ ಜತೆ ಇದ್ದೇವೆ ಎಂದು ಜಮೀರ್ ಅವರು ತಿಳಿಸಿದ್ದಾರೆ.

# ಬಿಎಂಟಿಸಿ ಬಸ್‌ನಿಲ್ದಾಣದ ಶೌಚಾಲಯಗಳಲ್ಲಿ: ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ಹಣ ವಸೂಲಿ ಉಪಲೋಕಾಯುಕ್ತರಿಂದ ತನಿಖೆ

**ಬೆಂಗಳೂರು, ಮೇ.8–**ಬೆಂಗಳೂರಿನ ಹೃದಯ ಭಾಗದಲ್ಲಿರುವ ಮೆಜೆಸ್ಟಿಕ್ನ ಬಿಎಂಟಿಸಿ ಬಸ್ ನಿಲ್ದಾಣದ ಶೌಚಾಲಯಗಳಲ್ಲಿ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ಹಣ ಪಡೆಯಲಾಗುತ್ತಿದೆ ಎಂಬ ದೂರುಗಳ ಹಿನ್ನೆಲೆಯಲ್ಲಿ ಉಪ ಲೋಕಾಯುಕ್ತರುಗಳಾದ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಮತ್ತು ನ್ಯಾಯಮೂರ್ತಿ ಬಿ.ವೀರಪ್ಪ ಅವರು ಗುರುವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಆಗುತ್ತಿರುವ ಮೋಸದ ಬಗ್ಗೆ ತನಿಖೆ ನಡೆಸುವಂತೆ ಆದೇಶಿಸಿದ್ದಾರೆ.ದಿನನಿತ್ಯ ಸಾವಿರಾರು ಪ್ರಯಾಣಿಕರು ಆಗಮಿಸುವ ಈ ಬಸ್ ನಿಲ್ದಾಣದಲ್ಲಿನ ಸ್ವಚ್ಛತೆ ಕಾಪಾಡುವ ಉದ್ದೇಶದಿಂದ ನಿರ್ಮಿಸಲಾದ ಶೌಚಾಲಯಗಳಲ್ಲಿ ಅಧಿಕ ಹಣ ವಸೂಲಿ ಮಾಡುತ್ತಿರುವುದು ಉಪಲೋಕಾಯುಕ್ತ ಪರಿಶೀಲನೆ ವೇಳೆ ಕಂಡುಬಂತು.



ತಕ್ಷಣ ಸೂಕ್ತ ತನಿಖೆ ನಡೆಸುವಂತೆ ಅಧಿಕಾರಿಗಳಿಗೆ ಆದೇಶಿಸಿದ್ದಾರೆ.

ಶೌಚಾಲಯಗಳಲ್ಲಿ ಸ್ವಚ್ಛತೆ ಕಾಪಾಡಬೇಕು ಮತ್ತು ನಿಗದಿಪಡಿಸಿದ ದರಕ್ಕಿಂತ ಹೆಚ್ಚು ಹಣ ಪಡೆಯಬಾರದು ಎಂದು ಶೌಚಾಲಯದ ಮೇಲ್ವಿಚಾರಕರಿಗೆ ಸೂಚನೆ ನೀಡಿದರು.

ನಂತರ, ಬಸ್ ನಿಲ್ದಾಣದಲ್ಲಿರುವ ನಿರ್ಭಯ ಕೇಂದ್ರ ಸಖಿ ಒನ್ ಸ್ಟಾಪ್ ಸೆಂಟರ್‌ಗೆ ಭೇಟಿ ನೀಡಿ ಮಹಿಳೆಯರು ದಾಖಲಿಸಿರುವ ದೂರುಗಳ ಬಗ್ಗೆ ಮಾಹಿತಿ ಪಡೆದರು.




ಬೆಂಗಳೂರಿನ ಕೆಎಸ್‌ಆರ್ ರೈಲು ನಿಲ್ದಾಣದಲ್ಲಿ ಗುರುವಾರ ಭದ್ರತೆ ಹೆಚ್ಚಿಸಲಾಗಿರುವ ಕುರಿತು ಅಣಕು ಪ್ರದರ್ಶನ.

### ರಾಯಚೂರು ಜಿಲ್ಲೆಯ ಕಲ್ಲೂರ-ಶಾಖಾಪುರ ಗ್ರಾಮದವರೆಗೆ ರಸ್ತೆ

## ಕಲ್ಯಾಣ ಪಥ ರಸ್ತೆ ಕಾಮಗಾರಿಗೆ ಸಚಿವ ಬೋಸರಾಜು, ಶಾಸಕ ಹಂಪಯ್ಯ ನಾಯಕ ಚಾಲನೆ

**ರಾಯಚೂರು, ಮೇ.8–** ಗ್ರಾಮೀಣ ಪ್ರದೇಶಗಳು ಅಭಿವೃದ್ಧಿ ಆಗಬೇಕಾದರೆ ಉತ್ತಮ ರಸ್ತೆಗಳು ಬೇಕು. ರೈತಾಪಿ ವರ್ಗ ಹಾಗೂ ಸಾರ್ವಜನಿಕರು ಹೊಲಗದ್ದೆಗಳಿಗೆ ತೆರಳಲು ಬಹಳಷ್ಟು ಅನುಕೂಲವಾಗಲೆಂದು ರಸ್ತೆಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಹಂತ ಹಂತವಾಗಿ ಇನ್ನು ಉಳಿದ ರಸ್ತೆಗಳ ಅಭಿವೃದ್ಧಿಗೆ ಪ್ರಯತ್ನಿಸಲಾಗುವುದು ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್.ಎಸ್.ಬೋಸರಾಜು ಅವರು ತಿಳಿಸಿದರು.



ಜಿಲ್ಲೆಯ ಕಲ್ಲೂರನಿಂದ ಶಾಖಾಪೂರ ಗ್ರಾಮದವರಿಗೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಲ್ಯಾಣ ಪಥ ಯೋಜನೆ ಅಡಿಯಲ್ಲಿ 16 ಕೋಟಿ 5 ಲಕ್ಷ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಹಾಗೂ ಸಿರವಾರ ರಾಯಚೂರು ರಾಜ್ಯ ಹೆದ್ದಾರಿಯಿಂದ ಗಣದಿನ್ನಿ ಗ್ರಾಮದವರೆಗೆ 1 ಕೋಟಿ 62 ಲಕ್ಷ ವೆಚ್ಚದ ರಸ್ತೆಗಳಿಗೆ ಸಚಿವ ಎನ್ ಎಸ್ ಬೋಸರಾಜು ಶಾಸಕ ಹಂಪಯ್ಯ ನಾಯಕ ಅವರು ಭೂಮಿ ಪೂಜೆ ನೆರವೇರಿಸಿದರು.

ಗ್ರಾಮೀಣ ಪ್ರದೇಶದ ಅಭಿವೃದ್ಧಿಗಾಗಿ ನಮ್ಮ ಸರ್ಕಾರ ದಿಟ್ಟ ಕ್ರಮ ಕೈಗೊಂಡಿದ್ದು ರಸ್ತೆ ಸುಧಾರಣೆಯಂಥ ಕಾಮಗಾರಿಗಳಿಗೆ ಪ್ರಥಮ ಆದ್ಯತೆ ನೀಡಿ, ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ. ಈ ರಸ್ತೆಗಳ ಅಭಿವೃದ್ಧಿಯಿಂದ ರೈತರು ಬೆಳೆದ ಫಸಲುಗಳನ್ನು ಮಾರುಕಟ್ಟೆಗೆ ತೆಗೆದುಕೊಂಡು ಹೋಗಲು ಅನುಕೂಲವಾಗಲಿದೆ.

ರಸ್ತೆ ನಿರ್ಮಾಣ ಕಾಮಗಾರಿಗೆ ರೈತರು ಸಾರ್ವಜನಿಕರು ಸಹಕರಿಸಿ ಅಭಿವೃದ್ಧಿಗೆ ಕೈಜೋಡಿಸಬೇಕೆಂದು ತಿಳಿಸಿದರು.

ಈ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಅಧಿಕಾರಿಗಳು ಹಾಗೂ ಗುತ್ತೇದಾರರು ತ್ವರಿತಗತಿಯಲ್ಲಿ ಉತ್ತಮ ಗುಣಮಟ್ಟದೊಂದಿಗೆ ನಿರ್ವಹಿಸಬೇಕು ಇಲ್ಲದಿದ್ದರೆ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

### ಭದ್ರಾ ಡ್ಯಾಂ ಅಚ್ಚುಕಟ್ಟು ಭಾಗದ ರೈತರಿಗೆ ಸಿಹಿಸುದ್ದಿ

## ಎಡದಂಡೆ–ಬಲದಂಡೆ ನಾಲೆಯಲ್ಲಿ ನೀರು ಹರಿವು ಮುಂದುವರಿಕೆ

**ಶಿವಮೊಗ್ಗ, ಮೇ.8–** ಭದ್ರಾ ಡ್ಯಾಂ ಅಚ್ಚುಕಟ್ಟು ಭಾಗದ ರೈತರಿಗೆ ಸಿಹಿಸುದ್ದಿಯೊಂದಿದೆ. ರೈತರ ಬೇಡಿಕೆಯಂತೆ ಭದ್ರಾ ಜಲಾಶಯದ ಎಡದಂಡೆ ಮತ್ತು ಬಲದಂಡೆ ನಾಲೆಯಲ್ಲಿ ನೀರು ಹರಿಸುವುದನ್ನು ಮುಂದುವರಿಸಲಾಗುವುದು ಎಂದು ಮಾಹಿತಿ ನೀಡಲಾಗಿದೆ.



ಜನರ ಹಿತದೃಷ್ಟಿಯಿಂದ ಕಾಲುವೆ ಪಾತ್ರಗಳಲ್ಲಿ ಜನರು ತಿರುಗಾಡುವುದು, ದನಕರುಗಳನ್ನು ತೊಳೆಯುವುದು ಮತ್ತು ದೈನಂದಿನ ಚಟುವಟಿಕೆ ಮಾಡುವುದನ್ನು ನಿಷೇಧಿಸಲಾಗಿದ್ದು, ಭದ್ರಾ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಬರುವ ರೈತರು ಸಹಕಾರ ನೀಡಬೇಕು ಎಂದು ಮನವಿ ಮಾಡಲಾಗಿದೆ. ಆರ್. ರವಿಚಂದ್ರ ಸದಸ್ಯ ಕಾರ್ಯದರ್ಶಿಗಳು, ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿ ಈ ಕುರಿತು ಪ್ರಕಟಣೆ ಮೂಲಕ ಮಾಹಿತಿ ನೀಡಿದ್ದಾರೆ. ಭದ್ರಾ ಅಚ್ಚುಕಟ್ಟು ವ್ಯಾಪ್ತಿಯ ಬೆಳೆಗಳು ಕಟಾವಿಗೆ ಬರಲು ಇನ್ನೂ ಹೆಚ್ಚಿನ ಕಾಲಾವಕಾಶ ಬೇಕಾಗಿರುವುದೆ. ರೈತರ ಬೇಡಿಕೆಯಂತೆ ಭದ್ರಾ ಜಲಾಶಯದ ಎಡದಂಡೆ ನಾಲೆಯಲ್ಲಿ ಮೇ 10ರ ತನಕ ಮತ್ತು ಬಲದಂಡೆ ನಾಲೆಯಲ್ಲಿ ಮೇ 18ರ ತನಕ ನೀರು ಹರಿಸುವುದನ್ನು ಮುಂದುವರೆಸಲಾಗುವುದು ಎಂದು ಹೇಳಿದ್ದಾರೆ.

**ಹೂಳು ತೆಗೆಯಿರಿ:** ಭದ್ರಾ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ನಾಲೆಗಳಲ್ಲಿ ಹೂಳು ತೆಗೆಸುವಂತೆ ಸಹ ಮನವಿ ಮಾಡಲಾಗಿದೆ. ಭದ್ರಾ ಜಲಾಶಯದಿಂದ ಕಾಲುವೆ ಹಾಗೂ ನಾಲೆಗಳಿಗೆ ನೀರು ಹರಿಸುವುವಾಗ ನಾಲೆ ಹಾಗೂ ಕಾಲುವೆಗಳಲ್ಲಿ ಸಾಕಷ್ಟು ಹೂಳು ತುಂಬಿಕೊಂಡು ಅಚ್ಚುಕಟ್ಟು ಭಾಗದ ಕೊನೆಯ ಭಾಗದ ರೈತರಿಗೆ ನೀರು ತಲುಪಲು ತೊಂದರೆ ಆಗುತ್ತದೆ. ಆದ್ದರಿಂದ ಸೂಕ್ತ ರೀತಿಯಲ್ಲಿ ಬೆಳೆ ಬೆಳೆಯಲು ಸಮಸ್ಯೆಯಾಗುತ್ತದೆ. ಕೇಂದ್ರ ಸರ್ಕಾರದ ಉದ್ಯೋಗ ಖಾತ್ರಿ ಸೇರಿದಂತೆ ವಿವಿಧ ಯೋಜನೆಯಡಿ ಹೂಳು ತೆಗೆಯುವ ಕಾಮಗಾರಿ ಕೈಗೆತ್ತಿಕೊಂಡು ನಾಲೆ ಹಾಗೂ ಕಾಲುವೆಗಳಲ್ಲಿ ತುಂಬಿಕೊಂಡಿರುವ ಹೂಳು ತೆಗೆಸುವಂತೆಯೂ ಮನವಿ ಮಾಡಲಾಗುತ್ತಿದೆ. ಭದ್ರಾ ಜಲಾಶಯದ ಕಾಲುವೆ ಮೂಲಕ ಬಿಡುವ ನೀರು ಕೊನೆ ಭಾಗದ ಅಚ್ಚುಕಟ್ಟು ದಾರರಿಗೂ ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಎಂದು ದಾವಣಗೆರೆ ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಜಿ. ಎಂ. ಭರವಸೆ ನೀಡಿದ್ದರು.

**ಉಂಅಥೋರಿಜ್ಡ್ ಪಂಪ್ಸ್:** ಕಾಲುವೆಗಳಿಗೆ ಅನಧಿಕೃತವಾಗಿ ಪಂಪ್ ಅಳವಡಿಸಿ ನೀರೆತ್ತಲಾಗುತ್ತಿದೆ, ಇದರಿಂದ ಕೊನೆ ಭಾಗದ ರೈತರಿಗೆ ನೀರು ಸಿಗುತ್ತಿಲ್ಲ. ಅನಧಿಕೃತ ಪಂಪ್ಗಳನ್ನು ತೆರವು ಮಾಡಿ ವಿದ್ಯುತ್ ಸಂಪರ್ಕವನ್ನು ಕಡಿತ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಭರವಸೆ ನೀಡಿದ್ದರು. ಹರಿಹರ ಶಾಸಕ, ಬಿ.ಪಿ. ಹರೀಶ್, "ಜಲಾಶಯದ ದುರಸ್ಥಿ ಮಾಡಿಸಿ, ಭದ್ರಾ ಇಂಜಿನಿಯರ್‌ಗಳು ವೈಜ್ಞಾನಿಕ ತಂತ್ರಜ್ಞಾನ ಬಳಸಿ ನೀರು ಪೋಲಾಗದಂತೆ ಕ್ರಮ ತೆಗೆದುಕೊಳ್ಳಬೇಕು. ಭದ್ರಾ ನಾಲೆ ಅಚ್ಚುಕಟ್ಟು ಪ್ರದೇಶದ ಬಹುತೇಕ ಭಾಗದಲ್ಲಿ ನೀರಾವರಿ ಕಟ್ಟಡ ಹಾಗೂ ನಾಲೆಯ ಗೇಟ್ಗಳು ಹಾಳಾಗಿವೆ. ಆದ್ದರಿಂದ ನೀರು ಹೆಚ್ಚಿನ ಪ್ರಮಾಣದಲ್ಲಿ ಪೋಲಾಗುತ್ತಿದೆ" ಎಂದು ಜಿಲ್ಲಾಧಿಕಾರಿಗಳ ಗಮನ ಸೆಳೆದಿದ್ದರು.

ಭದ್ರಾ ಜಲಾಶಯದಿಂದ ನೀರು ಹರಿಸಿ 50 ದಿನ ಕಳೆದರೂ ಸಹ ಕೊನೆ ಭಾಗದ ಅಚ್ಚುಕಟ್ಟು ಪ್ರದೇಶಗಳಾದ ಮಲೇಬೆನ್ನೂರು, ಬಸವಪಟ್ಟಣದ ರೈತರ ಜಮೀನುಗಳಿಗೆ ನೀರು ಇನ್ನೂ ತಲುಪಿಲ್ಲ. ಭದ್ರಾ ಜಲಾಶಯದ ನೀರು ಜಿಲ್ಲೆಯ ಜೀವನಾಡಿಯಾಗಿದ್ದು, ಈ ನೀರು ನಂಬಿ ಲಕ್ಷಾಂತರ ಎಕರೆ ಭೂಮಿಯಲ್ಲಿ ರೈತರು ಬೆಳೆ ಬೆಳೆಯುತ್ತಿದ್ದಾರೆ. ಆದ್ದರಿಂದ ನೀರು ತಲುಪಿಸಲು ಕ್ರಮ ಕೈಗೊಳ್ಳಬೇಕು ಎಂದು ರೈತರು ಒತ್ತಾಯಿಸಿದ್ದರು. ಬೇಸಿಗೆ ಯಾಗಿರುವುದರಿಂದ ಗೇಟ್‌ಗಳಲ್ಲಿ ನೀರಿನ ಸೋರಿಕೆ ಮತ್ತು ಕಾಲುವೆ ದುರಸ್ಥಿಗೆ ಅಗತ್ಯ ಅನುದಾನ ಬಿಡುಗಡೆಗೆ ಸರ್ಕಾರಕ್ಕೆ ಕಳುಹಿಸಲಾ ಗುತ್ತದೆ ಎಂದು ಜಿಲ್ಲಾಧಿಕಾರಿ ಹೇಳಿದ್ದರು.

## ಚರಂಡಿ, ಯುಜಿಡಿ ನೀರಿನಿಂದಲೇ ತರಕಾರಿ ಬೆಳೆ: ಕಣ್ಣು ಮುಚ್ಚಿ ಕುಳಿತ ಆಡಳಿತ– ಸಾರ್ವಜನಿಕರಿಂದ ಆಕ್ರೋಶ

**ಬಳ್ಳಾರಿ ಮೇ.8–** ಬಳ್ಳಾರಿ ನಗರದ ಕೌಲ್ ಬಜಾರ್, ಎಪಿಎಂಸಿ ಹತ್ತಿರ ಮುಸ್ಲಿಂರ ಸ್ಮಶಾನ ಪಕ್ಕದಲ್ಲಿ ಸರ್ಕಾರದ ಮೂರು ನಾಲ್ಕು ಎಕರೆ ಪ್ರದೇಶದಲ್ಲಿ ಆಹಾರ ಪದಾರ್ಥಗಳಾಗಿರುವ ಪಲ್ಲೆಗಳು ರಾಜಗಿರಿ,ಮೆಂತೆ, ಪನಕನಪಲ್ಲೆ, ಕೋತುಂಬ್ರಿ, ಪುಂಡೆಪಲ್ಲೆ ಮುಂತಾದ ಪಲ್ಲೇಗಳನ್ನು ಕೌಲ್ ಬಜಾರ್ ಮತ್ತು ಮುಂತಾದ ಭಾಗಗಳಿಂದ ಹರಿದು ಬರುವ ಚರಂಡಿ,ಯುಜಿಡಿ ನೀರನ್ನು ಬಳಕೆ ಮಾಡಿ ಕಾಯಿಪಲ್ಲೆಗಳು ಹಲವಾರು ವರ್ಷಗಳಿಂದ ಈ ಪ್ರದೇಶದಲ್ಲಿ ಯುಜಿಡಿ ಚರಂಡಿ ನೀರುದಿಂದಲೇ ತರಕಾರಿ ಬೆಳೆಯುತ್ತಿದ್ದಾರೆ.



ಚರಂಡಿ ನೀರಿಗೆ ಅಡ್ಡ ಹಾಕಿ ಸರ್ಕಾರದ ಭೂಮಿಯಲ್ಲಿ ಒಂದು ನೀರಿನ ಹೊಂಡ ತೆಗೆದು ಆ ನೀರನ್ನು ಅಲ್ಲಿ ಶೇಖರಣೆ ಮಾಡಿಕೊಂಡು ಆಗಲೀಜ್ ನೀರಿನಿಂದಲೇ ತರಕಾರಿ ಬೆಳೆಯಲು ಬಳಕೆ ಮಾಡುತ್ತಿದ್ದಾರೆ. ಚರಂಡಿ ನೀರಿನಿಂದ ಬೆಳೆದ ಪಲ್ಲೆಗಳನ್ನು ಸ್ವಚ್ಛವಾಗಿ ಅದೇ ಗಲೀಜು ನೀರಿನಿಂದ ತೊಳೆದು ಮಾರುಕಟ್ಟೆಗೆ ಕಳುಹಿಸುತ್ತಿರುವುದು ಬಯಲಾಗಿದೆ. ಪಲ್ಯಬೆಳೆಯುವ ಪ್ರದೇಶ ಸುತ್ತಮುತ್ತ ಅರ್ಧ ಕಿಲೋಮೀಟರ್ ವರೆಗೆ ಯುಜಿಡಿ ಚರಂಡಿ ನೀರಿನ ದುರ್ವಾಸನೆ ಬರುತ್ತಿರು ತ್ತದೆ. ಗಲೀಜ್ ನೀರಿನಿಂದ ಅಲ್ಲೇ ಬೆಳೆಯುತ್ತಿರುವುದು ಆರೋಗ್ಯ ಅಧಿಕಾರಿಗಳಿಗೆ ಆಗಲಿ ಜಿಲ್ಲಾಧಿಕಾರಿಗಳಿಗಾಗಲಿ ಗಮನವಿಲ್ಲದೆ ಇರಬಹುದೆ ಎಂದು ಸಾರ್ವಜನಿಕರು ಆಗ್ರಹವನ್ನು ವ್ಯಕ್ತ ಪಡಿಸುತಿದ್ದಾರೆ.

ಈಗಾಗಲೇ ಹಲವಾರು ಕಾಯಿಲೆಗಳಿಂದ ಜನರು ಬಳಲುತ್ತಿರುವುದು ದವಾಖಾನೆಗಳ ಸುತ್ತು ಓಡಾಡುತ್ತಿರುವುದು ತಿಳಿದು ಸಂಗತಿ ಆಗಿದೆ. ಮಹಾನಗರ ಪಾಲಿಕೆ ಕೂಡ ಇತ್ತ ಗಮನ ಹರಿಸಲಿಲ್ಲ ಎನ್ನುವುದು ಕೇಳಿ ಬಂದಿದೆ, ಇಂಥ ಗಲೀಜು ನೀರಿನಿಂದ ಬೆಳೆದ ತರಕಾರಿಯನ್ನು ತಿಂದರೆ ಜನರ ಪಾಡು ಏನನ್ನುವುದು ಸಾರ್ವಜನಿಕರ ಪ್ರಶ್ನೆಯಾಗಿದೆ. ಗುರವಾರ ಗಲೀಜು ನೀರಿನಿಂದ ಬೆಳೆಯುತ್ತಿರುವ ಪ್ರದೇಶಕ್ಕೆ ನಮ್ಮ ವರದಿಗಾರರು ಭೇಟಿ ನೀಡಿದ್ದರು.

ಈ ಸಂದರ್ಭದಲ್ಲಿ ಅಲ್ಲಿ ಪಲ್ಲೆ ಬೆಳೆಯುತ್ತಿರುವ ಅವರನ್ನು ಕೇಳಿದರೆ ಯುಜಿಡಿ,ಚರಂಡಿ ಗಲೀಜು ನೀರಿನಿಂದಲೇ ಪಲ್ಲೆ ಬೆಳಿತಾ ಇದ್ದೇವೆ. ನಮಗೆ ಮತ್ತೊಂದು ಮಾರ್ಗ ಇಲ್ಲ ಅಂದರು. ಆದರೆ ಆ ನೀರನ್ನು ಬಾಯಲ್ಲಿ ಹಾಕಿಕೊಳ್ಳಲು ಸಾಧ್ಯವೇ ಎಂದು ವರದಿಗಾರರು ಪ್ರಶ್ನೆ ಮಾಡಿದರೆ "ಅದು ಹೇಗೆ ಸಾಧ್ಯ ಸರ್ ಯುಜಿಡಿ, ಚರಂಡಿ ನೀರು ಕುಡಿಯಲು ಸಾಧ್ಯವಿಲ್ಲ ಎಂದು ಮುಖವನ್ನು ಮುಚ್ಚಿಟ್ಟುಕೊಂಡರು.

ಅದೇ ಪ್ರದೇಶದ ಒಬ್ಬ ಮಹಿಳೆಯನ್ನು ಕೇಳಿದರೆ ನಾವು "ಈ ತರಕಾರಿ ಪಲ್ಲೆಗಳನ್ನು ತಿನ್ನೋದಿಲ್ಲ ನೋಡಿ ನೋಡಿ ಹೇಗೆ ತಿನ್ನುವುದು ಇದರಲ್ಲಿ ಕೌಲ್ ಬಜಾರ್ ಬಾಗದಿಂದ, ಕಸಾಯದ ತ್ಯಾಜ್ಯ ವಸ್ತುಗಳು ಮತ್ತು ಜನರ ಶೌಚ,ಮೂತ್ರ ಮುಂತಾದ ವಿಸರ್ಜನಾ ಪದಾರ್ಥಗಳು ಈ ನೀರಿನಲ್ಲಿ ಬರುತ್ತವೆ ಈ ನೀರಿನಿಂದಲೇ ಪಲ್ಲೆ ಬೆಳೆಸುತ್ತಾರೆ ನಾವು ಅದನ್ನು ತಿನ್ನೋದಿಲ್ಲ ಆರೋಗ್ಯಕ್ಕೆ ಒಳ್ಳೆಯದಲ್ಲ ಎಂದು ಔಪಚಾರಿಕವಾಗಿ ಮಾತನಾಡಿದ್ದು ಕೂಡ ಬಹಿರಂಗಗೊಂಡಿದೆ.

ಸ್ವಚ್ಛ ಭಾರತ್ ಅನ್ನುವ ಪದ ಕೇವಲ ಗೋಡೆಗೆಗಳಿಗೆ ಮಾತ್ರವೇ ಸೀಮಿತವಾಗಿದೆ. ಬಳ್ಳಾರಿಯಲ್ಲಿ ಸಾಕಷ್ಟು ಗಣಿ ಪ್ರದೇಶದ ಅನುದಾನ ಇದ್ದು ಬಹುದೊಡ್ಡ ಶ್ರೀಮಂತ ರಾಜಕಾರಣಿಗಳಿದ್ದು ಜನರಿಗೆ ಆರೋಗ್ಯದ ಹಿತಾಸಕ್ತಿಯಿಂದ ಸ್ವಚ್ಛವಾದ ತರಕಾರಿ ಬೆಳೆಸಲು ನೀಡಲು ಪ್ರಯತ್ನ ಮಾಡಿಲ್ಲವೆಂದರೆ ಇದು ಒಂದು ರೀತಿಯಲ್ಲಿ ನಾಚಿಕೆಗೇಡಿನ ಸಂಗತಿಯಾಗಿದೆ.

ಕನಿಷ್ಠ ಜಿಲ್ಲಾ ಆಡಳಿತ, ಆರೋಗ್ಯ ಅಧಿಕಾರಿಗಳಾಗಲಿ ಕಂದಾಯ ಇಲಾಖೆ ಅಧಿಕಾರಿಗಳಾಗಲಿ ಇದನ್ನು ಪರಿಶೀಲನೆ ಮಾಡಿ ಗಲೀಜು ನೀರಿನಿಂದ ತರಕಾರಿ ಬೆಳೆಯುವುದು ಎಷ್ಟು ಸೂಕ್ತ ಇದರಿಂದ ಆರೋಗ್ಯದ ಮೇಲೆ ಎಷ್ಟು ಪರಿಣಾಮ ಬೀಳಲಿದೆ ಎನ್ನುವುದು ಕಣ್ಣಿನಿಂದ ನೋಡಿದ ಮಹಾನುಭಾವರು ಇಲ್ಲದಂತಾಗಿದೆ. ಈಗಲಾದರೂ ಜಿಲ್ಲಾಡಳಿತ ಕಣ್ಣು ತೆಗೆದು ನೋಡಲಿದಿಯಾ.. ಅಥವಾ ಕಣ್ಣು ಮುಚ್ಚಿಕೊಂಡು ಕುಳಿತು ಕೊಳ್ಳಲಿದೆಯಾ ಎನ್ನುವುದು ಕಾದು ನೋಡಬೇಕಾಗಿದೆ.

## ಓಲ ಇ.ವಿ ವಾಹನ ಶೋ ರೂಮ್‌ಗಳ ಮೇಲೆ ಆರ್‌ಟಿಓ ಅಧಿಕಾರಿಗಳ ದಾಳಿ

**ಬಳ್ಳಾರಿ, ಮೇ.8–** ಓಲ ಎಲೆಕ್ಟ್ರಾನಿಕ್ ವೆಹಿಕಲ್ ಶೋರೂಮ್‌ಗಳ ಮೇಲೆ ಬಳ್ಳಾರಿಯ ಸಾರಿಗೆ ಆರ್.ಟಿ.ಓ. ಅಧಿಕಾರಿಗಳಾಗಿರುವ ಶ್ರೀನಿವಾಸಗಿರಿ ಮತ್ತು ಇನ್ಸ್ಪೆಕ್ಟರ್‌ಗಳು ಒಂದೇ ದಿನ ಎರಡು ದಾಳಿ ನಡೆಸಿ ಶೋರೂಮ್‌ನ ಕಾಗದಪತ್ರಗಳು ಪರಿಶೀಲನೆ ಮಾಡಿದ್ದಾರೆ ಎಂದು ಸಾರ್ವಜನಿಕ ವಲಯದಲ್ಲಿ ಕೇಳಿ ಬಂದಿದೆ.




ಈ ಹಿಂದೆ ಓಲ ವಾಹನಗಳ ಕಂಪನಿ ಗ್ರಾಹಕರಿಗೆ ವಾಹನ ಖರೀದಿ ಮಾಡಿದ ಮೇಲೆ ಸೂಕ್ತ ಸಮಯದಲ್ಲಿ ನಂಬರ್ ಪ್ಲೇಟ್ ವಿತರಣೆ ಮಾಡಿದೆ ವಾಹನಗಳನ್ನು ಮಾಲೀಕರು ಗೆ ನೀಡಿ ತೊಂದರೆ ಮಾಡುತ್ತಿರುವ ಘಟನೆ ಬೆಳಕಿಗೆ ಬಂದಿತ್ತು. ಬಳ್ಳಾರಿಯಲ್ಲಿ ಒಬ್ಬ ಮಾಲೀಕರುಗೆ ಕೆ.ಎ.34 ಅನ್ನುವ ರಿಜಿಸ್ಟ್ರೇಷನ್ ನಂಬರ್ ಕೊಡದೆ ರಾಮನಗರ ರಿಜಿಸ್ಟ್ರೇಷನ್ ನಂಬರು ಕೊಡಲು ಮುಂದಾಗಿದ್ದರು.

ಗಾಡಿ ಖರೀದಿ ಮಾಡಿದ ಮಾಲೀಕರು ಬಳ್ಳಾರಿಯ ಮೂಲತಃ ದಾಖಲೆಗಳನ್ನು ನೀಡಿದ್ದರು, ಆದರೆ ಒಂದು ತಿಂಗಳು ಕಳೆದರೂ ಗಾಡಿ ಮಾಲೀಕನಿಗೆ ಓಲ ಕಂಪನಿಯಿಂದ ಬಳ್ಳಾರಿಯ ರಿಜಿಸ್ಟ್ರೇಷನ್ ನಂಬರ್ ಕೊಡಲೇ ಇಲ್ಲ ಮಾಲೀಕರು ಶೋ ರೂಮ್ಗೆ ಸುತ್ತಾಡಿ ಸುಸ್ತಾದರು. ಈ ವಿಷಯ ಸುದ್ದಿ ಪ್ರಚಾರವಾಗಿ ಅಧಿಕಾರಿಗಳ ಗಮನಕ್ಕೆ ಬರಲಾಗಿತ್ತು, ಈ ಹಿನ್ನೆಲೆ ಸಾರಿಗೆ ಅಧಿಕಾರಿಗಳಾಗಿರುವ ಶ್ರೀನಿವಾಸ್ ಗಿರಿ ಇನ್ಸ್ಪೆಕ್ಟರ್‌ಗಳು ಒಂದೇ ದಿನ ಶೋರೂಮ್‌ಗಳ ಮೇಲೆ ದಾಳಿ ನಡೆಸಿ ನೋಟಿಸ್ ನೀಡಿದ್ದಾರೆ ಎನ್ನುವದು ತಿಳಿದು ಬಂದಿದೆ.

ಆದರೆ ಈವರೆಗೆ ಯಾವುದೇ ಕ್ರಮವನ್ನು ತೆಗೆದುಕೊಳ್ಳದೇ, ದಾಳಿಯ ಮಾಹಿತಿಯನ್ನು ನೀಡದೆ ರಹಸ್ಯವಾಗಿ ಸಾರಿಗೆ ಅಧಿಕಾರಿಗಳು ಎಲ್ಲವು ಮುಚ್ಚಿಟ್ಟಿದ್ದಾರೆ ಎಂದು ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತದೆ. ಈ ದಾಳಿ ಕೆಲ ದಿನಗಳ ಹಿಂದೆ ನಡೆದಿದೆ ಎಂದು ಬಲ್ಲ ಮೂಲಗಳ ಮಾಹಿತಿಯಾಗಿದೆ.ಆದರೆ ಅಧಿಕಾರಿಗಳು ಮಾತ್ರ ಯಾವುದೇ ಮಾಹಿತಿ ನೀಡುತ್ತಾ ಇಲ್ಲ.!! ಬಳ್ಳಾರಿ ಸಾರಿಗೆ ಇಲಾಖೆ ಮೇಲೆ ತುಂಬಾ ದೂರಗಳು ಬಂದಿದ್ದಾವೆ ಎಂದು ಈ ಹಿಂದೆ ಬಳ್ಳಾರಿಯ ಶಾಸಕರು ನಾರಾ ಭರತ್ ರೆಡ್ಡಿ ಅವರು ಕಚೇರಿ ವೀಕ್ಷಣೆ ಮಾಡಿದರು ಸಾರಿಗೆ ಇಲಾಖೆಯ ಕರ್ತವ್ಯದ ಲೋಪದೋಷಗಳು ಹತ್ತಿರದಿಂದ ನೋಡಿದ ಶಾಸಕರು ತುಂಬಾ ಆಕ್ರೋಶ ವ್ಯಕ್ತಪಡಿಸಿದ್ದರು.

ಅದು ನಡೆದ ಕೆಲವೇ ದಿನಗಳಿಗೆ ರಾಜ್ಯ ಉಪ ಲೋಕಾಯುಕ್ತರು ಬಿ ವೀರಪ್ಪ ಅವರು, ಕೂಡ ಆರ್ ಟಿ ಓ ಸಾರಿಗೆ ಇಲಾಖೆಯನ್ನು ಪರಿಶೀಲನೆ ಮಾಡಿದ್ದರು. ಈ ರಾಜ್ಯದಲ್ಲಿ ಎಲ್ಲಿ ಕಾಣದೆ ಇರುವ ಭ್ರಷ್ಟಾಚಾರ,ಅಕ್ರಮಗಳು ಬಳ್ಳಾರಿ ಸಾರಿಗೆ ಇಲಾಖೆಯಲ್ಲಿ ನಡೆದಿದೆ ಎನ್ನುವುದು ಅವರಿಗೆ ತಿಳಿದುಬಂದಿತ್ತು. ಸುಮೋಟ್ ಪ್ರಕರಣ ದಾಖಲಿಸಿಕೊಂಡು ವಿಚಾರಣೆಯನ್ನು ಕೂಡ ಆರಂಭ ಮಾಡಿದ್ದಾರೆ. ಓಲ ಶೋರೂಮ್ ಮೇಲೆ ದಾಳಿ ಮಾಡಿ ಯಾವುದೇ ಕ್ರಮ ಕೈಗೊಳ್ಳದೇ ಯಾಕಾಗಿ ದಾಳಿಯನ್ನು ಮುಚ್ಚಿಟ್ಟಿದ್ದಾರೆ ಎನ್ನುವುದು ಪ್ರಶ್ನೆಯಾಗಿದೆ. ಇಂತಹ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರ ಒತ್ತಾಯ ಆಗಿದೆ. ಇದರ ಅಸಲಿ ಸ್ಟೋರಿ ಏನು? ತಿಳಿಯಬೇಕಿದೆ.

### ಸರಳಾದೇವಿ ಕಾಲೇಜಿನ ಪ್ರಾಂಶುಪಾಲರಾಗಿ ನೇಮಕ

## ಡಾ.ಸಿ.ಎಚ್.ಸೋಮನಾಥ ಅಧಿಕಾರ ಸ್ವೀಕಾರ: ಅಭಿನಂದನೆ

**ಬಳ್ಳಾರಿ, ಮೇ.8–**ಬಳ್ಳಾರಿ ನಗರದ ಸರಳಾದೇವಿ (ಎಸ್.ಎಸ್.ಎ) ಸರಕಾರಿ ಪ್ರಥಮ ದರ್ಜೆ ಕಾಲೇಜಿನ ನೂತನ ಪ್ರಾಚಾರ್ಯರಾಗಿ ಇತಿಹಾಸ ವಿಭಾಗದ ಮುಖ್ಯಸ್ಥ ಡಾ.ಸಿ.ಎಚ್ ಸೋಮನಾಥ ಅವರು ಅಧಿಕಾರ ಸ್ವೀಕರಿಸಿದರು.



ಪ್ರಾಚಾರ್ಯರಾಗಿದ್ದ ಡಾ.ಪ್ರಹ್ಲಾದ ಚೌಧರಿ ಅವರು ಅಧಿಕಾರ ಹಸ್ತಾಂತರಿಸಿದರು. ಈ ಹಿನ್ನಲೆಯಲ್ಲಿ ಬುಧವಾರ ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರು, ಸಹಾಯಕ ಪ್ರಾಧ್ಯಾಪಕರು, ಉಪನ್ಯಾಸಕರು, ನಗರದ ಹಲವು ಸಂಘ ಸಂಸ್ಥೆಗಳು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಾಚಾರ್ಯ ಡಾ.ಸಿ.ಎಚ್ ಸೋಮನಾಥ ಅವರು ಕಾಲೇಜಿನ ಇತಿಹಾಸ ವಿಭಾಗದ ಉಪನ್ಯಾಸಕನಾಗಿ, ಸಹಾಯಕ ಪ್ರಾಧ್ಯಾಪಕನಾಗಿ ಸುಮಾರು ಮೂರು ದಶಕಗ ಕಾಲ ಕರ್ತವ್ಯ ನಿರ್ವಹಿಸಿದ ತಮಗೆ ಸಂತಸವಾಗಿದೆ. ಈ ಅವಕಾಶ ಕಲ್ಪಿಸಿದ ಕಾಲೇಜಿನ ಆಡಳಿತ ಮಂಡಳಿ ಅಧ್ಯಕ್ಷರೂ ಆದ ನಗರ ಶಾಸಕ ನಾರಾ ಭರತರೆಡ್ಡಿ ಅವರಿಗೆ ಕೃತಜ್ಞನಾಗಿದ್ದೇನೆ. ಎರಡು ತಿಂಗಳು ಉತ್ತಮವಾಗಿ ಸೇವೆ ಸಲ್ಲಿಸಲು ಎಲ್ಲಾ ವಿಭಾಗಗಳ ಮುಖ್ಯಸ್ಥರು, ಉಪನ್ಯಾಸಕರು, ಸಿಬ್ಬಂದಿಗಳು ಸಹಕಾರ ನೀಡಬೇಕು ಎಂದು ಕೋರಿದರು.

ಜಿಲ್ಲಾ ಸರಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಡಾ.ಟಿ. ದುರುಗಪ್ಪ ಅವರು ಮಾತನಾಡಿ ಪ್ರಾಚಾರ್ಯರಾಗಿ ಹಿರಿಯ ಪ್ರಾಧ್ಯಾಪಕ ಡಾ.ಸಿ.ಎಚ್ ಸೋಮನಾಥ ಅವರು ಅಧಿಕಾರ ಸ್ವೀಕರಿಸಿರುವುದು ತಮಗೆಲ್ಲಾ ಸಂತೋಷವಾಗಿದೆ. ಕಾಲೇಜಿನ ಇತಿಹಾಸದಲ್ಲಿ ಪರಿಶಿಷ್ಟರೊಬ್ಬರು ಮೊದಲಬಾರಿಗೆ ಪ್ರಾಚಾರ್ಯರಾಗುವ ಮೂಲಕ ದಾಖಲೆಯೊಂದನ್ನು ನಿರ್ಮಿಸಿದ್ದಾರೆ. ಇವರಿಗೆ ನಮ್ಮ ಸಂಘ ಸಹಕಾರ ಬೆಂಬಲ ನೀಡಲಿದೆ ಎಂದರು.

## ಗರ್ಭಿಣಿಯರನ್ನು ನಿರ್ಲಕ್ಷಿಸದೆ ಚಿಕಿತ್ಸೆ ನೀಡಿ: ವೈದ್ಯರಿಗೆ ಡಿಎಚ್‌ಓ ಡಾ.ಯಲ್ಲಾ ರಮೇಶಬಾಬು ಸೂಚನೆ

**ಬಳ್ಳಾರಿ, ಮೇ.8–** ಗರ್ಭಿಣಿ ಮಹಿಳೆಯರಲ್ಲಿ ಪಾದಗಳ ಬಾವು ಅಪಾಯಕಾರಿಯಾಗಿದ್ದು, ಸಕಾಲಕ್ಕೆ ಅವರಿಗೆ ಮಾಡಿಸಬೇಕಾದ ತಪಾಸಣೆ ಹಾಗೂ ಚಿಕಿತ್ಸೆಯನ್ನು ತಡ ಮಾಡದಂತೆ ವೈದ್ಯರು ಕ್ರಮವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು ಅವರು ಹೇಳಿದರು.



ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿ ಮಕ್ಕಳಿಗೆ ಲಸಿಕೆ ಹಾಕಿಸಲು ಆಗಮಿಸಿದ ತಾಯಂದಿರು ಹಾಗೂ ಟಿಡಿ ಚುಚ್ಚುಮದ್ದು ಪಡೆಯಲು ಆಗಮಿಸಿದ ಗರ್ಭಿಣಿಯ ರೊಂದಿಗೆ ಆರೋಗ್ಯ ವಿಚಾರಿಸಿ, ಗಂಡಾಂತರ ಗರ್ಭಿಣಿಯರು ಎಂದು ಗುರ್ತಿಸಿದ ನಂತರ ಅವರ ನಿರಂತರ ನಿಗಾವಣೆಯಲ್ಲಿರಿಸಬೇಕು. ಒಂದು ವೇಳೆ ರಕ್ತದೊತ್ತಡ ಪರೀಕ್ಷೆ ಕೈಗೊಂಡ ನಂತರ ಕಂಡು ಬರುವ ವ್ಯತ್ಯಾಸವನ್ನು ಉಪಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪರಿಶೀಲಿಸಬೇಕು ಎಂದರು. ರಕ್ತಹೀನತೆ ಕಂಡುಬಂದಲ್ಲಿ ಸ್ಥಳೀಯವಾಗಿ ನೀಡುವ ಚಿಕಿತ್ಸೆಯಿಂದ ಸುಧಾರಣೆಯಾಗದಿದ್ದಲ್ಲಿ ತಜ್ಞರ ಬಳಿ ತಪ್ಪದೆ ಕಳುಹಿಸಬೇಕು. ಅಗತ್ಯವಿದ್ದಲ್ಲಿ ಸ್ಕಾನ್ ಮಾಡಿಸಬೇಕು.

ಮೊದಲ ಹೆರಿಗೆ ಶಸ್ತ್ರಚಿಕಿತ್ಸೆ ಮೂಲಕವಾದಲ್ಲಿ ಪುನಃ ಗರ್ಭಿಣಿಂನಾಗುವ ಅವಧಿಯನ್ನು ಕನಿಷ್ಟ 3 ವರ್ಷಕ್ಕೆ ಕಡ್ಡಾಯವಾಗಿ ಮುಂದೂಡಬೇಕು. ಇದಕ್ಕಾಗಿ ಅಂತರ ಚುಚ್ಚು ಮದ್ದು, ಕಾಪರ–ಟಿ, ನೀರೊಧ ಕುರಿತು ಆರೋಗ್ಯ ಶಿಕ್ಷಣ ನೀಡಲು ಮರೆಯಬಾರದು. ಅತಿ ಮುಖ್ಯವಾಗಿ ಗರ್ಭಿಣಿಗೆ ಮೇಲ್ಮಟ್ಟದ ಆಸ್ಪತ್ರೆಗೆ ರೇಫರ್ ಮಾಡುವಾಗ 108 ಆರೋಗ್ಯ ಕವಚ ಬರುವ ಸಮಯ ತಡವಾಗುವ ಸಾಧ್ಯತೆ ಇದ್ದಲ್ಲಿ ತಕ್ಷಣೇ ವೈದ್ಯಾಧಿಕಾರಿಗಳು ಪರ್ಯಾಯ ಸಾರಿಗೆ ವ್ಯವಸ್ಥೆ ಮಾಡಬೇಕು.ರಕ್ತಹೀನತೆ ಎಂದು ಕಂಡುಬಂದಲ್ಲಿ ಐರನ್ ಸುಕ್ರೋಸ್ 200 ಮಿಲಿ ಗ್ರಾಂ ಪ್ರತಿ ಮೂರು ದಿನಕ್ಕೊಮ್ಮೆ 05 ಇಂಜಕ್ಷನ್ ಕೊಡಿಸಬೇಕು. ವೈದ್ಯಾಧಿಕಾರಿಗಳು ತಮ್ಮ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರಿಗೆ ಗಂಡಾಂತರ ಗರ್ಭಿಣಿಯರ ಮನೆ ಭೇಟಿ ಹಾಗೂ ಆರೋಗ್ಯದ ಸ್ಥಿತಿ ಕುರಿತು ಪ್ರತಿವಾರ ಚರ್ಚಿಸಬೇಕು ಎಂದರು.

## ನಮ್ಮ ಶಿಕ್ಷಣದಲ್ಲಿ ಮಾನವೀಯ ಮೌಲ್ಯ, ನೈತಿಕತೆ–ನೀತಿಶಾಸ್ತ್ರದ ಕೊರತೆಯಿಂದ ಸಾಮಾಜಿಕ ಸಮಸ್ಯೆ: ಪ್ರೊ.ಸತ್ಯನಾರಾಯಣ ಆತಂಕ

**ಕಲಬುರಗಿ, ಮೇ.8–** ಮಾನವನ ಜೀವನವು ಸಂಪೂರ್ಣ ಭೌತಿಕಮಯವಾಗಿದೆ. ನಮ್ಮ ಶಿಕ್ಷಣ ವ್ಯವಸ್ಥೆಯಲ್ಲಿ ಮಾನವೀಯ ಮೌಲ್ಯಗಳು, ನೈತಿಕತೆ ಮತ್ತು ನೀತಿಶಾಸ್ತ್ರದ ಕೊರತೆಯು ಸಮಾಜದಲ್ಲಿ ಹಲವಾರು ಸಾಮಾಜಿಕ ಸಮಸ್ಯೆಗಳಿಗೆ ಹುಟ್ಟುಹಾಕಿದೆ. ಹೀಗಾಗಿ ಅಪರಾಧ, ಆತ್ಮಹತ್ಯೆಯಂತಹ ಘಟನೆಗಳು ಹೆಚ್ಚಾಗುತ್ತಿವೆ ಎಂದು ಕೇಂದ್ರೀಯ ವಿಶ್ವವಿದ್ಯಾಲಯದ ಕುಲೊಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು.

ನಗರದ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ನವದೆಹಲಿಯ ಭಾರತೀಯ ಶಿಕ್ಷಣ ಮಂಡಲ (ಬಿಎಸ್ ಎಂ) ಸಹಯೋಗದೊಂದಿಗೆ ಆಯೋಜಿಸಿದ್ದ 'ಪ್ರಸ್ತುತ ಶೈಕ್ಷಣಿಕ ವಲಯದಲ್ಲಿ ಭಾರತೀಯ ಜ್ಞಾನ ಪರಂಪರೆಯ (ಐಕೆಎಸ್) ಪ್ರಸ್ತುತತೆ' ಎಂಬ ಒಂದು ದಿನದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತೀಯ ಜ್ಞಾನ ಪರಂಪರೆಯು ಮಾನವನ ಜೀವನದ ಸಾರವನ್ನು ಅರ್ಥಮಾಡಿಕೊಳ್ಳುವ ಮೂಲಕ ಜನರು ನೆಮ್ಮದಿಯ ಜೀವನವನ್ನು ಹೇಗೆ ನಡೆಸಬೇಕು ಮತ್ತು ಒತ್ತಡದ ಜೀವನ ದಿಂದ ಹೇಗೆ ಹೊರಬರಬೇಕು ಎಂಬುದನ್ನು ಕಲಿಸುತ್ತದೆ. ಐಕೆಎಸ್ ಅನ್ನು ಮರುಪರಿಶೀಲಿಸುವ ಮತ್ತು ಪ್ರಸ್ತುತ ಸನ್ನಿವೇಶದಲ್ಲಿ ಪರಿಸರ, ಸಾಮಾಜಿಕ, ಕೌಟುಂಬಿಕ ಸಮಸ್ಯೆಗಳನ್ನು ಪರಿಹರಿಸುವ ಸಮಯ ಇದಾಗಿದೆ. ಏಕೆಂದರೆ ಐಕೆಎಸ್ ಮುಖ್ಯವಾಗಿ ಮಾನವ ಕಾಳಜಿಯ ಬಗ್ಗೆ ಮಾತನಾಡುತ್ತದೆ. ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಪುಣೆಯ ಡಿಇಎಸ್ ವಿಶ್ವವಿದ್ಯಾಲಯದ ಭಾರತೀಯ ಜ್ಞಾನ ಪರಂಪರೆಯ ವಿಭಾಗದ ಮುಖ್ಯಸ್ಥರಾದ ಡಾ. ವಾಸುದೇವ್ ಐತಾಳ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಐಕೆಎಸ್ ಹೆಚ್ಚು ಜನಪ್ರಿಯವಾಗುತ್ತಿದೆ, ಏಕೆಂದರೆ ಜನರು ಅದರ ಬಗ್ಗೆ ಹೆಚ್ಚು ಜಾಗೃತರಾಗುತ್ತಿದ್ದಾರೆ. ಐಕೆಎಸ್‌ನ ಮುಖ್ಯ ಗುರಿ ಎಲ್ಲಾ ಕ್ಷೇತ್ರಗಳಲ್ಲಿ ಭಾರತೀಯತೆಯನ್ನು ತರುವುದು, ಹೀಗಾಗಿ ಇದು ನಮ್ಮ ಸ್ವಂತಿಕೆಯನ್ನು ಗುರುತಿಸಿಕೊಳ್ಳಲು ನಮಗೆ ಸಹಾಯ ಮಾಡುತ್ತದೆ. ಐಕೆಎಸ್ ಬಗ್ಗೆ ಪಕ್ಷಪಾತದ ತಿಳುವಳಿಕೆಯನ್ನು ತಪ್ಪಿಸುವ ಮೂಲಕ, ನಾವು ಐಕೆಎಸ್‌ನ ತಂತ್ರಗಳನ್ನು ತಿಳಿದುಕೊಳ್ಳಬೇಕು. ಅದರಲ್ಲಿಯು ವಿಶೇಷವಾಗಿ ಅದರ ಅರ್ಹತೆ, ವಿಷಯ, ಪ್ರಯೋಜನ ಮತ್ತು ಐಕೆಎಸ್‌ನ ಪ್ರಸ್ತುತತೆಯನ್ನು ತಿಳಿದುಕೊಳ್ಳಬೇಕು ಎಂದು ಹೇಳಿದರು.



**ಕಲಬುರಗಿ ನಗರದ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ನವದೆಹಲಿಯ ಭಾರತೀಯ ಶಿಕ್ಷಣ ಮಂಡಲ (ಬಿಎಸ್ ಎಂ) ಸಹಯೋಗದೊಂದಿಗೆ ಆಯೋಜಿಸಿದ್ದ 'ಪ್ರಸ್ತುತ ಶೈಕ್ಷಣಿಕ ವಲಯದಲ್ಲಿ ಭಾರತೀಯ ಜ್ಞಾನ ಪರಂಪರೆಯ (ಐಕೆಎಸ್) ಪ್ರಸ್ತುತತೆ' ಎಂಬ ಒಂದು ದಿನದ ವಿಚಾರ ಸಂಕಿರಣವನ್ನು ಕುಲಪತಿ ಪ್ರೊ.ಬನೊಟ್ಟು ಸತ್ಯನಾರಾಯಣ ಅವರು ಉದ್ಘಾಟಿಸಿದರು. ಪುಣೆಯ ಡಿಇಎಸ್ ವಿಶ್ವವಿದ್ಯಾಲಯದ ಭಾರತೀಯ ಜ್ಞಾನ ಪರಂಪರೆಯ ವಿಭಾಗದ ಮುಖ್ಯಸ್ಥರಾದ ಡಾ. ವಾಸುದೇವ್ ಐತಾಳ್, ಕೊಲ್ಹಾಪುರದ ಸಂಜಯ್ ಘೋಡಾವತ್ ವಿಶ್ವವಿದ್ಯಾಲಯದ ಮಾಜಿ ಕುಲಪತಿ ಮತ್ತು ಬಿಎಸ್‌ಎಂನ ಉತ್ತರ ಕರ್ನಾಟಕದ ಉಪಾಧ್ಯಕ್ಷರೂ ಆದ ಪ್ರೊ. ವೆಂಕಟೇಶ್ ರಾಯ್ಕರ್ ಅವರಿದ್ದರು.**

ಕೊಲ್ಹಾಪುರದ ಸಂಜಯ್ ಘೋಡಾವತ್ ವಿಶ್ವವಿದ್ಯಾಲಯದ ಮಾಜಿ ಕುಲಪತಿ ಮತ್ತು ಬಿಎಸ್‌ಎಂನ ಉತ್ತರ ಕರ್ನಾಟಕದ ಉಪಾಧ್ಯಕ್ಷರೂ ಆದ ಪ್ರೊ. ವೆಂಕಟೇಶ್ ರಾಯ್ಕರ್ ಅವರು ಅತಿಥಿಗಳಾಗಿ ಆಗಮಿಸಿ, ಭಾರತೀಯ ಶಿಕ್ಷಣ ಮಂಡಲ ಒಂದು ಲಾಭರಹಿತ ಭಾರತೀಯ ಶಿಕ್ಷಣಕ್ಕಾಗಿ ದುಡಿಯುವ ಸಂಸ್ಥೆಯಾಗಿದೆ. ನಮ್ಮ ಶಾಲೆಯಲ್ಲಿ ನಮ್ಮ ಸಂಸ್ಕೃತಿ, ಗುರುತು, ಇತಿಹಾಸ ಇತ್ಯಾದಿಗಳ ಬಗ್ಗೆ ನಮಗೆ ಎಂದಿಗೂ ಸರಿಯಾಗಿ ಹೇಳಲಾಗಿಲ್ಲ. ಬಿಎಸ್‌ಎಂ ಇವೆಲ್ಲವನ್ನೂ ನೋಡಿಕೊಳ್ಳುತ್ತಿದೆ ಮತ್ತು ಇವುಗಳನ್ನು ನಮ್ಮ ಶೈಕ್ಷಣಿಕ ಕಲಿಕೆಯ ಭಾಗವಾಗಿಸುವಲ್ಲಿ ಪ್ರಯತ್ನಿಸುತ್ತಿದೆ. ಇದರ ಪ್ರಮುಖ ಕೊಡುಗೆ ಎಂದರೆ ಎನ್‌ಇಪಿ–2020 ಮಾತ್ರ ಎಂದು ಹೇಳಿದರು.

ಕುಲಸಚಿವ ಪ್ರೊ.ಆರ್ ಆರ್ ಬಿರಾದಾರ ಮಾತನಾಡಿ, ಯುವಜನರು ಒತ್ತಡದಿಂದ ಹೊರ'ಬರಲು ಮತ್ತು ಅವರ ಮಾನಸಿಕ ಸಮಸ್ಯೆಗಳನ್ನು ಎದುರಿಸಲು ಸಾಧ್ಯವಾಗುತ್ತಿಲ್ಲ. ಐಕೆಎಸ್ ಕಲೆ, ಸಂಸ್ಕೃತಿ, ವೈದ್ಯಕೀಯ, ಆರ್ಥಿಕತೆ, ಆಯುರ್ವೇದ ಇತ್ಯಾದಿಗಳಲ್ಲಿ ವಿಶಾಲವಾದ ಜ್ಞಾನ ವ್ಯವಸ್ಥೆಯನ್ನು ಒಳಗೊಂಡಿದೆ. ಐಕೆಎಸ್ ಅನ್ನು ಅರ್ಥ ಮಾಡಿಕೊಳ್ಳಲು ಮತ್ತು ಭಾರತವನ್ನು 'ವಿಶ್ವ–ಗುರು' ವನ್ನಾಗಿ ಮಾಡಲು ಎಪಿ ಸಾಧನವಾಗಿದೆ ಎಂದು ಹೇಳಿದರು.

ಕೇಂದ್ರೀಯ ವಿವಿ ಬಿಎಂನ ಸಂಚಾಲಕ ಮತ್ತು ಗಣಕ ನಿಕಾಯದ ಡೀನ್, ಪ್ರೊ. ಆರ್. ಎಸ್. ಹೆಗಾಡಿ ಪ್ರಾಸ್ತಾವಿಕ ಮಾತುಗಳನ್ನಾಡಿ, ಬಿಎಸ್‌ಂ ಆಗಸ್ಟ್ 27, 1969 ರಂದು ರಾಮ ನವಮಿಯ ದಿನದಂದು ಸ್ಥಾಪಿಸಲಾಯಿತು. ಅದರ ಅಂಗವಾಗಿ ದೇಶಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಭಾರತೀಯ ಶಿಕ್ಷಣ ವ್ಯವಸ್ಥೆಯನ್ನು ಪುನಃ ಸ್ಥಾಪಿಸುವುದು ಬಿಎಸ್‌ಂನ ಗುರಿಯಾಗಿದೆ ಎಂದು ಹೇಳಿದರು.

ಡಾ.ನೀತಿನ್ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಪ್ರೊ. ಚನ್ನವೀರ, ಪ್ರೊ.ಬಸವರಾಜ ಡೋಣೂರ, ಪ್ರೊ.ಜಿ.ಆರ್. ಅಂಗಡಿ, ಡಾ.ದೇವರಾಜಪ್ಪ, ಡಾ.ರವಿ ಖಣಗಿ, ಡಾ.ರಾಜೀವ್ ಜೋಶಿ, ಡಾ.ಕವಿತಾ ಹಿರೇಮಠ, ಡಾ.ಲಕ್ಷ್ಮಣ, ಡಾ.ರೂಪಾರಾಣಿ, ಡಾ.ಉದಯ ಪಾಟೀಲ, ಡಾ.ಸಂಗಮೇಶ್, ಡಾ.ಉದಯ ಪಾಟೀಲ, ಡಾ.ಕಾರ್ತಿಕ್, ಶಿಕ್ಷಕರು ಮತ್ತು ಸಂಶೋಧನಾ ವಿದ್ಯಾರ್ಥಿಗಳು ಹಾಜರಿದ್ದರು.

# ಅಮೆರಿಕದ ಮಧ್ಯಸ್ಥಿಕೆ ಪ್ರಸ್ತಾಪ ಭಾರತದಿಂದ ಮತ್ತೆ ತಿರಸ್ಕಾರ

**ನವದೆಹಲಿ, ಮೇ 8:** ಭಾರತ ಮತ್ತು ಪಾಕಿಸ್ತಾನದ ನಡುವೆ ಮಧ್ಯಸ್ಥಿಕೆ ವಹಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪ್ರಸ್ತಾಪವನ್ನು ಭಾರತ ನಯವಾಗಿ ತಿರಸ್ಕರಿಸಿದೆ.

ಟ್ರಂಪ್ ಅವರ ಕೊಡುಗೆಗೆ ಧನ್ಯವಾದ ಸಲ್ಲಿಸಿದ ಭಾರತ, ಸಾಧ್ಯವಾದರೆ ಭಯೋತ್ಪಾದಕ ಸಂಘಟನೆಗಳಿಗೆ ಬೆಂಬಲ ನೀಡುವುದನ್ನು ನಿಲ್ಲಿಸುವಂತೆ ಇಸ್ಲಾಮಾಬಾದ್ ಅನ್ನು ಕೇಳಿದೆ. ವಾಷಿಂಗ್ಟನ್‌ನಲ್ಲಿರುವ ಭಾರತೀಯ ರಾಯಭಾರಿ ವಿನಯ್ ಮೋಹನ್ ಕ್ವಾತ್ರ ಈ ನಿಟ್ಟಿನಲ್ಲಿ ಅಮೆರಿಕಕ್ಕೆ ಪತ್ರ ಬರೆದಿದ್ದಾರೆ.



ಆಪರೇಷನ್ ಸಿಂಧೂರ್ ಸುದ್ದಿಗೆ ಪ್ರತಿಕ್ರಿಯಿಸಿದ ಟ್ರಂಪ್, "ಇದು ಹೆಚ್ಚು ಕಾಲ ಮುಂದುವರಿಯಬಾರದು. ಇದು ಗಂಭೀರವಾಗಿದೆ. ಎರಡೂ ದೇಶಗಳ ನಾಯಕರನ್ನು ನಾನು ಬಲ್ಲೆ. ಇಬ್ಬರೂ ನಾಯಕರು ಇದನ್ನು ಪರಿಹರಿಸಲು ಪ್ರಯತ್ನಿಸುತ್ತಾರೆ ಎಂದು ನನಗೆ ವಿಶ್ವಾಸವಿದೆ. ಕ್ರಮ ಕೈಗೊಳ್ಳಲಾಗಿದೆ. ಅದನ್ನು ಈಗಲೇ ನಿಲ್ಲಿಸಬೇಕು." ಭಾರತವು ಅಮೆರಿಕ ಮಾತ್ರವಲ್ಲದೆ ಭಾರತ ಮತ್ತು ಪಾಕಿಸ್ತಾನದ ನಡುವೆ ಮಧ್ಯಸ್ಥಿಕೆ ವಹಿಸುವ ಯಾವುದೇ ದೇಶದ ಪ್ರಸ್ತಾಪವನ್ನು ತಿರಸ್ಕರಿಸಿದೆ. ಇದಕ್ಕೂ ಮೊದಲು, ಡೊನಾಲ್ಡ್ ಟ್ರಂಪ್ ಅಧ್ಯಕ್ಷರಾಗಿದ್ದಾಗ, ಜೂನ್ 15, 2020 ರಂದು ಗಾಲ್ವಾನ್ ಕಣಿವೆಯಲ್ಲಿ ಭಾರತ ಮತ್ತು ಚೀನಾದ ಸೈನಿಕರು ಘರ್ಷಣೆ ನಡೆಸಿದಾಗ ಮಧ್ಯಸ್ಥಿಕೆ ವಹಿಸುವ ಅಮೆರಿಕದ ಪ್ರಸ್ತಾಪವನ್ನು ಭಾರತ ತಿರಸ್ಕರಿಸಿತ್ತು.

# ನಮ್ಮ ಜೆಟ್‌ಗಳು ಭಾಗಿಯಾದ ಬಗ್ಗೆ ಗೊತ್ತಿಲ್ಲ: ಚೀನಾ ವಿದೇಶಾಂಗ ಸಚಿವಾಲಯ

ಭಾರತ ಹಾಗೂ ಪಾಕಿಸ್ತಾನದ ನಡುವೆ ಯುದ್ಧ ಪರಿಸ್ಥಿತಿ ಬಿಗಡಾಯಿಸುತ್ತಿರುವಾಗಲೇ ಪಾಕಿಸ್ತಾನಕ್ಕೆ ಏಕೈಕ ಆಸರೆಯಾಗಿದ್ದ ಚೀನಾ ಸಹ ಇದೀಗ ಕೈಕೊಡುವ ಸಾಧ್ಯತೆ ದಟ್ಟವಾಗಿದೆ. ಪಾಕಿಸ್ತಾನವು ಭಾರತದ ಮೇಲೆ ಯುದ್ಧ ಮಾಡುವುದಕ್ಕೆ ನೆಚ್ಚಿಕೊಂಡ ರಾಷ್ಟ್ರಗಳಲ್ಲಿ ಚೀನಾ ಮುಂಚೂಣಿಯಲ್ಲಿತ್ತು. ನಾವು ಭಾರತದ ಮೇಲೆ ದಾಳಿ ನಡೆಸುವುದಕ್ಕೆ ಚೀನಾ ನಿರ್ಮಿತ ಜೆ-10ಸಿ ಫೈಟರ್ ಜೆಟ್‌ಗಳನ್ನು ಬಳಸಿದ್ದೇವೆ ಎಂದು ಪಾಕ್ ಹೇಳಿದೆ.

ಈ ಹೇಳಿಕೆ ಚೀನಾಗೆ ಭಾರಿ ಮುಜುಗರವನ್ನು ಸೃಷ್ಟಿ ಮಾಡಿದೆ. ಅಲ್ಲದೇ ಈ ವಿಚಾರದಲ್ಲಿ ನಮಗೇನು ಗೊತ್ತೇ ಇಲ್ಲ ಅಂತ ಚೀನಾ ಹೇಳಿದೆ



ಆದರೆ, ಯಾವಾಗ ಚೀನಾ ದೇಶಕ್ಕೇ ಮುಜುಗರವುಂಟಾಗುವ ರೀತಿಯಲ್ಲಿ ಪಾಕಿಸ್ತಾನ ಹೇಳಿಕೆ ನೀಡಿದೆಯೋ ಆಗಲೇ ಚೀನಾ ನಮಗೇನು ಗೊತ್ತಿಲ್ಲ ಅಂತ ಹೇಳುವ ಮೂಲಕ ಪಾಕಿಸ್ತಾನಕ್ಕೆ ಭಾರೀ ಶಾಕ್ ನೀಡಿದೆ. ಪಾಕಿಸ್ತಾನದ ಪ್ರಧಾನಿ ಶಹಬಾಜ್ ಷರೀಫ್ ಅವರು ಭಾರತದ ಯುದ್ಧ ವಿಮಾನಗಳ ದಾಳಿ ಮಾಡಲು ಇಲ್ಲವೇ ಹೊಡೆದುರುಳಿಸುವುದಕ್ಕೆ ಜೆ-10ಸಿ ಜೆಟ್‌ಗಳನ್ನು ಬಳಸಿದ್ದೇವೆ ಎಂದು ಹೇಳಿದ ಬೆನ್ನಲ್ಲೇ ಚೀನಾ ಈ ರೀತಿ ಹೇಳಿದೆ. ಈ ಮೂಲಕ ಪಾಕ್ನಿಂದ ಚೀನಾ ಸಂಕಷ್ಟದ ಸಮಯದಲ್ಲೇ ಅಂತರ ಕಾಪಾಡಿಕೊಂಡಿದೆ.

> **ಚೀನಾದ ವಿದೇಶಾಂಗ ಸಚಿವಾಲಯ ಗುರುವಾರ ಪ್ರತಿಕ್ರಿಯಿಸಿ, "ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಘರ್ಷದಲ್ಲಿ ಚೀನಾದ ಜೆಟ್‌ಗಳು ಭಾಗಿಯಾಗಿವೆಯೇ ಎಂಬುದು ನನಗೆ ತಿಳಿದಿಲ್ಲ**
>
> – ಚೀನಾ ವಿದೇಶಾಂಗ ಸಚಿವಾಲಯ

# ಭಾರತ-ಪಾಕ್ ಉದ್ವಿಗ್ನತೆ ಬಗ್ಗೆ ಬ್ರಿಟನ್ ಸಂಸತ್‌ನಲ್ಲಿ ಚರ್ಚೆ

**ಲಂಡನ್, ಮೇ 8:** ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಪಿಒಕೆಯಲ್ಲಿನ ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿಕೊಂಡು ಅಪರೇಷನ್ ಸಿಂಧೂರ್ ದಾಳಿ ಹಿನ್ನೆಲೆಯಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಬಗ್ಗೆ ಬ್ರಿಟಿಷ್ ಸಂಸತ್ತಿನಲ್ಲಿ ಸುದೀರ್ಘವಾಗಿ ಚರ್ಚಿಸಲಾಗಿದೆ.



ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ನಲ್ಲಿ ಏಪ್ರಿಲ್ 22 ರಂದು 26 ಜನರ ಸಾವಿಗೆ ಕಾರಣವಾದ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತ ಬುಧವಾರ ಮುಂಜಾನೆ ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ) ಮತ್ತು ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದ ಒಂಬತ್ತು ಭಯೋತ್ಪಾದಕ ನೆಲೆಗಳನ್ನು ಹೊಡೆದುರುಳಿಸುವ ಮೂಲಕ ಅಪರೇಷನ್ ಸಿಂಧೂರ್ ಅನ್ನು ಭಾರತ ಪ್ರಾರಂಭಿಸಿತು.

ರಾಜತಾಂತ್ರಿಕತೆ ಮತ್ತು ಸಂವಾದದ ಪ್ರಾಮುಖ್ಯತೆಯ ಬಗ್ಗೆ ಪ್ರಧಾನಿ ಕೀರ್ ಸ್ಟಾರ್ಮರ್ ಅವರ ಹಿಂದಿನ ಹೇಳಿಕೆಗಳನ್ನು ಪುನರುಚ್ಚರಿಸುವ ಹೇಳಿಕೆಯೊಂದಿಗೆ ಯುಕೆ ವಿದೇಶಾಂಗ ಕಚೇರಿ ಸಚಿವ ಹಮೀಶ್ ಫಾಲ್ಕನರ್ ನಿನ್ನೆ ಹೌಸ್ ಆಫ್ ಕಾಮನ್ಸ್‌ನಲ್ಲಿ ಚರ್ಚೆ ಪ್ರಾರಂಭಿಸಿದರು. ಮುಂದೆ ತ್ವರಿತ, ರಾಜತಾಂತ್ರಿಕ ಮಾರ್ಗವನ್ನು ಕಂಡುಹಿಡಿಯಲು ಅವರು ಮಾತುಕತೆಯಲ್ಲಿ ತೊಡಗಬೇಕಾಗಿದೆ ಎಂದು ಫಾಲ್ಕನರ್ ಹೇಳಿದರು. ಯುಕೆ ಎರಡೂ ದೇಶಗಳೊಂದಿಗೆ ನಿಕಟ ಮತ್ತು ಅನನ್ಯ ಸಂಬಂಧವನ್ನು ಹೊಂದಿದೆ. ನಾಗರಿಕರ ಜೀವಗಳನ್ನು ಕಳೆದುಕೊಳ್ಳುವುದನ್ನು ನೋಡುವುದು ಹೃದಯ ವಿದ್ರಾವಕವಾಗಿದೆ. ಇದು ಮತ್ತಷ್ಟು ಉಲ್ಬಣಗೊಂಡರೆ, ಯಾರೂ ಗೆಲ್ಲುವುದಿಲ್ಲ. ಕಳೆದ ತಿಂಗಳು ನಡೆದ ಭೀಕರ ಭಯೋತ್ಪಾದಕ ದಾಳಿಯನ್ನು ನಾವು ಸ್ಪಷ್ಟವಾಗಿ ಖಂಡಿಸಿದ್ದೇವೆ ಎಂದು ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಉಲ್ಲೇಖಿಸಿ ಅವರು ಹೇಳಿದರು ಮತ್ತು ಇದು ಆ ಪ್ರದೇಶದಲ್ಲಿ ಅನೇಕ ವರ್ಷಗಳಲ್ಲಿ ನಡೆದ ಅತ್ಯಂತ ಕೆಟ್ಟ ದಾಳಿಯಾಗಿದೆ ಎಂದು ಹೇಳಿದರು. ಈಗ, ಪ್ರಾದೇಶಿಕ ಸ್ಥಿರತೆಯನ್ನು ಪುನಃಸ್ಥಾಪಿಸಲು ಮತ್ತು ನಾಗರಿಕರ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಲು ಅಗತ್ಯವಿರುವ ಕ್ರಮಗಳ ಬಗ್ಗೆ ಎಲ್ಲಾ ಕಡೆಯವರು ತುರ್ತಾಗಿ ಗಮನ ಹರಿಸಬೇಕಾಗಿದೆ ಎಂದು ಫಾಲ್ಕನರ್ ಹೇಳಿದರು. ಅಲ್ಪಾವಧಿಯ ಉದ್ವಿಗ್ನತೆ ಮತ್ತು ದೀರ್ಘಕಾಲೀನ ಸ್ಥಿರತೆ ಗಾಗಿ ಯುಕೆ ಅಂತರರಾಷ್ಟ್ರೀಯ ಪಾಲುದಾರರೊಂದಿಗೆ ನಿಕಟವಾಗಿ ಕೆಲಸ ಮಾಡುವುದನ್ನು ಮುಂದುವರಿಸುತ್ತದೆ ಎಂದು ಅವರು ಪ್ರತಿಪಾದಿಸಿದರು.

ನಾವು ಈಗ ಶಾಂತ ತಲೆಗಳನ್ನು ನೋಡಬೇಕಾಗಿದೆ. ಉದ್ವಿಗ್ನತೆಯನ್ನು ಕಡಿಮೆ ಮಾಡಲು ಮತ್ತು ರಾಜತಾಂತ್ರಿಕತೆಗೆ ಬ್ರಿಟನ್ ತನ್ನ ಸಂಪೂರ್ಣ ಪಾತ್ರವನ್ನು ಮುಂದುವರಿಸುತ್ತದೆ ಎಂದು ಅವರು ಹೇಳಿದರು. ಯುಕೆ ನೆರಳು ವಿದೇಶಾಂಗ ಕಾರ್ಯದರ್ಶಿ ಪ್ರೀತಿ ಪಟೇಲ್ ಅವರು ತಮ್ಮನ್ನು ರಕ್ಷಿಸಿಕೊಳ್ಳಲು ಸಮಂಜಸವಾದ ಮತ್ತು ಪ್ರಮಾಣಾನುಗುಣ ಕ್ರಮಗಳನ್ನು ತೆಗೆದುಕೊಳ್ಳುವ ಭಾರತದ ಹಕ್ಕನ್ನು ಎತ್ತಿ ತೋರಿಸಿದರು.



ಪಶ್ಚಿಮ ಗಾಜಾ ನಗರದ ಅವಶೇಷಗಳ ನಡುವೆ ತಾತ್ಕಾಲಿಕ ಕಾರ್ಯಾಗಾರದಲ್ಲಿ, ಪ್ಯಾಲೆಸ್ತೀನಿಯನ್ನರ ಗುಂಪೊಂದು ವಿವಿಧ ತ್ಯಜಿಸಿದ ಪ್ಲಾಸ್ಟಿಕ್ ವಸ್ತುಗಳನ್ನು ಒಡೆದು ದೊಡ್ಡ ಲೋಹದ ಪಾತ್ರೆಗಳಲ್ಲಿ ಕರಗಿಸುವಲ್ಲಿ ನಿರತರಾಗಿದ್ದಾರೆ.



ಅಮೆರಿಕದ ವಾಷಿಂಗ್ಟನ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅಮೆರಿಕದ ಫೆಡರಲ್ ರಿಸರ್ವ್ ಅಧ್ಯಕ್ಷ ಜೆರೋಮ್ ಪೋವೆಲ್ ಭಾಗವಹಿಸಿದ್ದರು.

# ಭಯೋತ್ಪಾದನೆ ವಿರುದ್ಧದ ಹೋರಾಟ: ಭಾರತಕ್ಕೆ ಬ್ರೆಜಿಲ್ ಬೆಂಬಲ

**ನವದೆಹಲಿ, ಮೇ 8:** ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಅವರು ಇಂದು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮಾತನಾಡಿದರು ಮತ್ತು ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತದೊಂದಿಗೆ ಬೆಂಬಲ ಮತ್ತು ಒಗ್ಗಟ್ಟನ್ನು ವ್ಯಕ್ತಪಡಿಸಿದರು.



ಪ್ರಧಾನಿಯವರು ಅಧ್ಯಕ್ಷ ಲುಲಾ ಅವರ ಸಂತಾಪಕ್ಕೆ ಧನ್ಯವಾದ ಅರ್ಪಿಸಿದರು. "ಭಾರತ-ಬ್ರೆಜಿಲ್ ದ್ವಿಪಕ್ಷೀಯ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ತಮ್ಮ ಬದ್ಧತೆಯನ್ನು ಇಬ್ಬರೂ ನಾಯಕರು ಪುನರುಚ್ಚರಿಸಿದರು. "ಈ ವರ್ಷ ಬ್ರೆಜಿಲ್‌ನ ಬ್ರಿಕ್ಸ್‌ನ ಯಶಸ್ವಿ ಅಧ್ಯಕ್ಷತೆಗಾಗಿ ಪ್ರಧಾನಿ ತಮ್ಮ ಶುಭಾಶಯಗಳನ್ನು ತಿಳಿಸಿದರು."

# ತೈಪೆ ಓಪನ್ ಬ್ಯಾಡ್ಮಿಂಟನ್ ಟೂರ್ನಿ ಕ್ವಾರ್ಟರ್‌ಗೆ ಆಯುಷ್, ಉನ್ನತಿ

**ತೈಪೆ,ಮೇ 8:** ಭಾರತದ ಯುವ ಆಟಗಾರರಾದ ಆಯುಷ್ ಶೆಟ್ಟಿ ಮತ್ತು ಉನ್ನತಿ ಹೂಡಾ ಅವರು ತೈಪೆ ಓಪನ್ ಸೂಪರ್ 300 ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಕ್ವಾರ್ಟರ್ ಫೈನಲ್ ತಲುಪಿದರು. ಪುರುಷರ ಸಿಂಗಲ್ಸ್‌ನ ಪ್ರಿ ಕ್ವಾರ್ಟರ್ ಫೈನಲ್‌ನಲ್ಲಿ 20 ವರ್ಷ ವಯಸ್ಸಿನ ಆಯುಷ್ 21–16, 15–21, 21–17ರಿಂದ ಸ್ವದೇಶದ ಅನುಭವಿ ಆಟಗಾರ ಕಿದಂಬಿ ಶ್ರೀಕಾಂತ್ ಅವರನ್ನು ಮೂರು ಪಂದ್ಯಗಳ ಹೋರಾಟದಲ್ಲಿ ಹಿಮ್ಮೆಟ್ಟಿಸಿದರು. ಹಿಂದಿನ ಸುತ್ತಿನಲ್ಲಿ ಆಲ್ ಇಂಗ್ಲೆಂಡ್ ಚಾಂಪಿಯನ್‌ಶಿಪ್ ರನ್ನರ್ ಅಪ್ ಲೀ ಚಿಯಾ ಹಾವೊ ಅವರಿಗೆ ಆಘಾತ ನೀಡಿದ್ದ ಕನ್ನಡಿಗ ಆಯುಷ್ ಅವರು ಎಂಟರ ಘಟ್ಟದ ಪಂದ್ಯದಲ್ಲಿ ಏಳನೇ ಶ್ರೇಯಾಂಕದ ಬ್ರಿಯಾನ್ ಯಾಂಗ್ (ಕೆನಡಾ) ಅವರನ್ನು ಎದುರಿಸಲಿದ್ದಾರೆ.



17 ವರ್ಷ ವಯಸ್ಸಿನ ಉನ್ನತಿ ಮಹಿಳೆಯರ ಸಿಂಗಲ್ಸ್ ಪ್ರಿಕ್ವಾರ್ಟರ್ ಫೈನಲ್‌ನಲ್ಲಿ 21–12, 21–7ರಿಂದ ಆತಿಥೇಯ ಚೀನಾ ತೈಪೆಯ ಲಿನ್ ಸಿಹ್ ಯುನ್ ಅವರನ್ನು ಸೋಲಿಸಿದರು. ಉನ್ನತಿ ಮುಂದಿನ ಸುತ್ತಿನಲ್ಲಿ ಸ್ಥಳೀಯ ಆಟಗಾರ್ತಿ ಹಂಗ್ ಯಿ ಟಿಂಗ್ ಅವರನ್ನು ಎದುರಿಸುವರು. 2023ರ ರಾಷ್ಟ್ರೀಯ ಕ್ರೀಡಾಕೂಟದ ಚಿನ್ನದ ಪದಕ ವಿಜೇತ ತರುಣ್ ಮನ್ನಪಲ್ಲಿ ಅವರು ಪುರುಷರ ಸಿಂಗಲ್ಸ್‌ನಲ್ಲಿ ನಿರಾಸೆ ಮೂಡಿಸಿದರು. ಅವರು ಎರಡನೇ ಸುತ್ತಿನಲ್ಲಿ 13–21, 9–21ರಿಂದ ಇಂಡೋನೇಷ್ಯಾದ ಮೊಹ್ ಜಾಕಿ ಉಬೈದಿಲ್ಲಾ ವಿರುದ್ಧ ಸೋತರು

# ವಿಶ್ವಕಪ್ ಆರ್ಚರಿ: ಭಾರತದ ರಿಕರ್ವ್ ತಂಡಗಳಿಗೆ ನಿರಾಸೆ


**ಶಾಂಘೈ, ಮೇ 8:** ಭಾರತದ ಪುರುಷರ ಮತ್ತು ಮಹಿಳಾ ರಿಕರ್ವ್ ತಂಡಗಳು, ಇಲ್ಲಿ ನಡೆಯುತ್ತಿರುವ್ ವಿಶ್ವ ಕಪ್ ಸ್ಟೇಜ್ 2 ಆರ್ಚರಿ ಟೂರ್ನಿಯಲ್ಲಿ ಪದಕದ ಸುತ್ತಿನಿಂದ ಗುರುವಾರ ಹೊರಬಿದ್ದಿವೆ. ಪುರುಷರ ತಂಡ ನಾಲ್ಕನೇ ಸ್ಥಾನ ಪಡೆದರೆ, ಮಹಿಳೆಯರ ತಂಡ ಪ್ರಿಕ್ವಾರ್ಟರ್‌ಫೈನಲ್‌ನಲ್ಲಿ ಹೊರಬಿದ್ದಿದೆ.



ಧೀರಜ್ ಬೊಮ್ಮದೇವರ, ಅತನು ದಾಸ್ ಮತ್ತು ತರುಣದೀಪ್ ರೈ ಅವರನ್ನು ಒಳಗೊಂಡ ಏಳನೇ ಶ್ರೇಯಾಂಕದ ಪುರುಷರ ತಂಡ ಕಂಚಿನ ಪದಕಕ್ಕಾಗಿ ನಡೆದ ಪಂದ್ಯದಲ್ಲಿ ಅಮೆರಿಕ ತಂಡದ ಎದುರು 3–5 ರಿಂದ ಸೋಲನುಭವಿಸಿತು. ಭಾರತ 56–57ರ ಅಲ್ಪ ಅಂತರದಲ್ಲಿ ಮೊದಲ ಸೆಟ್ ಸೋತಿತು.

ಇದಕ್ಕೆ ಮೊದಲು ಭಾರತ ತೀವ್ರ ಹೋರಾಟ ಕಂಡ ಸೆಮಿಫೈನಲ್‌ನಲ್ಲಿ ಫ್ರಾನ್ಸ್ ಎದುರು 4–5 (25–26) ರಲ್ಲಿ ಸೋಲನುಭವಿಸಿ, ಕಂಚಿನ ಪದಕದ ಹಣಾಹಣಿಗೆ ಸೀಮಿತಗೊಂಡಿತ್ತು. ಮಹಿಳೆಯರ ವಿಭಾಗದಲ್ಲಿ ದೀಪಿಕಾ ಕುಮಾರಿ, ಅಂಕಿತಾ ಭಕತ್ ಮತ್ತು ಅನ್ನಿಕಾ ಕುಮಾರಿ ಅವರನ್ನು ಒಳಗೊಂಡ ತಂಡ ಕ್ಯಾಲಿಫಿಕೇಷನ್ ಹಂತದಲ್ಲಿ ಮೂರನೇ ಸ್ಥಾನ ಗಳಿಸಿ ಭರವಸೆ ಮೂಡಿಸಿತ್ತು. ಆದರೆ ಪ್ರಿಕ್ವಾರ್ಟರ್‌ಫೈನಲ್‌ನಲ್ಲಿ 14ನೇ ಶ್ರೇಯಾಂಕದ ಮೆಕ್ಸಿಕೊ ತಂಡದ ಎದುರು 4–5 ರಲ್ಲಿ (26–27) ಸೋಲನುಭವಿಸಿತು.


ಬುಧವಾರ, ಅಗ್ರ ಕ್ರಮಾಂಕದ ಭಾರತದ ಪುರುಷರ ಮತ್ತು ಮಹಿಳೆಯರ ತಂಡಗಳು ಕಾಂಪೌಂಡ್ ವಿಭಾಗದ ಫೈನಲ್ ತಲುಪಿದ್ದವು. ಭಾರತ ಶನಿವಾರ ನಡೆಯುವ ಫೈನಲ್‌ನ ಎರಡೂ ವಿಭಾಗಗಳಲ್ಲಿ ಮೆಕ್ಸಿಕೊ ತಂಡವನ್ನು ಎದುರಿಸಲಿದೆ.



ಫ್ರಾನ್ಸ್‌ನ ಪ್ಯಾರಿಸ್‌ನಲ್ಲಿರುವ ಪಾರ್ಕ್ ಡೆಸ್ ಪ್ರಿನ್ಸಸ್ ಕ್ರೀಡಾಂಗಣದಲ್ಲಿ ಪ್ಯಾರಿಸ್ ಸೇಂಟ್-ಜರ್ಮೈನ್ ಮತ್ತು ಆರ್ಸೆನಲ್ ನಡುವಿನ ಚಾಂಪಿಯನ್ಸ್ ಲೀಗ್ ಸೆಮಿಫೈನಲ್ ಎರಡನೇ ಲೆಗ್ ಪಂದ್ಯದ ಸಂದರ್ಭದಲ್ಲಿ ಪ್ಯಾರಿಸ್ ಸೇಂಟ್-ಜರ್ಮೈನ್‌ನ ಖ್ವಿಚಾ ಕ್ವಾರಟ್ಸ್‌ಖೇಲಿಯಾ ಆರ್ಸೆನಲ್‌ನ ಜುರಿಯನ್ ಟಿಂಬರ್ ವಿರುದ್ಧ ಪೈಪೋಟಿ ನಡೆಸಿದರು.

# ಚಂಡೀಗಡ ಮೊಳಗಿದ ಸೈರನ್, ಸ್ಟೇಡಿಯಂ ಬ್ಲ್ಯಾಕ್ ಔಟ್; ಪಂಜಾಬ್-ಡೆಲ್ಲಿ ಪಂದ್ಯ ರದ್ದು

ಪಹಲ್ಗಾಮ್‌ನಲ್ಲಿ ಭಾರತದ 26 ಅಮಾಯಕರನ್ನು ಕೊಂದಿದ್ದ ಕಾರಣ ಆಪರೇಷನ್ ಸಿಂದೂರ್ ಮೂಲಕ ಪಾಕಿಸ್ತಾನದ ಉಗ್ರ ನೆಲೆಗಳನ್ನು ಧ್ವಂಸಗೊಳಿಸಿದ ನಂತರ ಇಂಡೋ-ಪಾಕ್ ನಡುವೆ ಉದ್ವಿಗ್ನತೆ ಹೆಚ್ಚಾದ ಹಿನ್ನಲೆ ಚಂಡೀಗಡದಲ್ಲಿ ಭಾರತೀಯ ಸೇನೆ ಸೈರನ್ ಮೊಳಗಿಸಿದ್ದು, ಸಂಪೂರ್ಣ ವಿದ್ಯುತ್ ಕಡಿತಗೊಳಿಸಿ ಬ್ಲ್ಯಾಕ್‌ಔಟ್ ಮಾಡಲಾಗಿದೆ.



ಪರಿಣಾಮ ಧರ್ಮಶಾಲಾದ ಹಿಮಾಚಲ ಪ್ರದೇಶ ಕ್ರಿಕೆಟ್ ಅಸೋಸಿಯೇಷನ್ ಸ್ಟೇಡಿಯಂನಲ್ಲಿ ನಡೆಯುತ್ತಿದ್ದ ಪಂಜಾಬ್ ಕಿಂಗ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ನಡುವಿನ ಮಹತ್ವದ ಪಂದ್ಯವನ್ನು ರದ್ದುಗೊಳಿಸಲಾಗಿದೆ. ಇದಕ್ಕೆ ಭಾರತೀಯ ಸೇನೆ ಆದೇಶ ನೀಡಿದ ಹಿನ್ನೆಲೆ ಪಂದ್ಯವನ್ನು ನಿಲ್ಲಿಸಲಾಗಿದೆ ಅಲ್ಲದೆ, ಸ್ಟೇಡಿಯಂನಲ್ಲಿ ಕಿಕ್ಕಿರಿದು ತುಂಬಿದ್ದ ಪ್ರೇಕ್ಷಕರನ್ನು ಸ್ಥಳಾಂತರ ಮಾಡಲಾಗುತ್ತಿದೆ.

ಮಳೆಯ ಕಾರಣ ಪಂದ್ಯವು ರಾತ್ರಿ 8.30ಕ್ಕೆ ಆರಂಭಗೊಂಡಿತು. ಟಾಸ್ ನಡೆದ ಸಮಯ 8.15ಕ್ಕೆ. ಪಂದ್ಯ ಸುಗಮವಾಗಿ ಸಾಗುತ್ತಿತ್ತು. ಮೊದಲು ಬ್ಯಾಟಿಂಗ್ ನಡೆಸಿದ ಪಂಜಾಬ್, 10 ಓವರ್‌ಗಳಲ್ಲಿ ವಿಕೆಟ್ ನಷ್ಟವಿಲ್ಲದೆ 122 ರನ್ ಗಳಿಸಿತ್ತು.

ಆದರೆ 11ನೇ 1ನೇ ಓವರ್‌ನ ಮೊದಲ ಎಸೆತದಲ್ಲಿ ಪ್ರಿಯಾಂಶ್ ಆರ್ಯ ಔಟಾದರು. ಆದರೆ ಮರು ಎಸೆತಕ್ಕೂ ಮುನ್ನ ಫಡ್ ಲೈಟ್‌ಗಳನ್ನು ಆಫ್ ಮಾಡಲಾಯಿತು. ಜಮ್ಮು-ಕಾಶ್ಮೀರದಲ್ಲಿ ಭಾರತ ಮತ್ತು ಪಾಕಿಸ್ತಾನ ದಾಳಿ-ಪ್ರತಿ ದಾಳಿ ಹೆಚ್ಚಾದ ಹಿನ್ನೆಲೆಯಲ್ಲಿ ಗಡಿ ಭಾಗದ ರಾಜ್ಯಗಳಲ್ಲಿ ಹೈಅಲರ್ಟ್ ಘೋಷಣೆ ಮಾಡಲಾಯಿತು. ಹಾಗಾಗಿ ಜನಸಂದಣಿ ಹೆಚ್ಚಿದ್ದ ಸ್ಥಳಗಳು, ಪ್ರಮುಖ ನಗರಗಳು, ಜಲಾಶಯಗಳು ಸೇರಿದಂತೆ ಹಲವೆಡೆ ಬ್ಯಾಕ್‌ಔಟ್ ಘೋಷಣೆ ಮಾಡಲಾಯಿತು. ಟೂರ್ನಿಯುದ್ಧಕ್ಕೂ ಅದ್ಭುತ ಪ್ರದರ್ಶನ ನೀಡಿದ ಪ್ರಿಯಾಂಶ್ ಆರ್ಯ ಈ ಪಂದ್ಯದಲ್ಲೂ ಮತ್ತೊಂದು ಅಮೋಘ ಇನ್ನಿಂಗ್ಸ್ ಆಡಿದರು. ಅವರು 34 ಎಸೆತಗಳಲ್ಲಿ 5 ಬೌಂಡರಿ, 6 ಸಿಕ್ಸರ್‌ಗಳ ಸಹಾಯದಿಂದ 70 ರನ್ ಗಳಿಸಿದರು. ಪುಸಕ್ತ ಐಪಿಎಲ್ ನಲ್ಲಿ ಮೊದಲ ಪಂದ್ಯವನ್ನಾಡಿದ 10.75 ಕೋಟಿ ಒಡೆಯ ಟಿ ನಟರಾಜನ್ ಅವರು ಆರಂಭಿಕ ಜೋಡಿಯನ್ನು ಬೇರ್ಪಡಿಸುವಲ್ಲಿ ಯಶಸ್ವಿಯಾದರು. ಮತ್ತೊಂದೆಡೆ ಪ್ರಭುಸಿಮ್ರಾನ್ ಕೂಡ ಅರ್ಧಶತಕ ಸಿಡಿಸಿ ಅಜೇಯರಾಗಿ ಕ್ರೀಸ್‌ನಲ್ಲಿದ್ದರು. ಅವರು 28 ಎಸೆತಗಳಲ್ಲಿ 7 ಬೌಂಡರಿ ಸಹಿತ 50 ರನ್ ಗಿಡಿಸಿದ್ದರು. ಪ್ರಿಯಾಂಶ್ ಔಟಾಗುತ್ತಿದ್ದಂತೆ ಶ್ರೇಯಸ್ ಅಯ್ಯರ್ ಮೈದಾನಕ್ಕೆ ಇಳಿಯುತ್ತಿದ್ದಂತೆ ಭಾರತೀಯ ಸೇನೆ ಕಳುಹಿಸಿದ ಆದೇಶದ ಮೇರೆಗೆ ಪಂದ್ಯವನ್ನು ರದ್ದುಗೊಳಿಸಲಾಯಿತು.

## ಪಂಜಾಬ್-ಡೆಲ್ಲಿಗೆ ತಲಾ ಒಂದು ಅಂಕ

ಪಂದ್ಯವನ್ನು 9.29ರ ಸುಮಾರಿಗೆ ರದ್ದುಪಡಿಸಲಾಯಿತು. ಇದೀಗ ರದ್ದಾದ ಕಾರಣ ಪಂಜಾಬ್ ಮತ್ತು ಡೆಲ್ಲಿ ತಂಡಗಳಿಗೆ ತಲಾ ಒಂದೊಂದು ಅಂಕವನ್ನು ನೀಡಲಾಗಿದೆ. ಯುದ್ಧೋನ್ಮಾದ ಹೆಚ್ಚಾದ ಕಾರಣ ಉತ್ತರ ಭಾರತದಲ್ಲಿ ನಡೆಯಲಿರುವ ಪಂದ್ಯಗಳನ್ನು ದಕ್ಷಿಣ ಭಾರತಕ್ಕೆ ಸ್ಥಳಾಂತರಿಸುವ ಸಾಧ್ಯತೆ ಇದೆ. ಇದಕ್ಕೆ ಸಂಬಂಧಿಸಿ ಐಪಿಎಲ್ ಆಡಳಿತ ಮಂಡಳಿ ತುರ್ತು ಸಭೆ ಕರೆದಿ ದ್ದು, ಈ ಸೀಸನ್‌ನ ಮುಂಬರುವ ಪಂದ್ಯಗಳ ಕುರಿತು ನಿರ್ಧಾರ ತೆಗೆದುಕೊಳ್ಳಲಿದೆ ಎಂದು ವರದಿಯಾಗಿದೆ.

## ಜಮ್ಮು ಕಾಶ್ಮೀರದಲ್ಲಿ ಯುದ್ಧದ ವಾತಾವರಣ

ಭಾರತದ ಮೇಲೆ ಪ್ರತೀಕಾರ ತೀರಿಸಿಕೊಳ್ಳುವ ಲೆಕ್ಕಾಚಾರದಲ್ಲಿ ಕ್ಷಿಪಣಿ ದಾಳಿ ನಡೆಸಿದೆ. ಆದರೆ ಇದೆಲ್ಲವನ್ನೂ ಭಾರತೀಯ ಸೇನೆ ಹೊಡೆದುರುಳಿಸಿದೆ. ಭಾರತೀಯ ಸೇನೆ ಇಂದು ಪಾಕಿಸ್ತಾನದ ಹಲವು ಕಡೆ ಡ್ರೋನ್ ದಾಳಿ ನಡೆಸಿತ್ತು.

ಇದಕ್ಕೆ ಪ್ರತ್ಯುತ್ತರವಾಗಿ ವಾಕಿಸ್ತಾನ ಸಹ ಭಾರತದ ಹಲವು ನಗರಗಳ ಮೇಲೆ ಡ್ರೋನ್ ದಾಳಿ ಮಾಡಿದೆ. ಉಧಂಪುರ, ಜಮ್ಮು, ಪಠಾಣ್‌ಕೋಟ್, ಅನ್ನಿರ್ ಮತ್ತು ಕಥುವಾಗಳಲ್ಲಿ ಪಾಕಿಸ್ತಾನ ಡ್ರೋನ್ ಮತ್ತು ಕ್ಷಿಪಣಿ ದಾಳಿಗಳನ್ನು ನಡೆಸಿತ್ತಾದರೂ ಭಾರತ ಅವುಗಳನ್ನು ಹೊಡೆದು ಉರುಳಿಸುವಲ್ಲಿ ಯಶಸ್ವಿಯಾಗಿದೆ. ಹಾಗೆಯೇ ಗಡಿ ಭಾಗದ ರಾಜ್ಯಗಳಾದ ರಾಜಸ್ಥಾನ-ಪಂಜಾಬ್‌ನ ಪ್ರಮುಖ ನಗರಗಳ ಮೇಲೆಯೂ ಕ್ಷಿಪಣಿ ಮತ್ತು ಡ್ರೋನ್‌ಗಳನ್ನು ಪಾಕಿಸ್ತಾನ ಹಾರಿಸಿದೆ ಎಂದು ವರದಿಯಾಗಿದೆ.